ಸಂಪುಟ: 04 ಸಂಚಿಕೆ: 77 ಪುಟಗಳು: 08 ಶುಕ್ರವಾರ 31 ಮೇ 2024
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

ಮುಂಜಾನೆ ಮಾತು
ನಿಮ್ಮ ಮೊದಲ ಗೆಲುವಿನ ನಂತರ ವಿಶ್ರಾಂತಿ ತೆಗೆದುಕೊಳ್ಳಬೇಡಿ. ಏಕೆಂದರೆ ನೀವು ಎರಡನೇ ಪ್ರಯತ್ನದಲ್ಲಿ ವಿಫಲರಾದರೆ ನಿಮ್ಮ ಮೊದಲ ಗೆಲುವು ಕೇವಲ ಅದೃಷ್ಟವೆಂದು ಹೀಯಾಳಿಸಲು ಬಹಳಷ್ಟು ತುಟಿಗಳು ಕಾಯುತ್ತಿರುತ್ತವೆ

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ನಿಷ್ಪಕ್ಷಪಾತ ತನಿಖೆಗೆ ಅವಕಾಶ ಮಾಡಿಕೊಡಬೇಕು - ಕಾರಜೋಳ

• ಉದಯವಾಹಿನಿ, ಬೆಂಗಳೂರು

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣಕ್ಕೆ ಸಂಬಂಧಿಸಿ ಇಲಾಖಾ ಸಚಿವ ನಾಗೇಂದ್ರ ಅವರು ಕೂಡಲೇ ರಾಜೀನಾಮೆ ಕೊಟ್ಟು ನಿಷ್ಪಕ್ಷಪಾತ ತನಿಖೆಗೆ ಅವಕಾಶ ಮಾಡಿಕೊಡಬೇಕು ಎಂದು ಮಾಜಿ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ ಆಗ್ರಹಿಸಿದರು. ರಾಜ್ಯ ಸರ್ಕಾರದ ತನಿಖಾ ಸಂಸ್ಥೆಗಳಿಂದ ಇದರ ಸಮಗ್ರ ನಿಷ್ಪಕ್ಷಪಾತ ತನಿಖೆ ಮಾಡಲು ಅಸಾಧ್ಯ.

ಆದ್ದರಿಂದ ಕೇಂದ್ರ ಸರ್ಕಾರದ ಏಜೆನ್ಸಿಗಳ ಮೂಲಕ ತನಿಖೆ ನಡೆಸಿ ಎಂದು ಒತ್ತಾಯಿಸಿದರು. ಆತ್ಮಹತ್ಯೆ ಮಾಡಿಕೊಂಡ ಚಂದ್ರಶೇಖರ್ ಅವರು ಮಂತ್ರಿಗಳ ಮೌಖಿಕ ಆದೇಶದನ್ವಯ ಹಣ ವರ್ಗಾವಣೆ ಮಾಡಿದ್ದಾಗಿ ಬರೆದಿದ್ದಾರೆ.

ಹಾಗಾದರೆ ಎಫ್‌ಐಆರ್‌ನಲ್ಲಿ ಸಚಿವರ ಹೆಸರು ಯಾಕೆ ಬಂದಿಲ್ಲ ಎಂದು ಪ್ರಶ್ನಿಸಿದರು. ಇದು ಸಂಶಯಕ್ಕೆ ಎಡೆ ಮಾಡಿಕೊಟ್ಟಿದೆ ಎಂದರು. ಸರ್ಕಾರದ ಅಧೀನ ಸಂಸ್ಥೆಯಾದ ಸಿಐಡಿಯವರು ಮುಖ್ಯಮಂತ್ರಿಗಳು, ಸಚಿವರ ಬಗ್ಗೆ ತನಿಖೆ ಮಾಡಲು ಎಷ್ಟರಮಟ್ಟಿಗೆ ಸಾಧ್ಯ ಎಂದ ಅವರು, ನೈತಿಕತೆ ಇದ್ದರೆ ಸಚಿವರು ರಾಜೀನಾಮೆ ಕೊಡಬೇಕಿತ್ತು ಎಂದು ಕಿಡಿ ಕಾರಿದರು.

ಹೇರ್ ಸ್ಟೈಲ್ ವಾರ್‌ಗೆ ಪ್ರದೀಪ್ ಈಶ್ವರ್ ಎಂಟ್ರಿ! ಶಾಸಕ ಹೇಳಿದ್ದೇನು

• ಉದಯವಾಹಿನಿ, ಬೆಂಗಳೂರು

ವಿಜಯೇಂದ್ರ ತಲೆಯಲ್ಲಿ ಕಂಟೆಂಟ್ ಇಲ್ಲ. ವಿಚಾರಗಳ ಮೇಲೆ ಮಾತನಾಡೋಕೆ ಆಗಲ್ಲ. ಅವರ ತಲೆಯಲ್ಲಿರೋದೆಲ್ಲ ಮುಗಿದು ಹೋಗಿದೆ. ಅದಕ್ಕೆ ವೈಯುಕ್ತಿಕ ವಿಷಯ ಮಾತನಾಡುತ್ತಿದ್ದಾರೆ ಎಂದು ಶಾಸಕ ಪ್ರದೀಪ್ ಈಶ್ವರ್ ವಾಗ್ದಾಳಿ ನಡೆಸಿದ್ದಾರೆ. ಕೆಪಿಸಿಸಿ ಕಚೇರಿಯಲ್ಲಿ ಪತ್ರಿಕಾಗೋಷ್ಠಿ ನಡೆಸಿದ ಅವರು, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಇಶ್ಯೂ ಬಿಟ್ಟಿದ್ದಾರೆ. ಮಧುಬಂಗಾರಪ್ಪ ಹೇರ್‌ಸ್ಟೈಲ್ ಬಗ್ಗೆ ಮಾತನಾಡುತ್ತಾರೆ. ನಾನು ನಾಲ್ಕು ಪ್ರಶ್ನೆ ಕೇಳುತ್ತೇನೆ. ಹೇರ್‌ಸ್ಟೈಲ್ ಬಗ್ಗೆ ಮಾತನಾಡುತ್ತೀರಲ್ಲ ಸರಿನಾ ನಿಮಗೆ ಜ್ಞಾನದ ಕೊರತೆ ಇರಬಹುದು. ಇಲ್ಲ ನಿಮಗೆ ಸಲಹೆ ಕೊಡುವುದು ತಪ್ಪಿರಬಹುದು. ಶಿವಮೊಗ್ಗ ಎಂದರೆ ಬಂಗಾರಪ್ಪ, ಯಡಿಯೂರಪ್ಪ ಇಬ್ಬರ ಹೆಸರು ಮುಖ್ಯ. ಶಿಕ್ಷಣ ಕ್ಷೇತ್ರದಲ್ಲಿ ಬದಲಾವಣೆ ತಂದಿದ್ದಾರೆ. ಮಕ್ಕಳಿಗೆ ಮೂರು ಅವಕಾಶ ಕೊಟ್ಟಿದ್ದಾರೆ. ಆ ವಿಚಾರಗಳ ಬಗ್ಗೆ ನೀವು ಮಾತನಾಡಿ. ಅದು ಬಿಟ್ಟು ಹೇರ್ ಸ್ಟೈಲ್ ಬಗ್ಗೆ ಮಾತನಾಡುತ್ತೀರಲ್ಲ ಎಂದು ಹರಿಹಾಯ್ದರು.

ಏರ್‌ಪೋರ್ಟ್‌ನಲ್ಲೇ ಪ್ರಜ್ವಲ್‌ನ ವಶಕ್ಕೆ ಪಡೆಯುತ್ತೇವೆ: ಸಚಿವ

• ಉದಯವಾಹಿನಿ, ಬೆಂಗಳೂರು

ಪ್ರಜ್ವಲ್‌ರನ್ನು ಏರ್‌ಪೋರ್ಟ್‌ನಲ್ಲೇ ವಶಕ್ಕೆ ಪಡೆಯಲು ಈಗಾಗಲೇ ವಾರೆಂಟ್ ಜಾರಿಯಾಗಿದೆ ಎಂದು ಗೃಹ ಸಚಿವ ಜಿ.ಪರಮೇಶ್ವರ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಜ್ವಲ್‌ರನ್ನು ಏರ್‌ಪೋರ್ಟ್‌ನಲ್ಲೇ ವಶಕ್ಕೆ ಪಡೆಯಲು ಹೇಳಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಜ್ವಲ್‌ರನ್ನು ಏರ್‌ಪೋರ್ಟ್‌ನಲ್ಲೇ ವಶಕ್ಕೆ ಪಡೆಯಲು ಈಗಾಗಲೇ ವಾರೆಂಟ್ ಜಾರಿಯಾಗಿದೆ. ಪ್ರಜ್ವಲ್ ವಾಪಸ್ ಆಗುವ ಹಿನ್ನೆಲೆಯಲ್ಲಿ ಎಸ್‌ಐಟಿ ಎಲ್ಲಾ ತಯಾರಿ ಮಾಡಿಕೊಂಡಿದೆ. ಬೇರೆ ದೇಶಕ್ಕೆ ಹೋಗಿ ನಾವು ಅರೆಸ್ಟ್ ಮಾಡುವಂತಿಲ್ಲ. ಆ ರೀತಿ ಮಾಡಲು ಬರಲ್ಲ. ಕೇಂದ್ರ ಸರ್ಕಾರ ಕೂಡ ಯಾರನ್ನಾದರೂ ಕಳುಹಿಸಿ ಅರೆಸ್ಟ್ ಮಾಡಲು ಆಗಲ್ಲ. ಇಂಟರ್ ಪೋಲ್ ಕೂಡ ಇರೋದೆ ಅದಕ್ಕಾಗಿ. ನೆಲಮಂಗಲಕ್ಕೆ ಹೋಗಿ ಬಂಧನ ಮಾಡಿಕೊಂಡು ಬಂದಂಗೆ ಅಲ್ಲ. ಕಾನೂನು ಪ್ರಕಾರ ವಾರೆಂಟ್ ಜಾರಿಯಾಗಿದೆ. ಅದರಂತೆ ಏರ್‌ಪೋರ್ಟ್ ನಲ್ಲೇ ಬಂಧನವಾಗಬೇಕು. ಬಂಧನಕ್ಕೆ ಅದರದ್ದೇ ಆದ ಪ್ರಕ್ರಿಯೆ ಇದೆ ಎಂದು ಅವರು ಹೇಳಿದ್ದಾರೆ. ಇನ್ನೂ ಪಾಸ್‌ಪೋರ್ಟ್ ರದ್ದತಿಗೆ ಕೇಂದ್ರಕ್ಕೆ ಪತ್ರ ಬರೆದಿದ್ದೇವೆ ಎಂದರು.

ಈಶ್ವರಪ್ಪ ಪ್ರಕರಣವೇ ಬೇರೆ, ಇದು ಬೇರೆ: ಹೋಲಿಕೆ ಸರಿಯಲ್ಲ

• ಉದಯವಾಹಿನಿ, ಬೆಂಗಳೂರು

ಚಂದ್ರಶೇಖರನ್ ಒಬ್ಬ ಒಳ್ಳೆಯ ಅಧಿಕಾರಿ. ಅವರ ಆತ್ಮಹತ್ಯೆಯಿಂದ ತುಂಬ ಬೇಸರವಾಗಿದೆ. ಡೆತ್ ನೋಟ್‌ನಲ್ಲಿ ಕೆಲವು ಆರೋಪಗಳನ್ನು ಮಾಡಿದ್ದಾರೆ. ಪ್ರಕರಣವನ್ನು ಸರ್ಕಾರ ಕೂಡಲೇ ತನಿಖೆಗೆ ಒಪ್ಪಿಸಿದೆ. ಎಲ್ಲಾ ಆಯಾಮಗಳಲ್ಲೂ ತನಿಖೆ ನಡೆಯುತ್ತದೆ. ಆ ಬಳಿಕ ಸತ್ಯಾಸತ್ಯತೆ ಹೊರಬರಲಿದೆ. ಇಲ್ಲಿ ದಲಿತರು ದಲಿತೇತರ ಹಣ ಅಂತಲ್ಲ. ಅದು ಸರ್ಕಾರದ ಹಣ. ಅಂತೆ ಕಂತೆಗಳ ಮೇಲೆ ಮಾತನಾಡಲು ಆಗಲ್ಲ. ಈಶ್ವರಪ್ಪ ಪ್ರಕರಣವೇ ಬೇರೆ, ಇದು ಬೇರೆ. ಅದಕ್ಕೂ ಇದಕ್ಕೂ ಹೋಲಿಕೆ ಸರಿಯಲ್ಲ. ವಿರೋಧ ಪಕ್ಷದವರು ರಾಜೀನಾಮೆ ಕೇಳ್ತಾರೆ. ಸತ್ಯಾಸತ್ಯತೆ ಹೊರಗಡೆ ಬರಲಿ. ಆ ನಂತರ ಸರ್ಕಾರ ತೀರ್ಮಾನ ಮಾಡುತ್ತದೆ ಸಚಿವ ಹೆಚ್.ಸಿ.ಮಹದೇವಪ್ಪ ಎಂದು ಹೇಳಿದರು. ಸರ್ಕಾರ ಪಿತೂರಿ ನಡೆಸುತ್ತಿದೆ ಎಂಬ ಪ್ರಜ್ವಲ್ ರೇವಣ್ಣ ಆರೋಪಕ್ಕೆ ಪ್ರತಿಕ್ರಿಯಿಸುತ್ತಾ, ಪಿತೂರಿ ಪ್ರಶ್ನೆಯೇ ಬರುವುದಿಲ್ಲ. ಅವರೇ ಎಲ್ಲಾವನ್ನೂ ಮಾಡಿರೋದು. ಹಾಗಿದ್ದಾಗ ಪಿತೂರಿ ಪ್ರಶ್ನೆ ಯಾಕೆ ಬರುತ್ತೆ ಎಂದು ತಿಳಿಸಿದರು.

ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ದಲಿತರ ಹಣವನ್ನು ಕಾಂಗ್ರೇಸ್ ಸರ್ಕಾರ ಲೂಟಿ ಮಾಡಿದೆ. ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವ ಬಿ.ನಾಗೇಂದ್ರ ಜೂನ್ 6 ರೊಳಗೆ ರಾಜೀನಾಮೆ ನೀಡದಿದ್ದರೆ ರಾಜ್ಯಾದ್ಯಂತ ಪ್ರತಿಭಟಿಸಲಾಗುವುದು ಎಂದು ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್.ಅಶೋಕ ಎಚ್ಚರಿಕೆ ನೀಡಿದ್ದಾರೆ. ದಲಿತರ ಹಣ ನುಂಗಿದ ಕಾಂಗ್ರೇಸ್ ಎಂಬ ಬ್ಯಾನರ್ ಅಡಿಯಲ್ಲಿ ರಾಜ್ಯಾದ್ಯಂತ ಪ್ರತಿಭಟನೆ ಮಾಡಲಾಗುವುದು. ದಲಿತರ ಹಣವನ್ನು ಟಕಾಟಕ್ ಎಂದು ಲೂಟಿ ಮಾಡಿದ ಕಾಂಗ್ರೇಸ್ ಸರ್ಕಾರವನ್ನು ಟಕಾಟಕ್ ಎಂದೇ ಅಧಿಕಾರದಿಂದ ಕೆಳಕ್ಕಿಳಿಸುವ ದಿನ ದೂರವಿಲ್ಲ. ಈ ಹೋರಾಟವನ್ನು ತಾರ್ಕಿಕ ಅಂತ್ಯಕ್ಕೆ ತೆಗೆದುಕೊಂಡು ಹೋಗುತ್ತೇವೆ ಎಂದರು. ಪರಿಶಿಷ್ಟ ಪಂಗಡದ 187 ಕೋಟಿ ರೂ. ಹಣವನ್ನು ಗುಳುಂ ಮಾಡಿದ್ದೇ ಕಾಂಗ್ರೇಸ್ ಸರ್ಕಾರದ ಸಾಧನೆ. ಚುನಾವಣೆಗೆ ಮುನ್ನ ದಲಿತರ ಉದ್ಧಾರ ಎಂದು ಕಾಂಗ್ರೇಸ್ ಹೇಳುತ್ತಿತ್ತು. ನಂತರ ದಲಿತರನ್ನು ಶೋಷಣೆ ಮಾಡಿದೆ. ರಾಮನ ಹೆಸರು ಕಂಡರೆ ಆಗದ ಕಾಂಗ್ರೇಸ್ ವಾಲ್ಮೀಕಿ ಹೆಸರಿನ ನಿಗಮವನ್ನೂ ಕಂಡರೆ ಆಗುವುದಿಲ್ಲ. ಹೆಣ್ಣುಮಕ್ಕಳಿಗೆ ಸುರಕ್ಷತೆ ಗ್ಯಾರಂಟಿ ಇಲ್ಲವೆಂದು ಗೊತ್ತಿತ್ತು. ಈಗ ಅಧಿಕಾರಿಗಳಿಗೂ ಗ್ಯಾರಂಟಿ ಇಲ್ಲ ಎಂದರು.

ರಾಜ್ಯ ಸರ್ಕಾರದ ಮೊದಲ ವಿಕೆಟ್ ಪತನ..? ಸಚಿವ ಬಿ. ನಾಗೇಂದ್ರ ತಲೆದಂಡ ಸಾಧ್ಯತೆ, ದಿಲ್ಲಿಯಲ್ಲಿ ಸಿಎಂ, ಡಿಸಿಎಂ ಚರ್ಚೆ

ಜೂ.6ರೊಳಗೆ ಬಿ.ನಾಗೇಂದ್ರ ರಾಜೀನಾಮೆ ನೀಡಬೇಕು, ಇಲ್ಲದಿದ್ದರೆ ರಾಜ್ಯಾದ್ಯಂತ ಹೋರಾಟ: ಅಶೋಕ ಎಚ್ಚರಿಕೆ

ಕಮಲ ಕೆಂಡ ನಾಗೇಂದ್ರ ತಲೆದಂಡ

ಏನಿದು ಪ್ರಕರಣ..?

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿ ಖಾತೆಗಳ ಅಧೀಕ್ಷಕರಾಗಿದ್ದ ಪಿ ಚಂದ್ರಶೇಖರ್ ಆತ್ಮಹತ್ಯೆ

ಮಾಡಿಕೊಂಡಿದ್ದಾರೆ. ಅವರ ಆತ್ಮಹತ್ಯೆ ಬಳಿಕ ನಿಗಮದಲ್ಲಿ 87 ಕೋಟಿ ರೂ. ಗಳ ಹಗರಣ ಬಯಲಿಗೆ ಬಂದಿದೆ. ಪಿ ಚಂದ್ರಶೇಖರ್ ಅವರ ಡೆತ್ ನೋಟ್ ಕೂಡ ಸಿಕ್ಕಿದ್ದು, ಅದರಲ್ಲಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಜೆಜಿ ಪದ್ಮನಾಭ್, ಅಕೌಂಟ್ಸ್ ಆಫೀಸರ್ ಪರಶುರಾಮ್ ದುರುಗಣ್ಣನವರ್ ಮತ್ತು ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದ ಮುಖ್ಯ ವ್ಯವಸ್ಥಾಪಕಿ ಸುಚಿಸ್ಮಿತಾ ರಾವಲ್ ಅವರ ಹೆಸರು ಡೆತ್ ನೋಟ್‌ನಲ್ಲಿದೆ. ಅದಲ್ಲದೇ ಹಣವನ್ನು ವರ್ಗಾಯಿಸಲು ಸಚಿವರು ಮೌಖಿಕ ಆದೇಶವನ್ನು ನೀಡಿದ್ದಾರೆ ಎಂದು ಕೂಡ ಡೆತ್ ನೋಟ್‌ನಲ್ಲಿ ಹೇಳಲಾಗಿದೆ.

• ಉದಯವಾಹಿನಿ, ಬೆಂಗಳೂರು

ಹಣ ವರ್ಗಾಯಿಸಲು ಸಚಿವರು ಮೌಖಿಕವಾಗಿ ಸೂಚಿಸಿದ್ದಾರೆ ಎಂದು ಆತ್ಮಹತ್ಯೆ ಮಾಡಿಕೊಂಡ ಅಧಿಕಾರಿ ಚಂದ್ರಶೇಖರನ್ ಪತ್ರದಲ್ಲಿ ತಿಳಿಸಿದ್ದಾರೆ. ಜಿ.ಪದ್ಮನಾಭ್, ಸುಜಾ ಮೊದಲಾದ ಅಧಿಕಾರಿಗಳ ಹೆಸರನ್ನೂ ಉಲ್ಲೇಖಿಸಿದ್ದಾರೆ. ಈ ಪತ್ರದಲ್ಲಿ ಹಗರಣದ ಸಂಪೂರ್ಣ ವಿವರವನ್ನು ದಾಖಲೆಯೊಂದಿಗೆ ತಿಳಿಸಿದ್ದಾರೆ ಎಂದು ಹೇಳಿದರು.

ಮಹಿಳೆಯರ ಖಾತೆಗೆ ಟಕಾಟಕ್ ಎಂದು ಹಣ ಹಾಕುತ್ತೇವೆ ಎಂದು ರಾಹುಲ್ ಗಾಂಧಿ ಹೇಳಿದ್ದಾರೆ. ನಿಗಮದಿಂದ ಆಗಾಗ್ಗೆ ಕೋಟ್ಯಂತರ ರೂಪಾಯಿ ಟಕಾಟಕ್ ಆಗಿ ಕಾಂಗ್ರೇಸ್‌ನ ಲೂಟಿ ಖಾತೆಗೆ ವರ್ಗಾವಣೆಯಾಗಿದೆ. 25 ಸಾವಿರ ಕೋಟಿ ರೂ. ದಲಿತರ ಹಣ ಟಕಾಟಕ್ ಎಂದು ಕಾಣೆಯಾಗಿದೆ. ಬಿತ್ತನೆ ಬೀಜಗಳ ದರ ಟಕಾಟಕ್ ಎಂದು ಏರಿಕೆಯಾಗಿದೆ. ಭಯೋತ್ಪಾದನೆ ಟಕಾಟಕ್ ಎಂದು ಮೇಲೆದ್ದಿದೆ ಎಂದರು.

ಬೇರೆ ಇಲಾಖೆಗಳಲ್ಲೂ ಇದೇ ರೀತಿ ಅಕ್ರಮ ನಡೆದಿರುವ ಶಂಕೆ ಇದೆ. ಈ ರೀತಿ ಅವ್ಯವಹಾರ ನಡೆಸಿದ ಹಣವನ್ನು ಲೋಕಸಭಾ ಚುನಾವಣೆಯಲ್ಲಿ ಬಳಕೆ ಮಾಡಲಾಗಿದೆ. ಅಂತಾರಾಜ್ಯ ಮಟ್ಟದಲ್ಲಿ ಹಣಕಾಸು ವ್ಯವಹಾರ ನಡೆದಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ ವಿಜಯೇಂದ್ರ ಆರೋಪ ಮಾಡಿದರು. ಮೃತ ಚಂದ್ರಶೇಖರನ್ ಕುಟುಂಬಕ್ಕೆ 25 ಲಕ್ಷ ರೂ. ಪರಿಹಾರ ನೀಡಬೇಕು. ಜತೆಗೆ, ಎಲ್ಲಿಲ್ಲಿ ಹಣಕಾಸು ವ್ಯವಹಾರ ನಡೆದಿದೆ ಎಂಬ ಬಗ್ಗೆ ತನಿಖೆ ಆಗಬೇಕು. ಪ್ರಕರಣವನ್ನು ಸಿಬಿಐಗೆ ನೀಡಿದಾಗ ಮಾತ್ರ ಸತ್ಯ ಹೊರಬರಲಿದೆ ಎಂದರು. ಇದಕ್ಕೂ ಮುನ್ನ ಆತ್ಮಹತ್ಯೆ ಮಾಡಿಕೊಂಡ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧಿಕಾರಿ ಚಂದ್ರಶೇಖರ್ ಅವರ ಮನೆಗೆ ಭೇಟಿ ನೀಡಿದ ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ಕುಟುಂಬದವರಿಗೆ ಧೈರ್ಯ ತುಂಬಿದರು.

ಕುಟುಂಬಕ್ಕೆ ಸಾಂತ್ವನ ಹೇಳಿದ ಅವರು, ಮಕ್ಕಳ ಭವಿಷ್ಯವನ್ನು ದೃಷ್ಟಿಯಲ್ಲಿಟ್ಟು ಧೈರ್ಯ ವಹಿಸುವಂತೆ ತಿಳಿಸಿದರು. ಲ್ಯಾಪ್‌ಟಾಪ್ ಮತ್ತಿತರ ವಸ್ತುಗಳನ್ನು ಒಯ್ದು ಕುರಿತು ಕುಟುಂಬದವರು ಮಾಹಿತಿ ನೀಡಿದರು. ಮನೆಯಲ್ಲಿರುವ ಸಾಕ್ಷವಸ್ತುಗಳನ್ನು ತೆಗೆದುಕೊಂಡು ಹೋಗಲು ಅಧಿ ಕಾರಿಗಳು ತರಾತುರಿಯಲ್ಲಿ ಬಂದಿದ್ದಾರೆ ಎಂದು ವಿಜಯೇಂದ್ರ ಅವರು ಆಕ್ಷೇಪಿಸಿದರು. ಶಿವಮೊಗ್ಗದ ವಿನೋಬ ನಗರದ ಕೆಂಚಪ್ಪ ಲೇಔಟ್‌ನಲ್ಲಿರುವ ಮನೆಯಲ್ಲಿ ಡೆತ್‌ನೋಟ್ ಬರೆದಿಟ್ಟು ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧೀಕ್ಷಕ ಚಂದ್ರಶೇಖರ್ (52) ಆತ್ಮಹತ್ಯೆಗೆ ಶರಣಾಗಿದ್ದರು. ಸಿದ್ದರಾಮಯ್ಯ ನೇತೃತ್ವದ ಕಾಂಗ್ರೇಸ್ ಸರ್ಕಾರದ ಮೊದಲ ವಿಕೆಟ್ ಪತನಕ್ಕೆ ಕ್ಷಣಗಣನೆ ಶುರುವಾಗಿದೆ. ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದಲ್ಲಿ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವ ಬಿ ನಾಗೇಂದ್ರ ಅವರ ತಲೆದಂಡ ಆಗುವ ಸಾಧ್ಯತೆ ನಿಚ್ಚಳವಾಗಿದೆ. ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧಿಕಾರಿ ಚಂದ್ರಶೇಖರ್ ಆತ್ಮಹತ್ಯೆ ಬೆನ್ನಲ್ಲೇ ಪ್ರತಿಪಕ್ಷಗಳು ಸಚಿವರ ರಾಜೀನಾಮೆಗೆ ಆಗ್ರಹಿಸುತ್ತಿವೆ. ಈ ಹಿನ್ನೆಲೆ ಸರ್ಕಾರದ ಮೇಲೆ ಒತ್ತಡ ಸೃಷ್ಟಿಯಾಗಿದ್ದು, ಮುಖ್ಯಮಂತ್ರಿಗಳು ನಾಗೇಂದ್ರ ರಾಜೀನಾಮೆ ಪಡೆಯುವ ಸಾಧ್ಯತೆ ಹೆಚ್ಚಿದೆ. ವಿಧಾನ ಪರಿಷತ್ ಚುನಾವಣೆಗೆ ಅಭ್ಯರ್ಥಿಗಳ ಆಯ್ಕೆ ವಿಚಾರವಾಗಿ ದಿಲ್ಲಿಗೆ ತೆರಳಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಅವರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಜೊತೆ ಈ ಬಗ್ಗೆ ಚರ್ಚೆ ನಡೆಸಿದ್ದಾರೆ. ಅಧಿಕಾರಿಯ ಆತ್ಮಹತ್ಯೆ ಹಾಗೂ ಸಂಭವನೀಯ ಪರಿಣಾಮಗಳ ಬಗ್ಗೆ ಮಾತುಕತೆ ನಡೆಸಿದ್ದಾರೆ ಎಂದು ಮೂಲಗಳು ತಿಳಿಸಿವೆ. ಪ್ರಕರಣವನ್ನು ಈಗಾಗಲೇ ಸಿಐಡಿ ತನಿಖೆಗೆ ನೀಡಲಾಗಿದ್ದು, ಒಂದು ಅಥವಾ ಎರಡು ದಿನದಲ್ಲಿ ಅಂತಿಮ ನಿರ್ಧಾರವನ್ನು ಸಿಎಂ ತೆಗೆದುಕೊಳ್ಳುವ ನಿರೀಕ್ಷೆ ಇದೆ.

1 ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ದಲಿತರ ಹಣವನ್ನು ರಾಜ್ಯ ಸರ್ಕಾರ ಲೂಟಿ ಮಾಡಿದೆ ಎಂದು ಬಿಜೆಪಿ ಆರೋಪ

2 ಜೂನ್ 6ರೊಳಗೆ ಬಿ.ನಾಗೇಂದ್ರ ರಾಜೀನಾಮೆ ನೀಡಬೇಕು, ಇಲ್ಲದಿದ್ದರೆ ರಾಜ್ಯಾದ್ಯಂತ ಹೋರಾಟ ನಡೆಸುವುದಾಗಿ ಎಚ್ಚರಿಕೆ.

3 ಪರಿಶಿಷ್ಟ ಪಂಗಡದ 187 ಕೋಟಿ ರೂ. ಹಣ ಗುಳುಂ ಮಾಡಿದ್ದೇ ಕಾಂಗ್ರೇಸ್ ಸರ್ಕಾರದ ಸಾಧನೆ.

4 ಕಾಂಗ್ರೇಸ್‌ಗೆ ವಾಲ್ಮೀಕಿ ಹೆಸರಿನ ನಿಗಮವನ್ನೂ ಕಂಡರೆ ಆಗುವುದಿಲ್ಲ

ಕೊಲೆ ಪ್ರಕರಣ ದಾಖಲಿಸಿ

ಹಿಂದೆ ಈಶ್ವರಪ್ಪನವರ ಮೇಲೆ ಆರೋಪ ಬಂದಾಗ ಸುರ್ಜೇವಾಲ ಪ್ರಶ್ನೆ ಕೇಳಿದ್ದರು. ಹಾಗೆಯೇ ಸಿಎಂ ಅವರಂತೂ ಸೆಕ್ಷನ್ 302 ಅಡಿ ಪ್ರಕರಣ ದಾಖಲಿಸಬೇಕೆಂದು ಆಗ್ರಹಿಸಿದ್ದರು. ಈಗ ಡೆತ್‌ನೋಟ್‌ನಲ್ಲಿ ಸಚಿವರ ಹೆಸರಿದ್ದರೂ ಯಾವುದೇ ಕ್ರಮ ವಹಿಸಿಲ್ಲ. ಸಿಎಂಗೆ ಮಾನ ಮರ್ಯಾದೆ ಇಲ್ಲ. ಈಗಲೂ ಸಚಿವರ ವಿರುದ್ಧ ಕೊಲೆ ಪ್ರಕರಣ ದಾಖಲಿಸಲಿ ಎಂದು ಒತ್ತಾಯಿಸಿದರು. 20 ಕೋಟಿ ರೂ. ಹಣವನ್ನು ವಾಪಸ್ ನೀಡಲಾಗಿದೆ ಎಂದು ಸರ್ಕಾರ ಸ್ಪಷ್ಟನೆ ನೀಡುತ್ತಿದೆ. ಹಾಗೆಯೇ ಅಧಿಕಾರಿಯ ಪ್ರಾಣವನ್ನೂ ಮರಳಿ ತರಲಿ. ಒಬ್ಬ ಅಧಿಕಾರಿಯ ಪ್ರಾಣಕ್ಕೆ ಈ ಸರ್ಕಾರ ಬೆಲೆ ನೀಡುವುದಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಚಂದ್ರಶೇಖರನ್ ಮನೆಗೆ ವಿಜಯೇಂದ್ರ ಭೇಟಿ

**ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧೀಕ್ಷಕ ಚಂದ್ರಶೇಖರನ್ ಆತ್ಮಹತ್ಯೆ ಪ್ರಕರಣದ ತನಿಖೆನ್ನು ಸಿಬಿಐಗೆ ವಹಿಸಬೇಕು. ಸಚಿವ ನಾಗೇಂದ್ರ ರಾಜೀನಾಮೆ ನೀಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಗ್ರಹಿಸಿದ್ದಾರೆ. ನಮ್ಮ ಈ ಎರಡು ಬೇಡಿಕೆ ಈಡೇರಿಸಲು ಸರ್ಕಾರಕ್ಕೆ ಒಂದು ವಾರ ಗಡುವು ನೀಡುತ್ತೇವೆ. ಬೇಡಿಕೆ ಈಡೇರಿಸದಿದ್ದರೆ ಮುಂದಿನ ವಾರ ರಾಜ್ಯಾದ್ಯಂತ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಸಚಿವ ನಾಗೇಂದ್ರ ಗಮನಕ್ಕೆ ಬಾರದೇ ಈ ಅಕ್ರಮ ನಡೆದಿಲ್ಲ. ತೆಲಂಗಾಣ ರಾಜ್ಯದಲ್ಲಿ ಹಣಕಾಸಿನ ವರ್ಗಾವಣೆ ನಡೆದಿದೆ. ಲೋಕಸಭೆ ಚುನಾವಣೆ ಸಮಯದಲ್ಲಿ ಈ ಅವ್ಯವಹಾರ ನಡೆದಿದೆ. ಕಾಂಗ್ರೇಸ್ ಹೈಕಮಾಂಡ್ ರಾಜ್ಯ ಸರ್ಕಾರವನ್ನು ಎಟಿಎಂ ರೀತಿಯಲ್ಲಿ ಬಳಕೆ ಮಾಡಿಕೊಂಡಿದೆ. ನಾವು ಆರೋಪ

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

ನೆರೆ ಕೇಳು, ಕೇಳ್ದುದನರಿ

ನಿಜಗುಣರ ಪರಮಾನುಭವ ಬೋಧೆಯ ಮಾತು. ಮೆತ್ರೇಯಿ ಯ ಪ್ರಶ್ನೆಗೆ ಯಾಜ್ಞವಲ್ಕ್ಯರ ಉತ್ತರ: ನೀ ಪುಣ್ಯವತಿ , ನಿನ್ನಂತೆ ಅಧ್ಯಾತ್ಮ ಬಯಸುವವರೆಷ್ಟು ಜನ ! ನಿನಗೊಲಿದು ಹೇಳುವೇನು, ಕೇಳು. ಈ ಕಿವಿಯಿಂದ ಕೇಳಿ ಬಿಟ್ಟರಾಗದು. ಕೇಳುವಿಕೆಯಲ್ಲಿ ಮನ ಗಟ್ಟಿ ನಿಲ್ಲಬೇಕು. ನೆರೆ ಚೆನ್ನಾಗಿ ಮನಗೊಟ್ಟು ಕೇಳು! ವಿಷಯ ವಾಸನೆಯ ಚಂಚಲದ ಮಲಿನ ಮನ ನಿರ್ವಿಷಯ ಅಧ್ಯಾತ್ಮದತ್ತ ವಾಲದು. ಅದಕ್ಕಾಗಿ ಮನ ಹದಗೊಳಿಸಬೇಕು. ಮಣ್ಣಿನಿಂದ ಮಡಕೆಯಾಗುವುದು ನಿಜ, ಹಾಗೆಂದು ಕಚ್ಚಾ ಮಣ್ಣಿನಿಂದ ಮಡಕೆ ಮಾಡಲಾಗದು. ಹದವಾದ ಜಿಗಿಯುಳ್ಳ ಮಣ್ಣನ್ನು ಶೋಧಿಸಿ ಹದದಿಂದ ನೀರು ಬೆರೆಸಿ ಕಲಿಸಿ ನಾದಿದ ಬಳಿಕವಷ್ಟೇ ಆದರಿಂದ ಮಡಕೆ ಮಾಡಲು ಸಾಧ್ಯ. ಅದರಂತೆ, ಗುರು-ದೇವತಾ ಪೂಜೆ, ದಾನಧರ್ಮಾದಿ ಸತ್ಕರ್ಮಗಳಿಂದ, ಧ್ಯಾನ ಜಪ ತಪ ಯೋಗ ಮುಂತಾದ ಸಾಧನೆಗಳಿಂದ, ಇಂದ್ರಿಯ ನಿಗ್ರಹ ಸದಾಚಾರಗಳಿಂದ ಮನಸ್ಸನ್ನು ಪರಿಶುದ್ಧಗೊಳಿಸಬೇಕು. ಹೀಗೆ ಹದಗೊಂಡ ಮನಸ್ಸು ಅಧ್ಯಾತ್ಮವನ್ನು ಏಕಾಗ್ರತೆಯಿಂದ ಆಲಿಸಲು ಸಾಧ್ಯ. ಏಕಾಗ್ರತೆಯಿಂದ ಕೇಳಿದರಷ್ಟೇ ಸಾಲದು. ಕೇಳಿದುದ

ಮೆಟ್ರೋ ಕಾಮಗಾರಿಯಲ್ಲಿ ಬಿಎಂಆರ್‌ಸಿಎಲ್ ಸುರಂಗ ನಿರ್ಮಿಸಿ ಮತ್ತೊಂದು ಮೈಲಿಗಲ್ಲು

• ಉದಯವಾಹಿನಿ, ಬೆಂಗಳೂರು

ದೇಶದಲ್ಲೇ ಇದೇ ಮೊದಲು ಎನ್ನುವಂತೆ ನಮ್ಮ ಮೆಟ್ರೋ ಕಾಮಗಾರಿ ವೇಳೆಯಲ್ಲಿ ಬಿಎಂಆರ್ ಸಿಎಲ್ ಮಹತ್ವದ ಸಾಧನೆ ಮಾಡಿದೆ. ಅದೇ ಬಾಕ್ಸ್ ಆಕಾರದಲ್ಲಿ ಮೆಟ್ರೋ ಸುರಂಗ ಮಾರ್ಗ ಕಾಮಗಾರಿಯನ್ನು ಯಶಸ್ವಿಯಾಗಿ ನಡೆಸಿದ್ದಾಗಿದೆ. ಈ ಬಗ್ಗೆ ಬಿಎಂಆರ್ ಸಿಎಲ್ ಮಾಹಿತಿ ಹಂಚಿಕೊಂಡಿದ್ದು, ಹೊಸ ತಂತ್ರಜ್ಞಾನ ಬಳಸಿ ವೃತ್ತಾಕಾರದ ಮಾರ್ಗವಾಗಿ ಅಂಡರ್ ಗ್ರೌಂಡ್ ಕಾಮಾಗಿರಿ ಮಾಡಿ ಯಶಸ್ವಿಯಾಗಿದ್ದೆವು.ಈಗ ಬಾಕ್ಸ್ ಆಕಾರದಲ್ಲಿ ಕಾಮಾಗಿರಿ ಮಾಡಿ ಸಕ್ಸಸ್ ಆಗಿದ್ದೇವೆ ಅಂತ ಹೇಳಿದೆ. ಇದೇ ಮೊದಲ ಬಾರಿಗೆ ಬಿಎಂಆರ್ ಸಿಎಲ್ ಸುಮಾರು 77 ಮೀಟರ್ ಉದ್ದದ ಒಆರ್ ಆರ್ ನ ಕೆಳಗಿರುವ ಸುರಂಗ ಕಾಮಗಾರಿಗಾಗಿ ಬಾಕ್ಸ್ ಪುಷಿಂಗ್ ತಂತ್ರಜ್ಞಾನವನ್ನು ಬಳಸಿದೆ. ಇದನ್ನು ನಾಗವಾರ ಯುಜಿ ನಿಲ್ದಾಣದ ದಕ್ಷಿಣ ಭಾಗದಲ್ಲಿ ಸರ್ವಿಸ್ ರಸ್ತೆ ಮತ್ತು ಒಆರ್ ಆರ್‌ನ ಫ್ಲೈಓವರ್ ಕೆಳಗೆ ಮಾಡಲಾಗುತ್ತದೆ. ಕಾಮಗಾರಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಲಾಗಿದೆ ಎಂದಿದೆ.

ಸಚಿವ ನಾಗೇಂದ್ರ ರಾಜೀನಾಮೆ ಆಗ್ರಹಿಸಿ ಸಿಎಂ ನಿವಾಸ ಬಳಿ ಬಿಜೆಪಿ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಆಗಿರುವ 187 ಕೋಟಿ ರೂ. ಅವ್ಯವಹಾರದ ಹಿನ್ನೆಲೆಯಲ್ಲಿ ಸಚಿವ ನಾಗೇಂದ್ರ ರಾಜಿನಾಮೆ ನೀಡಬೇಕೆಂದು ಆಗ್ರಹಿಸಿ ಬಿಜೆಪಿ ಎಸ್.ಟಿ ಮೋರ್ಚಾ ವತಿಯಿಂದ ಮುಖ್ಯಮಂತ್ರಿಗಳ ಮನೆಗೆ ಮುತ್ತಿಗೆ ಹಾಕುವ

ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಧಿಕ್ಕಾರ ಧಿಕ್ಕಾರ, ಸಚಿವರಿಗೆ ಧಿಕ್ಕಾರ', 'ಸರಕಾರಕ್ಕೆ ಧಿಕ್ಕಾರ' ಎಂಬ ಘೋಷಣೆಗಳನ್ನು ಕೂಗಲಾಯಿತು. ಪೊಲೀಸರು ಈ ಸಂದರ್ಭದಲ್ಲಿ ಕಾರ್ಯಕರ್ತರನ್ನು ಬಂಧಿಸಿದರು. ಅಕ್ರಮವಾಗಿ ಅಮಾಯಕರಾದ ತಮ್ಮನ್ನು ಬಂಧಿಸಲಾಗುತ್ತಿದೆ ಎಂದು ಕಾರ್ಯಕರ್ತರು ಆಕ್ಷೇಪ ವ್ಯಕ್ತಪಡಿಸಿದರು.

ದಲಿತ ವಿರೋಧಿ ಕಾಂಗ್ರೇಸ್ ಸರಕಾರಕ್ಕೆ ಧಿಕ್ಕಾರ' ಕೂಗಿದ ಕಾರ್ಯಕರ್ತರು, ಅನ್ಯಾಯ, ಅನ್ಯಾಯ' ಎಂದು ಘೋಷಣೆ ಕೂಗಿದರು. ಸುಮಾರು 187 ಕೋಟಿ ರೂಪಾಯಿ ಅವ್ಯವಹಾರದ ಹಿನ್ನೆಲೆಯಲ್ಲಿ ನೊಂದು ಆತ್ಮಹತ್ಯೆ ಮಾಡಿಕೊಂಡ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧಿಕಾರಿ ಚಂದ್ರಶೇಖರ್ ಅವರು ಡೆತ್ ನೋಟಿನಲ್ಲಿ ಸಚಿವರ ಹೆಸರನ್ನು ಉಲ್ಲೇಖಿಸಿದ್ದು, ಸಚಿವರು ಕೂಡಲೇ ರಾಜೀನಾಮೆ ಕೊಡಬೇಕೆಂದು ಆಗ್ರಹಿಸಲಾಯಿತು.

ಜೂ.03 ರಂದು ಪದವೀಧರ ಮತದಾರರಿಗೆ ವಿಶೇಷ ಸಾಂದರ್ಭಿಕ ರಜೆ ಮಂಜೂರು

• ಉದಯವಾಹಿನಿ, ಬೆಂಗಳೂರು

ಜೂನ್ 03 ರಂದು ನಡೆಯುವ ವಿಧಾನ ಪರಿಷತ್ ಚುನಾವಣೆಗೆ ಮತದಾನಕ್ಕೆ ನೋಂದಣಿ ಮಾಡಿಕೊಂಡಿರುವ ಎಲ್ಲಾ ಪದವೀಧರ ಮತದಾರರಿಗೆ ಮತದಾನ ಮಾಡಲು ಜೂನ್ 03 ರಂದು ವಿಶೇಷ ಸಾಂದರ್ಭಿಕ ರಜೆ ಮಂಜೂರು ಮಾಡಿ ರಾಜ್ಯ ಸರ್ಕಾರವು ಅಧಿಸೂಚನೆ ಹೊರಡಿಸಿದೆ. ವಿಧಾನ ಪರಿಷತ್ ಮತ ಕ್ಷೇತ್ರಗಳಲ್ಲಿನ ಸರ್ಕಾರಿ, ಖಾಸಗಿ ಶಾಲಾ ಕಾಲೇಜುಗಳು, ಅನುದಾನಿತ ಹಾಗೂ ಅನುದಾನ ರಹಿತ ವಿದ್ಯಾ ಸಂಸ್ಥೆಗಳು, ಎಲ್ಲಾ ಶೈಕ್ಷಣಿಕ ಸಂಸ್ಥೆಗಳು, ರಾಜ್ಯ, ಕೇಂದ್ರ ಸರ್ಕಾರದ ಕಚೇರಿಗಳು, ರಾಷ್ಟ್ರೀಕೃತ, ಇತರೆ ಬ್ಯಾಂಕುಗಳು, ಕೇಂದ್ರ, ರಾಜ್ಯ ಸರ್ಕಾರದ ಕಾರ್ಖಾನೆಗಳು, ಉಳಿದ ಕೈಗಾರಿಕೆ ಸಂಸ್ಥೆಗಳು, ಸಹಕಾರ ರಂಗದ ಸಂಘ ಸಂಸ್ಥೆಗಳು, ವ್ಯವಹಾರಿಕ ಸಂಸ್ಥೆಗಳು, ಔದ್ಯಮಿಕ ಸಂಸ್ಥೆಗಳಲ್ಲಿ, ಇತರ ಎಸ್ಟಾಬ್ಲಿಷ್ ಮೆಂಟ್‌ಗಳಲ್ಲಿ ಖಾಯಂ ಆಗಿ ಅಥವಾ ದಿನಗೂಲಿ ಮೇಲೆ ಕೆಲಸ ನಿರ್ವಹಿಸುವ ಪದವೀಧರರು, ಶಿಕ್ಷಕರು ಮತದಾನ ಮಾಡಲು ಅನುಕೂಲವಾಗುವಂತೆ ಅರ್ಹ ಮತದಾರರಿಗೆ ಸೀಮಿತವಾದಂತೆ ಮತ ಚಲಾಯಿಸುವ ಮತದಾರರಿಗೆ ಜೂನ್ 03 ಸೋಮವಾರದಂದು ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡುವಂತೆ ಸಿಆಸು ಇಲಾಖೆಯ ಅಧೀನ ಕಾರ್ಯದರ್ಶಿ-1 ವಿಜಯ್ ಕುಮಾರ್ ಹೆಚ್.ಬಿ ಅವರು ಆದೇಶ ಹೊರಡಿಸಿದ್ದಾರೆ.

ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆ ರೈತರು ಹೆಸರು ನೋಂದಾಯಿಸಿ

• ಉದಯವಾಹಿನಿ, ಬೆಂಗಳೂರು

2024-25ನೇ ಸಾಲಿನಲ್ಲಿ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಗೆ ಹೆಸರು ನೋಂದಾಯಿಸಲು ಕರೆ ನೀಡಲಾಗಿದೆ. ಯೋಜನೆಗೆ ಹೆಸರು ನೋಂದಾಯಿಸಿದ ರೈತರಿಗೆ ಬೆಳೆ ನಷ್ಟವಾದರೆ ಪರಿಹಾರ ಸಿಗಲಿದೆ. ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯು 2024-25ನೇ ಸಾಲಿನಲ್ಲಿಯೂ ಜಾರಿಯಲ್ಲಿದೆ.ಅತಿವೃಷ್ಟಿ, ಅನಾವೃಷ್ಟಿ, ಅಕಾಲಿಕ ಮಳೆ ಮುಂತಾದ ಪ್ರಾಕೃತಿಕ ವಿಕೋಪ ಸೇರಿದಂತೆ ಹಲವಾರು ಕಾರಣಗಳಿಂದ ಬೆಳೆ ನಷ್ಟ ಉಂಟಾದಾಗ ರೈತರಿಗೆ ವಿಮಾ ರಕ್ಷಣೆ ಮತ್ತು ಆರ್ಥಿಕ ಬೆಂಬಲ ನೀಡುವುದು ಈ ಯೋಜನೆಯ ಉದ್ದೇಶ. ಯೋಜನೆಯಡಿ ರೈತರ ವಿಮಾ ಕಂತನ್ನು ಆಹಾರ ಮತ್ತು ಎಣ್ಣೆ ಕಾಳು ಬೆಳೆಗಳಿಗೆ ಮುಂಗಾರು ಹಂಗಾಮಿಗೆ ಶೇ. 2 ಎಂದು ಪರಿಗಣಿಸಲಾಗಿದೆ. ಮುಖ್ಯ ಬೆಳೆಗಳಿಗೆ ಯೋಜನೆಯನ್ನು ಗ್ರಾಮ ಪಂ. ಮಟ್ಟಕ್ಕೆ ಅಳವಡಿಸಲಾಗುವುದು. ಈ ಯೋಜನೆಯು ಸಾಲ ಪಡೆದ ಹಾಗೂ ಸಾಲ ಪಡೆಯದ ರೈತರಿಗೆ ಐಚ್ಛಿಕವಾಗಿದ್ದು, ವಿಮಾ ಮೊತ್ತವು ಒಂದೇ ಆಗಿರುತ್ತದೆ.

ಅರ್ಜಿ ಸಲ್ಲಿಕೆ ಹೇಗೆ; ಬಿತ್ತನೆ ಅಥವಾ ನಾಟಿ ಕಾಲಕ್ಕೆ ಆಗುವ ನಷ್ಟ, ಬೆಳೆವಣಿಗೆ ಹಂತದಲ್ಲಿ ಆಗುವ ನಷ್ಟ ಕಟಾವಿನ ನಂತರದ ನಷ್ಟವನ್ನು ಸಹ ಪರಿಗಣಿಸಲಾಗುವುದು. ಪ್ರಸಕ್ತ ಸಾಲಿನಲ್ಲಿ ವಿವಿಧ ಜಿಲ್ಲೆಗಳಿಗೆ ವಿವಿಧ ವಿಮಾ ಕಂಪನಿಯನ್ನು ಆಯ್ಕೆ ಮಾಡಲಾಗಿದೆ. ವಿಮಾ ಅರ್ಜಿಗಳು ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಲಭ್ಯವಿದ್ದು, ಈ ಯೋಜನೆಯಡಿ ಅರ್ಜಿಯನ್ನು ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಸಲ್ಲಿಸಿ ನೋಂದಾಯಿಸಿಕೊಳ್ಳಬಹುದಾಗಿದೆ.

ಖಾತೆಗೆ 1 ಲಕ್ಷ ಟಕಾ ಟಕ್ ಹಣ ಜಮಾ ಎಂದ ರಾಹುಲ್

■ ಕಾಂಗ್ರೇಸ್ ಪಕ್ಷದ ಎಲ್ಲಾ ಸಚಿವರು, ಟಕ್ ಟಕಾ ಟಕ್ ಎಂಬಂತೆ ಹಣ ವರ್ಗಾವಣೆ ಮಾಡಿದ್ದಾರೆ: ಆರ್ ಅಶೋಕ್ ಆರೋಪ

• ಉದಯವಾಹಿನಿ, ಬೆಂಗಳೂರು

ಉದಯವಾಹಿನಿ ಚಿತ್ರ

ಬ್ರಹ್ಮಾಂಡ ಭ್ರಷ್ಟಾಚಾರ

ಇಂಡಿಯಾ ಅಧಿಕಾರಕ್ಕೆ ಬಂದರೇ ವರ್ಷಕ್ಕೆ ಮಹಿಳೆಯರ ಬ್ಯಾಂಕ್ ಖಾತೆಗೆ ಒಂದು ಟಕಾ ಟಕ್ ಟಕಾ ಟಕ್ ಹಣ ಹಾಕುವುದಾಗಿ ಹೇಳಿದ್ದಾರೆ. ಅದನ್ನು ಅನುಸರಿಸಿದ ಕಾಂಗ್ರೇಸ್ ಪಕ್ಷದ ಎಲ್ಲ ಸಚಿವರು, ಟಕ್ ಟಕಾ ಟಕ್ ಎಂಬಂತೆ ಹಣ ವರ್ಗಾವಣೆ ಮಾಡಿದ್ದಾರೆ ಎಂದು ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಆರೋಪಿಸಿದರು.

ಈ ಕುರಿತು ಮಾಧ್ಯಮಗಳ ಜೊತೆಗೆ ಆರ್ ಅಶೋಕ್ ಅವರು ಮಾತನಾಡಿ, ವಾಲ್ಮೀಕಿ ಅಭಿವೃದ್ಧಿ ನಿಗಮದ 187 ಕೋಟಿ ರೂ. ಹಗರಣದಲ್ಲಿ ಇಡೀ ಸಚಿವಸಂಪುಟದವರೇ ಭಾಗಿಯಾಗಿದ್ದಾರೆ ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಆರೋಪಿಸಿದರು.

4 ರಂದು 25 ಕೋಟಿ ಟಕಾ ಟಕ್ ವರ್ಗಾವಣೆ, 6 ರಂದು 25 ಕೋಟಿ ಟಕಾ ಟಕ್ ವರ್ಗಾವಣೆ, 21ರಂದು 44 ಕೋಟಿ ಟಕಾ ಟಕ್ ವರ್ಗಾವಣೆ, ರಾಜ್ಯ ಖಜಾನೆಯಿಂದ 43 ಕೋಟಿ ವರ್ಗಾವಣೆ ಟಕಾ ಟಕ್ ಎಂಬಂತೆ ನಡೆದಿದೆ. ಮತ್ತೆ 21ರಂದು 50 ಕೋಟಿ ರೂ. ಟಕಾ ಟಕ್ ಟ್ರಾನ್ಸ್‌ಫರ್ ಆಗಿದೆ. ಕಾಂಗ್ರೇಸ್ಸಿನವರು ಇಷ್ಟು ಮೊತ್ತವನ್ನು ಅವರ ಲೂಟಿ ಖಾತೆಗೆ ಹಾಕಿದ್ದಾರೆ ಎಂದು ಆಕ್ಷೇಪಿಸಿದರು. ಇದೊಂದು ಬ್ರಹ್ಮಾಂಡ ಭ್ರಷ್ಟಾಚಾರ ಎಂದು ಟೀಕಿಸಿದರು. 187 ಕೋಟಿ ನುಂಗಲು ಒಬ್ಬ ಮಂತ್ರಿಯಿಂದ ಸಾಧ್ಯವಿಲ್ಲ. ಇದು ಸಣ್ಣ ಮೊತ್ತವೇನಲ್ಲ. ಅವರ ಜೀವನ, ಅವರು, ಮಕ್ಕಳು, ಮೊಮ್ಮಕ್ಕಳು, ಮರಿ ಮಕ್ಕಳು ಸಂತೃಪ್ತಿಯಿಂದ ಬದುಕುವಷ್ಟು ದುಡ್ಡು ಇದು ಎಂದು ಹೇಳಿದರು. ರಾಹುಲ್ ಗಾಂಧಿಯವರು ಹೇಳಿದಂತೆ 25 ಸಾವಿರ ಕೋಟಿ ದಲಿತರ ಹಣ ಮಾಯವಾಗಿದೆ. ಎಲ್ಲಿಗೆ ಹೋಯಿತು ಯಾರಿಗೆ ಹೋಯಿತೆಂದು ಗೊತ್ತಿಲ್ಲ. ಯಾವುದಕ್ಕೆ ಬಳಸಿದರೆಂದೂ ಗೊತ್ತಿಲ್ಲ. ಇವತ್ತು ಅಧಿಕಾರಿಗಳು ಟಕಾ ಟಕ್ ಎಂದು ಸತ್ತು ಹೋಗುತ್ತಿದ್ದಾರೆ. ಬಿತ್ತನೆ ಬೀಜದ ಬೆಲೆ ಇವತ್ತು ಟಕಾ ಟಕ್ ಎಂದು ಶೇ 70 ರಷ್ಟು ಏರಿಕೆ ಕಂಡಿದೆ. ಕಾಂಗ್ರೇಸ್ಸಿನವರಿಗೆ ರಾಮ ಕಂಡರೆ ಆಗುವುದಿಲ್ಲ. ವಾಲ್ಮೀಕಿ ಮಹರ್ಷಿಯನ್ನು ಕಂಡರೆ ಆಗೋಲ್ಲ ಎಂದು ಈಗ ಗೊತ್ತಾಗಿದೆ. ಆ ನಿಗಮದ ಹೆಸರಿನಲ್ಲಿ ಇದ್ದ 187 ಕೋಟಿ ಬ್ರಹ್ಮಾಂಡ ಭ್ರಷ್ಟಾಚಾರ ಕಾಂಗ್ರೇಸ್ಸಿನ ಒಂದು ವರ್ಷದ ಸಾಧನೆ ಎಂದು ಟೀಕಿಸಿದರು. ನಿಜವಾಗಲೂ ನೀವು ಪ್ರಾಮಾಣಿಕರಿದ್ದರೆ ಇದನ್ನು ಸಿಬಿಐ ತನಿಖೆಗೆ ಕೊಡಿ ಎಂದು ಒತ್ತಾಯಿಸಿದರು.

> ನಿನ್ನೆ ದಿನ ಮತ್ತೊಂದು ಎಫ್‌ಐಆರ್ ಮಾಡಿ ಬ್ಯಾಂಕ್ ಅಧಿಕಾರಿಗಳ ಹೆಸರನ್ನೂ ಉಲ್ಲೇಖಿಸಿದ್ದಾರೆ. ಲೋಕಸಭಾ ಚುನಾವಣೆ ಸಂದರ್ಭದಲ್ಲೇ ನೂರಾರು ಕೋಟಿ ಮೊತ್ತವನ್ನು ಮತ್ತೊಂದು ನಕಲಿ ಬ್ಯಾಂಕ್ ಖಾತೆ ಮೂಲಕ ತೆಲಂಗಾಣ ರಾಜ್ಯಕ್ಕೆ ವರ್ಗಾವಣೆ ಮಾಡಿದ್ದಾರೆ. ಇದರ ಹಿಂದೆ ದೊಡ್ಡ ಪಿತೂರಿ ಅಡಗಿದೆ ಎಂದು ನುಡಿದರು. -ಆರ್.ಅಶೋಕ್

> ಮುಖ್ಯಮಂತ್ರಿಗಳು ಈ ಪ್ರಕರಣದಲ್ಲಿ ಭಂಡತನ ತೋರಿಸುವ ಅಗತ್ಯವಿಲ್ಲ. ಈ ಸರಕಾರ ತನ್ನ ಭಂಡತನ ಬಿಟ್ಟು, ನೀವು ಪ್ರಾಮಾಣಿಕರಿದ್ದರೆ ರಾಜೀನಾಮೆ ಪಡೆಯಿರಿ ಎಂದು ಮುಖ್ಯಮಂತ್ರಿಗಳನ್ನು ಆಗ್ರಹಿಸಿದರು. ಸಿಎಂ ಮತ್ತು ರಾಜ್ಯ ಸರಕಾರಕ್ಕೆ ಒಂದು ವಾರದ ಗಡುವು ಕೊಡುತ್ತಿದ್ದೇವೆ. ಅದರ ಒಳಗಡೆ ರಾಜೀನಾಮೆ ಪಡೆದು ಸಿಬಿಐ ತನಿಖೆಗೊಪ್ಪಿಸುವ ವಿಶ್ವಾಸವಿದೆ. ಇಲ್ಲದಿದ್ದರೆ, ರಾಜ್ಯಾದ್ಯಂತ ಇದರ ವಿರುದ್ಧ ಉಗ್ರ ಹೋರಾಟ ಮಾಡಲಿದ್ದೇವೆ ಎಂದು ಎಚ್ಚರಿಕೆ ನೀಡಿದರು. -ಬಿ.ವೈ. ವಿಜಯೇಂದ್ರ

ಮೃತರ ಪತ್ನಿ ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುತ್ತಿದ್ದಾರೆ. ಇಬ್ಬರು ಗಂಡುಮಕ್ಕಳಿದ್ದು, ಸಂಸಾರ ನಡೆಸಲು ಕಷ್ಟ, ಇಂಥ ಸಂದರ್ಭದಲ್ಲಿ ರಾಜ್ಯ ಸರಕಾರ ಕನಿಷ್ಠ 25 ಲಕ್ಷ ಪರಿಹಾರವನ್ನು ಘೋಷಿಸಬೇಕು ಎಂದರು. ಮಾನವೀಯತೆ ದೃಷ್ಟಿಯಿಂದ ಕುಟುಂಬಕ್ಕೆ ಈ ಮೊತ್ತ ಕೊಡಬೇಕೆಂದು ತಿಳಿಸಿದರು.

ಎಫ್‌ಐಆರ್‌ನಲ್ಲಿ ಸಚಿವರ ಹೆಸರಿಲ್ಲ

• ಉದಯವಾಹಿನಿ, ಬೆಂಗಳೂರು

ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧೀಕ್ಷಕ ಚಂದ್ರಶೇಖರ್ ಅವರು ಡೆತ್ ನೋಟ್ ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದರು. ಇವತ್ತಿಗೆ 4 ದಿನ ಕಳೆದಿದೆ. ಆದರೂ ಎಫ್‌ಐಆರ್‌ನಲ್ಲಿ ಸಚಿವರ ಹೆಸರು ಉಲ್ಲೇಖಿಸಿಲ್ಲ; ಎಫ್ ಐಆರ್‌ನಲ್ಲಿ ಕೊಲೆ ಮೊಕದ್ದಮೆ ಎಂದು ದಾಖಲಿಸಿಲ್ಲ ಎಂದು ಬಿಜೆಪಿ ಮಾಜಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ ಅವರು ಆಕ್ಷೇಪಿಸಿದರು.

> ಎಂ.ಡಿ. ಪದ್ಮನಾಭ್, ಲೆಕ್ಕಾಧಿಕಾರಿ ಪರಶುರಾಂ, ಬ್ಯಾಂಕ್ ಅಧಿಕಾರಿ ಸ್ಮಿತಾ ಹೆಸರನ್ನೂ ಉಲ್ಲೇಖಿಸಿದ್ದಾರೆ. ಇದರ ಜೊತೆ ಎನ್.ನಾಗರಾಜ್ ಹೆಸರೂ ಉಲ್ಲೇಖಿಸಲಾಗಿದೆ. ಹಾಗಿದ್ದರೆ ಎನ್. ನಾಗರಾಜ್ ಯಾರು ಎಂದು ಕೇಳಿದರು.

ಬೆಂಗಳೂರು ನಗರದ ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಗುರುವಾರ ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಈ ಪ್ರಕರಣದಲ್ಲಿ ಭ್ರಷ್ಟಾಚಾರದ ಕಲಂಗಳನ್ನು ಸೇರಿಸಿಲ್ಲ. ಎಸ್‌ಸಿ, ಎಸ್‌ಟಿ ಕಾಯ್ದೆಯಡಿ ಪ್ರಕರಣ ತರಬೇಕಿದ್ದರೂ ಅದನ್ನೂ ಮಾಡಿಲ್ಲ. ಅದರ ಬದಲು ರಾಜಿ ಪಂಚಾಯಿತಿ ಮಾಡಿ ಒಳಗೇ ಮುಚ್ಚಿ ಹಾಕುವ ಹುನ್ನಾರ ನಡೆಸುತ್ತಿದ್ದಾರೆ ಎಂದು ಟೀಕಿಸಿದರು.

ಆ ಡೆತ್ ನೋಟಿನಲ್ಲಿ ಸಚಿವರ ಮೌಖಿಕ ಸೂಚನೆ ಎಂದು ಇದ್ದ ಮೇಲೆ ಇನ್ನೇನು ಸಾಕ್ಷಿ ಬೇಕು ಅಂಗೈ ಹುಣ್ಣಿಗೆ ಕನ್ನಡಿ ಬೇಕೇ ಇಷ್ಟು ದೊಡ್ಡ ಹಗರಣ ದೊಡ್ಡವರ ಬಲ ಇಲ್ಲದೆ ನಡೆಯಲು ಸಾಧ್ಯವೇ ಹೇಗೆ ನಡೆಯಲು ಸಾಧ್ಯ ಎಂದು ಪ್ರಶ್ನೆಗಳನ್ನು ಬಿಜೆಪಿ ಮಾಜಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ ಟಿ ರವಿ ಅವರು ಮುಂದಿಟ್ಟರು.

ಹೊತ್ತಿ ಉರಿದ ಪ್ಲಾಸ್ಟಿಕ್ ಗಮ್ ಟೇಪ್ ತಯಾರಿಕಾ ಕಾರ್ಖಾನೆ

• ಉದಯವಾಹಿನಿ, ಬೆಂಗಳೂರು

ಉದಯವಾಹಿನಿ ಚಿತ್ರ

ಬೆಂಗಳೂರಲ್ಲಿ ಮತ್ತೊಂದು ಅಗ್ನಿ ಅವಘಡ

ಬೆಂಗಳೂರಲ್ಲಿ ದಿನೇ ದಿನೇ ಅಗ್ನಿ ದುರಂತ ಪ್ರಕರಣಗಳ ಸಂಖ್ಯೆ ಹೆಚ್ಚುತಲೆ ಇದೆ. ಇದೀಗ ಬೆಂಗಳೂರು ಹೊರವಲಯದ ಆನೇಕಲ್ ಬಳಿ ಇರುವ ಬೊಮ್ಮಸಂದ್ರ ಕೈಗಾರಿಕಾ ಪ್ರದೇಶದಲ್ಲಿ ಪ್ಲಾಸ್ಟಿಕ್ ಗಮ್ ಟೇಪ್ ತಯಾರಿಕಾ ಕಾರ್ಖಾನೆಯೊಂದಕ್ಕೆ ಆಕಸ್ಮಿಕವಾಗಿ ಬೆಂಕಿ ತಗುಲಿ ಹೊತ್ತಿ ಉರಿದಿದ್ದು, ಕಚ್ಚಾ ವಸ್ತುಗಳು ಸುಟ್ಟು ಕರಕಲಾಗಿವೆ.

ಹೌದು ಬೆಳಿಗ್ಗೆ 11 ಗಂಟೆಗೆ ಬೆಂಗಳೂರು ಹೊರವಲಯದ ಆನೇಕಲ್ ಬಳಿ ಇರುವ ಬೊಮ್ಮಸಂದ್ರ ಕೈಗಾರಿಕಾ ಪ್ರದೇಶದಲ್ಲಿ ಟೆಕ್ನೆವಾ ಟೇಪ್ಸ್ ಪ್ರೈ. ಲಿ. ಎಂಬ ಕಾರ್ಖಾನೆಯಲ್ಲಿ ಈ ಒಂದು ಅಗ್ನಿ ಅನಾಹುತ ಸಂಭವಿಸಿದೆ. ಭಾರಿ ಬೆಂಕಿ ಹಿನ್ನೆಲೆಯಲ್ಲಿ ಸಮೀಪದ ಕಾರ್ಖಾನೆಗಳ ಸಿಬ್ಬಂದಿಯೂ ಆತಂಕಗೊಂಡರು.

ಸ್ಥಳಕ್ಕೆ ಹೆಬ್ಬಗೋಡಿ ಪೊಲೀಸರು ದೌಡಾಯಿಸಿದ್ದು, ಹೆಚ್ಚಿನ ಅನಾಹುತ ತಡೆಯುವಲ್ಲಿ ಕಾರ್ಯ ಪ್ರವೃತ್ತರಾಗಿದ್ದಾರೆ. ಗಮ್ ಟೇಪ್ ತಯಾರಿಕಾ ಕಾರ್ಖಾನೆಯಲ್ಲಿ ಬೆಂಕಿ ಸುಲಭವಾಗಿ ಹೊತ್ತಿಕೊಳ್ಳುವ ರಾಸಾಯನಿಕ ಇರುವುದು ಬೆಂಕಿಯ ತೀವ್ರತೆಗೆ ಕಾರಣವಾಗಿರಬಹುದು ಎಂದು ಶಂಕಿಸಲಾಗಿದೆ.

ಬೆಂಕಿಗೆ ಇಡೀ ಕಾರ್ಖಾನೆ ಆಹುತಿಯಾಗಿದ್ದು, ಮುಗಿಲೆತ್ತರಕ್ಕೆ ದಟ್ಟ ಹೊಗೆ ಆವರಿಸಿತ್ತು.

> ಶಾರ್ಟ್ ಸರ್ಕ್ಯ

ಮಾವು ಇಳುವರಿ ಕುಂಠಿತ: 88 ಕೋಟಿ ಪರಿಹಾರಕ್ಕೆ ಪತ್ರ

ಮಳೆ ಕೊರತೆ ಹಾಗೂ ಹೆಚ್ಚಿದ ಉಷ್ಣಾಂಶದಿಂದ 39,331 ಹೆಕ್ಟೇರ್ ಪ್ರದೇಶದಲ್ಲಿ ಶೇ. 70ರಷ್ಟು ಮಾವು ಇಳುವರಿ ಕುಂಠಿತ

• ಉದಯವಾಹಿನಿ ಕೋಲಾರ

ಹವಾಮಾನ ವೈಪರೀತ್ಯ ಕಾರಣ ಸತತ ಮೂರು ವರ್ಷಗಳಿಂದ ನಷ್ಟಕ್ಕೆ ಒಳಗಾಗುತ್ತಿರುವ ಜಿಲ್ಲೆಯ ಮಾವು ಬೆಳೆಗಾರರು ಈ ಬಾರಿ ಬಿಸಿಲ ಧಗೆ ಕಾರಣ ಭಾರಿ ಸಂಕಷ್ಟಕ್ಕೆ ಒಳಗಾಗಿದ್ದಾರೆ.ಜಿಲ್ಲೆಯಲ್ಲಿ ಸುಮಾರು 54 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಮಾವು ಬೆಳೆಯುತ್ತಾರೆ. ಈ ಬಾರಿ ಮಳೆ ಕೊರತೆ ಹಾಗೂ ಹೆಚ್ಚಿದ ಉಷ್ಣಾಂಶದಿಂದ 39,331 ಹೆಕ್ಟೇರ್ ಪ್ರದೇಶದಲ್ಲಿ ಶೇ 70ರಷ್ಟು ಮಾವು ಇಳುವರಿ ಕುಂಠಿತವಾಗಿದೆ.

ಈ ಸಂಬಂಧ ಎಸ್‌ಡಿಆರ್‌ಎಫ್ ಹಾಗೂ ಎನ್‌ಡಿಆರ್‌ಎಫ್‌ನಡಿ 88.49 ಕೋಟಿ ಪರಿಹಾರ ಕೋರಿ ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಪ್ರಧಾನ ಕಾರ್ಯದರ್ಶಿಗೆ ಜಿಲ್ಲಾಧಿಕಾರಿ ಅಕ್ರಂ ಪಾಷಾ ಮೇ 15ರಂದು ಪತ್ರ ಬರೆದಿದ್ದಾರೆ.

ರಾಜ್ಯದಲ್ಲಿ ಸುಮಾರು 2 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಮಾವು ಬೆಳೆಯಲಾಗುತ್ತಿದೆ. ಅದರಲ್ಲಿ ಶೇ 50ರಷ್ಟು ಮಾವನ್ನು ಕೋಲಾರ ಜಿಲ್ಲೆಯಲ್ಲೇ ಬೆಳೆಯುತ್ತಾರೆ. ಪ್ರಮುಖವಾಗಿ ಶ್ರೀನಿವಾಸಪುರ ತಾಲ್ಲೂಕಿನ ಬಹುತೇಕ ರೈತರು ಮಾವು ಬೆಳೆ ಮೇಲೆ ಅವಲಂಬಿತರಾಗಿ ಬದುಕು ಸಾಗಿಸುತ್ತಾರೆ. 'ಮಾವಿನ ನಗರಿ' ಎಂದೇ ಪ್ರಸಿದ್ಧಿ ಪಡೆದಿದೆ.

ಸಮರ್ಪಕ ಮಳೆ ಬಾರದ ಕಾರಣ ಈ ಬಾರಿ ಹೂ ಹಂತದಲ್ಲೇ ಮಾವಿನ ಫಸಲು ಉದುರಿತ್ತು. ಡಿಸೆಂಬರ್ ತಿಂಗಳಿನಲ್ಲಿ ಬರಬೇಕಿದ್ದ ಹೂವು ಜನವರಿ, ಫೆಬ್ರುವರಿ ತಿಂಗಳಲ್ಲಿ ಬಂದಿತ್ತು. ಫಸಲು ತಡವಾಗುವುದರ ಜೊತೆಗೆ ರಣ ಬಿಸಿಲಿನ ತಾಪಕ್ಕೆ ಕಾಯಿ ಆಗಬೇಕಿದ್ದ ಪಿಂದೆ, ಹಳದಿ ಬಣ್ಣಕ್ಕೆ ತಿರುಗಿ ನೆಲಕ್ಕೆ ಉದುರಿದೆ. ತುಸು ದೊಡ್ಡದಾಗಿ ಬಲಿತಿರುವ ಮಾವಿನ ಕಾಯಿ ನೀರಿನ ಅಂಶ ಸಿಗದೆ ಬಿಸಿಲ ತಾಪಕ್ಕೆ ಸೊರಗಿದೆ. ಈ ಹಿನ್ನೆಲೆಯಲ್ಲಿ ಮಾವಿನ ತಾಕುಗಳಿಗೆ ಅಧಿಕಾರಿಗಳ ತಂಡ ಕಳುಹಿಸಿ ಪರಿಶೀಲಿಸಿ ನೆರವಿಗೆ ಬರಬೇಕೆಂದು ಜಿಲ್ಲಾ ಮಾವು ಬೆಳೆಗಾರರ ಕ್ಷೇಮಾಭಿವೃದ್ಧಿ ಸಂಘದ ಪ್ರತಿನಿಧಿಗಳು ಹಾಗೂ ಬೆಳೆಗಾರರು ಮನವಿ ಮಾಡಿದ್ದರು. ಮಾವಿನ ಗಿಡ ಹೂ ಬಿಡುವ ಹಾಗೂ ಕಾಯಿ ಕಚ್ಚುವ ಸಂದರ್ಭದಲ್ಲಿ ವಾಡಿಕೆಯಂತೆ ಮಳೆಯಾಗದೆ, ಉಷ್ಣಾಂಶ ಹೆಚ್ಚಿದ್ದರಿಂದ 2023-24ನೇ ಸಾಲಿನ ಹಂಗಾಮಿನಲ್ಲಿ ಶೇ 70ರಿಂದ 80ರಷ್ಟು ಇಳುವರಿ ಕುಂಠಿತವಾಗಿದೆ. ಅಲ್ಲದೇ, ಇನ್ನುಳಿದ ಪ್ರದೇಶದಲ್ಲಿ ಮಾವಿನ ಕಾಯಿಗಳ ಗಾತ್ರ ಕಡಿಮೆಯಾಗಿ ಗುಣಮಟ್ಟ ಕಳೆದುಕೊಂಡಿದ್ದು, ಮಾರುಕಟ್ಟೆಗ ಸೂಕ್ತ ಇಲ್ಲದಿರುವ ಕಾರಣ ರೈತರು ಪರಿಹಾರ ಕೋರಿ ತೋಟಗಾರಿಕೆ ಇಲಾಖೆಗೆ ಮನವಿ ಸಲ್ಲಿಸಿದ್ದರು' ಎಂದು ಅಕ್ರಂ ಪಾಷಾ ತಿಳಿಸಿದರು. ಜಂಟಿ ಸಮೀಕ್ಷೆಗೆ ತಂಡ ರಚಿಸಿ ವರದಿ ನೀಡಲು ಸೂಚಿಸಲಾಗಿತ್ತು. ತೋಟಗಾರಿಕೆ ಮಹಾವಿದ್ಯಾಲಯ ಅಧಿಕಾರಿಗಳು, ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳು ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳ ತಂಡ ಮಾವು ಬೆಳೆ ಹಾನಿ ಪರಿಶೀಲಿಸಿ ವರದಿ ನೀಡಿತ್ತು. ನಷ್ಟದ ಪ್ರತಿ ಹೆಕ್ಟೇರ್‌ಗೆ 22,500ರಂತೆ ಪರಿಹಾರ ನೀಡಲು ಕೋರಲಾಗಿದೆ' ಎಂದರು. ಜಂಟಿ ಸಮೀಕ್ಷೆಗೆ ತಂಡವು ಶ್ರೀನಿವಾಸಪುರ, ಕೋಲಾರ ಹಾಗೂ ಮುಳಬಾಗಿಲು ತಾಲ್ಲೂಕಿನ 12 ರೈತರ ಮಾವು ತಾಕುಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿತ್ತು. ಹೂ, ಕಾಯಿ ಉದುರುವ ಜೊತೆಗೆ ಮರಗಳ ಬೆಳವಣಿಗೆ ಮೇಲೂ ಪರಿಣಾಮ ಬೀರುವ ಸನ್ನಿವೇಶ ಸೃಷ್ಟಿಯಾಗಿದೆ. ಮಾವಿನ ತೋಟ ಗುತ್ತಿಗೆ ಆಧಾರದಲ್ಲಿ ವ್ಯಾಪಾರ ಮಾಡಿರುವ ಸಣ್ಣಪುಟ್ಟ ವ್ಯಾಪಾರಸ್ಥರೂ ಕೈ ಸುಟ್ಟುಕೊಂಡಿದ್ದಾರೆ.

ಉದಯವಾಹಿನಿ ಚಿತ್ರ

> ತಾಪಮಾನ ಹೆಚ್ಚಿದ್ದರಿಂದ ಮಾವಿನ ಗಿಡ ಹೂ ಬಿಡದೆ ಕಾಯಿ ಕಚ್ಚದೆ ಇಳುವರಿ ತಗ್ಗಿದ್ದು ರೈತರಿಗೆ ನಷ್ಟವಾಗಿದೆ. ನೈಸರ್ಗಿಕ ವಿಕೋಪ ಬಾಧಿತ ಪ್ರದೇಶವೆಂದು ಪರಿಹಾರ ಕೋರಲಾಗಿದ
> - ಅಕ್ರಂ ಪಾಷಾ, ಜಿಲ್ಲಾಧಿಕಾರಿ

2 ಟನ್ ಸಿಗುವುದು ಕಷ್ಟ

ಈ ಬಾರಿ ಬಿಸಿಲಿನ ತಾಪಕ್ಕೆ ಹೂ ಹಾಗೂ ಪಿಂದೆಗಳು ಉದುರಿದ್ದು ಗಮನಿಸಿದರೆ 10 ಟನ್ ಬರುತ್ತಿದ್ದ ಮಾವಿನ ಫಸಲು ಈ ಬಾರಿ 1ರಿಂದ 2 ಟನ್ ಸಿಗುವುದು ಕಷ್ಟವಾಗಿದೆ ಎಂದು ಬೆಳೆಗಾರರು ಹೇಳಿದ್ದಾರೆ.

ಪರಿಹಾರಕ್ಕೆ ಆಗ್ರಹ

ಬೆಳೆ ಉಳಿಸಿಕೊಳ್ಳಲು ಒಂದೂವರೆ ತಿಂಗಳಿಂದ ಔಷಧಿ ಸಿಂಪಡಣೆ ಸೇರಿದಂತೆ ಇನ್ನಿತರೆ ಕಸರತ್ತು ನಡೆಸುತ್ತಿದ್ದು, ಸಾಲ ಮಾಡಿಕೊಂಡಿದ್ದೇವೆ. ಶೀಘ್ರವೇ ಪರಿಹಾರ ನೀಡಬೇಕೆಂದು ಆಗ್ರಹಿಸಿದ್ದಾರೆ.

ಆಟೋ ಚಾಲಕರಿಗೆ ರಸ್ತೆ ನಿಯಮಗಳ ಅರಿವು

• ಉದಯವಾಹಿನಿ, ಶಿಡ್ಲಘಟ್ಟ

ಆಟೋ ಚಾಲಕರು ತನ್ನ ಕುಟುಂಬದ ಜವಾಬ್ದಾರಿಯನ್ನು ಮನಗಂಡು ರಸ್ತೆ ಮೇಲೆ ಎಚ್ಚರಿಕೆಯಿಂದ ಚಾಲನೆ ಮಾಡಬೇಕು. ಸ್ವಲ್ಪ ಯಾಮಾರಿದರೆ ಇಡೀ ಕುಟುಂಬವೇ ಬೀದಿಗೆ ಬರುತ್ತದೆ ಎಂಬುದನ್ನು ಮರೆಯಬಾರದು ಎಂದು ಆರಕ್ಷಕ ವೃತ್ತ ನಿರೀಕ್ಷಕ ಎಂ. ಶ್ರೀನಿವಾಸ್ ತಿಳಿಸಿದರು.

ನಗರ ಪೋಲಿಸ್ ಠಾಣೆಯಲ್ಲಿ ಚಿಕ್ಕಬಳ್ಳಾಪುರ ಜಿಲ್ಲಾ ಪೋಲಿಸ್ ಚಿಂತಾಮಣಿ ಉಪ ವಿಭಾಗ ಶಿಡ್ಲಘಟ್ಟ ವೃತ್ತ ಹಾಗೂ ಶಿಡ್ಲಘಟ್ಟ ನಗರ ಪೋಲಿಸ್ ಠಾಣೆ ವತಿಯಿಂದ ಆಯೋಜಿಸಿದ್ದ ಆಟೋ ಚಾಲಕರಿಗೆ ಕಾನೂನುಗಳ ಅರಿವು ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿ, ಆಟೋ ಚಾಲಕರು ಕಡ್ಡಾಯವಾಗಿ ಖಾಕಿ ಸಮವಸ್ತ್ರ ಧರಿಸಿ, ರಸ್ತೆ ಸಂಚಾರಿ ನಿಯಮ ಕಟ್ಟುನಿಟ್ಟಾಗಿ ಪಾಲನೆ ಮಾಡಿ, ಸಮಚಿತ್ತದಿಂದ ವಾಹನ ಚಾಲನೆ ಮಾಡಬೇಕು ಹಾಗೂ ತನ್ನ ಮತ್ತು ಇತರ ಪ್ರಯಾಣಿಕರ ಜೀವಗಳನ್ನು ರಕ್ಷಣೆ ಮಾಡುವುದಲ್ಲದೇ ವಾಹನದಲ್ಲಿ ನಿಗದಿತ ಮತ್ತು ಸಾಮರ್ಥ್ಯ ಇದ್ದಷ್ಟು ಮಾತ್ರ ಪ್ರಯಾಣಿಕರನ್ನು ತುಂಬಬೇಕು. ಈ ಮೂಲಕ ತಾನೂ ಬದುಕಬೇಕು ಇತರರನ್ನು ಬದುಕಿಸಬೇಕು ಎಂಬ ಭಾವನೆಯಿಂದ ತಾವು ಆಟೋ ಚಾಲನೆ ಮಾಡಬೇಕು ಎಂದು ಕಿವಿ ಮಾತು ಹೇಳಿದರು. ಎಡಭಾಗ ಮಾತ್ರ ನಮ್ಮದು, ರಹಸ್ಯ ತಿರುವು ಅಪಘಾತ ಸಂಭವಿಸುವ ಅಪಾಯದ ತಿರುವುಗಳು, ಸೇತುವೆ, ಅಂಕು ಡೊಂಕಾದ ರಸ್ತೆ, ಯೂ ಟರ್ನ್, ತಿರುವು ಮುರುವ ರಸ್ತೆ, ಇಳಿಜಾರು, ಎತ್ತರದ ರಸ್ತೆ, ಹೀಗೆ ಹಲವು ರೀತಿಯ ರಸ್ತೆ ಸಂಚಾರದ ನಾಮಫಲಕಗಳನ್ನು ಪಾಲಿಸಿದರೆ ಮಾತ್ರ ರಸ್ತೆ ಅಪಘಾತಗಳು ತಪ್ಪುತ್ತವೆ. ಶಾಲೆ, ನ್ಯಾಯಾಲಯ, ಆಸ್ಪತ್ರೆಗಳ ಬಳಿ ಶಬ್ದ ಮಾಡಬಾರದು ಎಂದು ವಿವರಿಸಿದರು. ಈ ಸಂದರ್ಭದಲ್ಲಿ ನಗರ ಠಾಣೆ ಪಿಎಸ್‌ಐ ಎಂ.ವೇಣುಗೋಪಾಲ್ ,ಅಪರಾಧ ವಿಭಾಗದ ಪಿಎಸ್‌ಐ ಟಿ.ವೆಂಕಟರಮಣ ,ಮುಖ್ಯಪೇದೆ ಅಶ್ವಥ್ ,ಠಾಣೆ ಬರಹಗಾರರಾದ ಶಿವಕುಮಾರ್ , ಅಂಬರೀಶ್ ,ಮಕ್ಬೂದ್ , ಸೇರಿದಂತೆ ಆಟೋ ಚಾಲಕರ ಸಂಘದ ಅಧ್ಯಕ್ಷ ಅಪ್ಪು ಸೇರಿದಂತೆ ನಗರದ ಎಲ್ಲಾ ಆಟೋ ಚಾಲಕರು ಹಾಜರಿದ್ದರು.

ಉದಯವಾಹಿನಿ ಚಿತ್ರ

> ಒಂದೇ ರಸ್ತೆಯಲ್ಲಿ ಪಾದಚಾರಿಗಳು, ದ್ವಿಚಕ್ರ ವಾಹನ, ಬೈಸಿಕಲ್, ಆಟೋ, ಕಾರು, ಭಾರಿ ವಾಹನಗಳ ಮಧ್ಯೆ ಮನುಷ್ಯರು ಚಲಿಸುತ್ತಾರೆ. ಹೀಗೆ ಜನದಟ್ಟಣೆಯ ಪರಿಸ್ಥಿತಿಯಲ್ಲಿ ರಸ್ತೆ ನಿಯಮ ಕಡ್ಡಾಯ ಪಾಲಿಸಲೇಬೇಕು. ಇಲ್ಲವಾದರೆ ಜೀವಕ್ಕೆ ಹಾನಿ ಉಂಟಾಗಬಹುದು ಎಚ್ಚರಿಕೆಯಿಂದ ತಾವು ವಾಹನ ಚಾಲನೆ ಮಾಡಬೇಕು
> -ಎಂ. ಶ್ರೀನಿವಾಸ್, ಆರಕ್ಷಕ ವೃತ್ತ ನಿರೀಕ್ಷಕ

ಜಲಜೀವನ್ ಮಿಷನ್ ಕಳಪೆ ಕಾಮಗಾರಿ: ಆರೋಪ

ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೊರಟಗೆರೆ

ಕೇಂದ್ರ ಹಾಗೂ ರಾಜ್ಯ ಸರ್ಕಾರದ ಮಹತ್ತರ ಯೋಜನೆಗಳಲ್ಲಿ ಒಂದಾದ ಜಲ ಜೀವನ್ ಮಷಿನ್ (ಮನೆ ಮನೆ ಗಂಗೆ) ಕಾಮಗಾರಿ ತಾಲ್ಲೂಕಿನಲ್ಲಿ ಕಳಪೆಯಿಂದ ಕೂಡಿದೆ ಎಂದು ಸಾರ್ವಜನಿಕರು ದೂರಿದ್ದಾರೆ. ನಿಯಮದ ಪ್ರಕಾರ 20 ಮನೆಗಳಿಗಿಂತ ಜಾಸ್ತಿ ಇರುವ ಗ್ರಾಮಗಳ ಮನೆ ಮನೆಗೆ ಕೊಳಯಿ ಅಳವಡಿಸಿ ನಿತ್ಯ ನೀರು ಒದಗಿಸುವುದಾಗಿದೆ.

ತಾಲ್ಲೂಕಿನಲ್ಲಿ 337 ಹಳ್ಳಿಗಳು ಈ ಯೋಜನೆಗೆ ಒಳಪಟ್ಟಿವೆ. ಅದರಲ್ಲಿ 170 ಹಳ್ಳಿಗಳಲ್ಲಿ ಕಾಮಗಾರಿ ನಡೆಯುತ್ತಿದೆ. ಗ್ರಾಮೀಣ ಕುಡಿಯುವ ನೀರು ಇಲಾಖೆಯಿಂದ ಕಾಮಗಾರಿ ಗುತ್ತಿಗೆ ಮೂಲಕ ನಡೆಯುತ್ತದೆ. ಆನ್‌ಲೈನ್ ಹರಾಜು ಮೂಲಕ ಗುತ್ತಿಗೆದಾರರು ಕಾಮಗಾರಿ ಪಡೆಯುತ್ತಾರೆ. ಒಂದೊಂದು ಗ್ರಾಮದ ಕಾಮಗಾರಿ ಒಬ್ಬೊಬ್ಬ ಗುತ್ತಿಗೆದಾರರು ಮಾಡುತ್ತಾರೆ. ಕೆಲವೆಡೆ ಮೂರ್ನಾಲ್ಕು ಗ್ರಾಮದ ಕಾಮಗಾರಿ ಕೂಡ ಒಬ್ಬರೇ ಗುತ್ತಿಗೆದಾರರು ನಿರ್ವಹಿಸುತ್ತಿದ್ದಾರೆ. ಯೋಜನೆ ಅಡಿ ಈಗಾಗಲೇ ಕೈಗೊಂಡಿರುವ ಬಹುತೇಕ ಕಡೆಗಳಲ್ಲಿ ಕಾಮಗಾರಿ ಕಳಪೆಯಾಗಿದೆ. ಕೆಲವೆಡೆ ಬೇಕಾಬಿಟ್ಟಿಯಾಗಿ ಪೈಪ್ ಲೈನ್ ಅಳವಡಿಸಲಾಗಿದೆ. ಗುಣಮಟ್ಟದ ಪೈಪ್ ಹಾಗೂ ಸಾಮಗ್ರಿ ಗುಣಮಟ್ಟ ಕಳಪೆಯಾಗಿದೆ. ಪೈಪ್ ಹಾಗೂ ಕೊಳಯಿ ಅಳವಡಿಸಲು ನಿಲ್ಲಿಸಿರುವ ಸಿಮೆಂಟ್ ಕಂಬ ಕೆಲವೇ ದಿನಗಳಲ್ಲಿ ಹಾಳಾಗುತ್ತಿವೆ. ಕೆಲವೆಡೆ ಹಾಕಿರುವ ಸಿಮೆಂಟ್ ಕಂಬ ಕೊಳಾಯಿಯಲ್ಲಿ ನೀರು ಬರುವ ಮುನ್ನವೇ ಉದುರಿಹೋಗಿದೆ. ಮನೆಗಳಲ್ಲಿ ವಿದ್ಯುತ್ ತಂತಿ ಎಳೆಯಲು ಬಳಸುವ ಪೈಪ್ ಮಾದರಿಯ ಪೈಪ್ ಹಾಕಿದ್ದಾರೆ ಎಂದು ಸಾರ್ವಜಿಕರು ದೂರಿದ್ದಾರೆ.

ಶಸ್ತ್ರಚಿಕಿತ್ಸೆಗೆ ಲಂಚ, ವೈದ್ಯನಿಗೆ 4 ವರ್ಷ ಜೈಲು ಶಿಕ್ಷೆ

• ಉದಯವಾಹಿನಿ, ಮೈಸೂರು

ಮೈಸೂರಿನ ದೊಡ್ಡಾಸ್ಪತ್ರೆ ಎಂದೇ ಹೆಸರುವಾಸಿಯಾಗಿರುವ ಕೃಷ್ಣರಾಜೇಂದ್ರ ಸರ್ಕಾರಿ ಆಸ್ಪತ್ರೆನ ವೈದ್ಯರೊಬ್ಬರಿಗೆ ಜೈಲು ಶಿಕ್ಷೆ ವಿಧಿಸಲಾಗಿದೆ. ಶಸ್ತ್ರಚಿಕಿತ್ಸೆಗೆಂದು ಬಂದ ರೋಗಿಯವರ ಕಡೆಯಿಂದ ಹಣ ಪಡೆದ ಆರೋಪದ ಮೇಲೆ ಸಿಕ್ಕಿಬಿದ್ದಿದ್ದ ವೈದ್ಯಾಧಿಕಾರಿ ಡಾ.ಪುಟ್ಟಸ್ವಾಮಿ ಅವರಿಗೆ 4 ವರ್ಷ ಜೈಲು ಶಿಕ್ಷೆ ಹಾಗೂ 50 ಸಾವಿರ ರೂ.ದಂಡವನ್ನು ವಿಧಿಸಲಾಗಿದೆ.

ಮೈಸೂರಿನ ಲೋಕಾಯುಕ್ತ ವಿಶೇಷ ನ್ಯಾಯಾಲಯದ ನ್ಯಾಯಾಧೀಶರು ಈ ಸಂಬಂಧ ಅಂತಿಮ ಆದೇಶವನ್ನು ಬುಧವಾರ ಪ್ರಕಟಿಸಿದ್ದಾರೆ. ಎಸ್.ಆರ್.ದೇವರಾಜು ಎಂಬುವವರು ಏಳು ವರ್ಷದ ಹಿಂದೆ 2017ರ ಏಪ್ರಿಲ್ 12ರಂದು ತಮ್ಮ ಸಂಬಂಧಿಕರೊಬ್ಬರನ್ನು ಕೆಆರ್‌ಆಸ್ಪತ್ರೆಗೆ ಶಸ್ತ್ರಚಿಕಿತ್ಸೆಗೆಂದು ಕರೆದುಕೊಂಡು ಬಂದಿದ್ದರು. ಈ ವೇಳೆ ಮೂಳೆ ಶಸ್ತ್ರಚಿಕಿತ್ಸಕರಾದ ಡಾ.ಪುಟ್ಟಸ್ವಾಮಿ ಅವರು ಶಸ್ತ್ರ ಚಿಕಿತ್ಸೆಗೆ 40 ಸಾವಿರ ರೂ. ಲಂಚದ ಬೇಡಿಕೆಯಿಟ್ಟಿದ್ದರು. ಕೊನೆಗೆ 26 ಸಾವಿರ ರೂ.ಗೆ ಒಪ್ಪಿದ್ದರು. ಈ ಹಣವನ್ನು ನೀಡುವಾಗ ಭ್ರಷ್ಟಾಚಾರ ನಿಗ್ರಹ ದಳದಅಧಿಕಾರಿಗಳು ದಾಳಿ ನಡೆಸಿ ಹಣದ ಸಮೇತ ಡಾ.ಪುಟ್ಟಸ್ವಾಮಿ ಅವರನ್ನು ಬಂಧಿಸಿದ್ದರು.

6 ವರ್ಷದಿಂದ ವಿಚಾರಣೆ

ಈ ಪ್ರಕರಣದ ತನಿಖಾಧಿಕಾರಿಯಾಗಿದ್ದ ಎಸಿಬಿ ಇನ್ಸ್‌ಪೆಕ್ಟರ್ ಶೇಖರ್ ಅವರು ಆರೋಪಿ ಡಾ.ಪುಟ್ಟಸ್ವಾಮಿ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿದ್ದರು. ಈ ಕುರಿತು ಆರು ವರ್ಷದಿಂದ ಪ್ರಕರಣದ ವಿಚಾರಣೆ ನಡೆದಿತ್ತು. ಲೋಕಾಯುಕ್ತ ವಿಶೇಷ ನ್ಯಾಯಾಲಯದ ನ್ಯಾಯಾಧೀಶರಾದ ಭಾಗ್ಯ ಅವರು ಡಾ.ಪುಟ್ಟಸ್ವಾಮಿ ಅವರ ಲಂಚ ಪ್ರಕರಣ ಸಾಬೀತಾಗಿದ್ದರಿಂದ ನಾಲ್ಕು ವರ್ಷ ಜೈಲು ಶಿಕ್ಷೆ ವಿಧಿಸಿದ್ದಾರೆ.

ಜಿಲ್ಲೆಯಲ್ಲಿ 136 ಡೆಂಗ್ಯೂ ಪ್ರಕರಣ: ನಿಯಮಿತವಾಗಿ ಹೊರಾಂಗಣ ಧೂಮೀಕರಣಕ್ಕೆ ಖಡಕ್ ಸೂಚನೆ

• ಉದಯವಾಹಿನಿ, ತುಮಕೂರು

ಆರೋಗ್ಯ ಇಲಾಖೆ ವರದಿಯನುಸಾರ ಜಿಲ್ಲೆಯಲ್ಲಿ 2024ರ ಜನವರಿ ಮಾಹೆಯಿಂದ ಈವರೆಗೂ 136 ಡೆಂಗ್ಯೂ ಪ್ರಕರಣಗಳು ದೃಢಪಟ್ಟಿರುವುದರಿಂದ ಮುನ್ನೆಚ್ಚರಿಕೆ ಕ್ರಮವಾಗಿ ನಗರ ಸೇರಿದಂತೆ ಗ್ರಾಮೀಣ ಪ್ರದೇಶದಲ್ಲಿ ನಿಯಮಿತವಾಗಿ ಹೊರಾಂಗಣ ಧೂಮೀಕರಣ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸಂಬಂಧಿಸಿದ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆರೋಗ್ಯ ಇಲಾಖೆಗೆ ಸಂಬಂಧಿಸಿದಂತೆ ವಿವಿಧ ಸಭೆಗಳನ್ನು ನಡೆಸಿ ಮಾತನಾಡಿದ ಅವರು, ಮಲೇರಿಯಾ, ಡೆಂಗ್ಯೂ, ಚಿಕುನ್‌ಗುನ್ಯಾ, ಮೆದುಳುಜ್ವರ ಹಾಗೂ ಆನೆಕಾಲು ರೋಗಗಳನ್ನು ನಿಯಂತ್ರಿಸಲು ಚರಂಡಿ ಸ್ವಚ್ಛತೆ, ನೀರು ನಿಲ್ಲದಂತೆ ರಸ್ತೆಯಲ್ಲಿರುವ ಗುಂಡಿ ಮತ್ತು ತಗ್ಗುಗಳನ್ನು ಮುಚ್ಚಿಸುವುದು, ಶಾಲಾ-ಕಾಲೇಜು ಹಾಗೂ ವಸತಿ ನಿಲಯಗಳಲ್ಲಿ ಮೇಲ್ಛಾವಣಿ ತೊಟ್ಟಿ/ನೀರು ಸರಬರಾಜು ಮಾಡುವ ತೊಟ್ಟಿಗಳನ್ನು ಭದ್ರವಾದ ಮುಚ್ಚಳದಿಂದ ಮುಚ್ಚಲು ಕ್ರಮಕೈಗೊಳ್ಳಬೇಕೆಂದು ನಗರ ಸ್ಥಳೀಯ ಸಂಸ್ಥೆಗಳಿಗೆ ಹಾಗೂ ಸಂಬಂಧಿಸಿದ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರಲ್ಲದೆ, ಹಂದಿಗಳಿಂದ ಮೆದುಳು ಜ್ವರ ಹರಡುವ ಸಾಧ್ಯತೆಯಿರುವುದರಿಂದ ಹಂದಿಗಳನ್ನು ಜನರ ವಾಸಸ್ಥಳದಿಂದ ಕನಿಷ್ಟ 3 ಕಿ.ಮೀ. ದೂರದಲ್ಲಿರುವಂತೆ ಸೂಕ್ತ ಕ್ರಮವಹಿಸಬೇಕೆಂದು ನಿರ್ದೇಶಿಸಿದರು. ಜಿಲ್ಲೆಯಲ್ಲಿ ಜನವರಿಯಿಂದ ಏಪ್ರಿಲ್ ವರೆಗೆ 173 ಹಾವು ಕಡಿತ ಪ್ರಕರಣಗಳು ವರದಿಯಾಗಿದ್ದು, ಈ ಪೈಕಿ ಏಪ್ರಿಲ್ ಮಾಹೆಯಲ್ಲಿ ಶಿರಾ ತಾಲ್ಲೂಕಿನಲ್ಲಿ ಹಾವು ಕಡಿತದಿಂದ 1 ಸಾವು ಸಂಭವಿಸಿದೆ ಎಂದು ಜಿಲ್ಲಾ ಸರ್ವೇಲೆನ್ಸ್ ಅಧಿಕಾರಿ ಡಾ: ರಾಮೇಗೌಡ ಸಭೆಗೆ ಮಾಹಿತಿ ನೀಡಿದಾಗ ಹಾವು ಕಡಿತ ಪ್ರಕಣಗಳ ವರದಿ ಯನ್ನು ಪರಿಶೀಲಿಸಿ ಮಾತನಾಡಿದ ಜಿಲ್ಲಾಧಿಕಾರಿಗಳು, ಹಾವು ಕಡಿತಕ್ಕೊಳಗಾದವರು ನಾಟಿ ವೈದ್ಯರಿಂದ ಚಿಕಿತ್ಸೆ ಪಡೆಯದೆ ಆಸ್ಪತ್ರೆ ವೈದ್ಯರಿಂದ ಕೂಡಲೇ ಚಿಕಿತ್ಸೆ ಪಡೆಯಬೇಕು. ಹಾವು ಕಡಿತಕ್ಕೆ ಸರ್ಕಾರಿ ಆಸ್ಪತ್ರೆಗಳಲ್ಲಿ ಲಭ್ಯವಿರುವ ಚಿಕಿತ್ಸೆ, ಔಷಧೋಪಚಾರದ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕೆಂದು ಆರೋಗ್ಯ ಇಲಾಖೆಗೆ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ: ಮಂಜುನಾಥ್, ಮಲೇರಿಯಾ ನಿರ್ಮೂಲನಾಧಿಕಾರಿ ಡಾ: ಚಂದ್ರಶೇಖರ್, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ: ಅಸ್ಗರ್ ಬೇಗ್, ಕ್ಷಯರೋಗ ನಿಯಂತ್ರಣಾಧಿಕಾರಿ ಡಾ: ಸನತ್ ಕುಮಾರ್ ಸೇರಿದಂತೆ ಆರೋಗ್ಯ ಇಲಾಖೆಯ ವಿವಿಧ ಅಧಿಕಾರಿ/ಸಿಬ್ಬಂದಿಗಳು, ವಿವಿಧ ಇಲಾಖೆಯ ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಉದಯವಾಹಿನಿ ಚಿತ್ರ

ಜಿಲ್ಲಾಧಿಕಾರಿ ಖಡಕ್ ಸೂಚನೆ

ಲೋಕಾಯುಕ್ತ ಬಲೆಗೆ ಬಿದ್ದ ಮಹಿಳಾ ಪಿಎಸ್‌ಐ

• ಉದಯವಾಹಿನಿ, ಮೈಸೂರು

ಪ್ರಕರಣವೊಂದರಲ್ಲಿ ಸಿಲುಕಿದ್ದ ವ್ಯಕ್ತಿಯಿಂದ ಲಂಚವನ್ನು ಠಾಣೆಯೊಳಗೆ ಸ್ವೀಕರಿಸುತ್ತಿದ್ದ ಮೈಸೂರಿನ ಕುವೆಂಪುನಗರ ಪೊಲೀಸ್ ಠಾಣೆಯ ಮಹಿಳಾ ಸಬ್ ಇನ್ಸ್‌ಪೆಕ್ಟರ್ ಅನ್ನು ಲೋಕಾಯುಕ್ತ ಪೊಲೀಸರು ರೆಡ್ ಹ್ಯಾಂಡ್‌ಆಗಿಯೇ ಸೆರೆ ಹಿಡಿದಿದ್ದಾರೆ. ಕುವೆಂಪುನಗರ ಠಾಣೆ ಎಸ್‌ಐ ರಾಧಾ ಸಿಕ್ಕಿಬಿದ್ದವರು.

ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದ ಮೈಸೂರು ವಿಭಾಗದ ಲೋಕಾಯುಕ್ತ

ಅಂತರಾಳದಿಂದ... EDITORIAL

ಆರ್‌ಬಿಐನಿಂದ ಹೆಚ್ಚಿನ ಡಿವಿಡೆಂಡ್ ಕೇಂದ್ರ ಸರ್ಕಾರಕ್ಕೆ ಅನಿರೀಕ್ಷಿತ ನೆರವು

ಉದಯವಾಹಿನಿ ಚಿತ್ರ

ಆರ್‌ಬಿಐ ಕಡೆಯಿಂದ ಸಿಕ್ಕಿರುವ ಹೆಚ್ಚಿನ ಮೊತ್ತವು ಮುಂದೆ ರಚನೆ ಆಗಲಿರುವ ಸರ್ಕಾರಕ್ಕೆ ಹಣಕಾಸಿನ ದೃಷ್ಟಿಯಿಂದ ಹೆಚ್ಚಿನ ಅನುಕೂಲಗಳನ್ನು ಕಲ್ಪಿಸಿಕೊಡಲಿದೆ.

ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ಕೇಂದ್ರ ಸರ್ಕಾರಕ್ಕೆ ಡಿವಿಡೆಂಡ್ ರೂಪದಲ್ಲಿ ಭಾರಿ ಮೊತ್ತವನ್ನು ವರ್ಗಾವಣೆ ಮಾಡಲು ತೀರ್ಮಾನಿಸಿದೆ. ಕೇಂದ್ರೀಯ ಬ್ಯಾಂಕ್ ಈ ಬಾರಿ 2.11 ಲಕ್ಷ ಕೋಟಿಯನ್ನು ಕೇಂದ್ರ ಸರ್ಕಾರಕ್ಕೆ ವರ್ಗಾಯಿಸಲಿದೆ. ಇಷ್ಟು ಮೊತ್ತವನ್ನು ಆರ್‌ಬಿಐ ಹಿಂದೆಂದೂ ಡಿವಿಡೆಂಡ್ ರೂಪದಲ್ಲಿ ನೀಡಿದ್ದ ನಿದರ್ಶನ ಇಲ್ಲ. ಇಷ್ಟು ದೊಡ್ಡ ಮೊತ್ತವು ಕೇಂದ್ರ ಸರ್ಕಾರದ ಪಾಲಿಗೆ ಅನಿರೀಕ್ಷಿತವೇ ಹೌದು. ಕೇಂದ್ರಕ್ಕೆ ಹಣದ ಅಗತ್ಯವಿರುವ ಹೊತ್ತಿನಲ್ಲಿ ಸಿಕ್ಕಿರುವ ದೊಡ್ಡ ಇಡುಗಂಟು ಇದು. ಚುನಾವಣೆ ಮುಗಿದ ನಂತರ ರಚನೆಯಾಗಲಿರುವ ಸರ್ಕಾರವು ಈ ಮೊತ್ತದ ಪ್ರಯೋಜನ ಪಡೆದುಕೊಳ್ಳಲಿದೆ. ಕೇಂದ್ರೀಯ ಬ್ಯಾಂಕ್‌ನ ದೇಶಿ ಹಾಗೂ ವಿದೇಶಿ ಆಸ್ತಿಗಳಿಂದ ಸಿಗುವ ಬಡ್ಡಿ ವರಮಾನದಲ್ಲಿ ಏರಿಕೆ ಹಾಗೂ ವಿದೇಶಿ ವಿನಿಮಯ ವಹಿವಾಟಿನಲ್ಲಿ ಆದ ಏರಿಕೆಯು ವರ್ಗಾವಣೆ ಮಾಡಬಹುದಾದ ಮಿಗತೆ ಹಣವು ಹೆಚ್ಚಳ ಕಂಡಿದ್ದಕ್ಕೆ ಕಾರಣ. ಅನಿರೀಕ್ಷಿತವಾಗಿ ಎದುರಾಗಬಹುದಾದ ಹಣಕಾಸಿನ ತುರ್ತು ಸಂದರ್ಭಗಳನ್ನು ನಿಭಾಯಿಸಲು.

ಕಳೆದ ವರ್ಷ ಕೇಂದ್ರ ಸರ್ಕಾರಕ್ಕೆ ಆರ್‌ಬಿಐ ಕಡೆಯಿಂದ ಡಿವಿಡೆಂಡ್ ರೂಪದಲ್ಲಿ ಸಿಕ್ಕ ಹಣ (87,416 ಕೋಟಿ ಮಾತ್ರ. 2024-25ನೇ ಹಣಕಾಸು ವರ್ಷಕ್ಕೆ ಮಂಡಿಸಿರುವ ಮಧ್ಯಂತರ ಬಜೆಟ್‌ನಲ್ಲಿ ಕೇಂದ್ರ ಸರ್ಕಾರವು ತನಗೆ ಆರ್‌ಬಿಐ, ರಾಷ್ಟ್ರೀಕೃತ ಬ್ಯಾಂಕ್‌ಗಳು ಹಾಗೂ ಇತರ ಹಣಕಾಸು ಸಂಸ್ಥೆಗಳಿಂದ ಸಿಗುವ ಮೊತ್ತ 1.02 ಲಕ್ಷ ಕೋಟಿ ಎಂದಷ್ಟೇ ಅಂದಾಜು ಮಾಡಿದೆ. ಈಗ ಕೇಂದ್ರವು ತನ್ನದೇ ಅಂದಾಜಿನ ಎರಡು ಪಟ್ಟು ಹೆಚ್ಚಿನ ಮೊತ್ತವನ್ನು ಆರ್‌ಬಿಐನಿಂದಲೇ ಪಡೆಯಲಿದೆ. ಸರ್ಕಾರದ ಹಣಕಾಸಿನ ಚಿಂತೆಯನ್ನು ಈ ಮೊತ್ತವು ಒಂದಿಷ್ಟುಮಟ್ಟಿಗೆ ತಗ್ಗಿಸಲಿದೆ.

ಅರ್ಥ ವ್ಯವಸ್ಥೆಗೆ ಎದುರಾಗಬಹುದಾದ ಅಪಾಯಗಳನ್ನು ಎದುರಿಸಲು ಆರ್‌ಬಿಐ ತೆಗೆದಿರಿಸುವ ಮೊತ್ತದಲ್ಲಿ (ಸಿಆರ್‌ಬಿ) ಹೆಚ್ಚಳ ಆಗಿರುವುದು ಕೇಂದ್ರೀಯ ಬ್ಯಾಂಕ್ ಹಣಕಾಸಿನ ನಿರ್ವಹಣೆಯಲ್ಲಿ ಬಹಳ ಶಿಸ್ತಿನ ನಡೆ ಇರಿಸುತ್ತಿದೆ ಎಂಬುದನ್ನು ತೋರಿಸುತ್ತದೆ. ಈ ಹಿಂದೆ ಆರ್‌ಬಿಐನ ಒಟ್ಟು ಜಮಾಖರ್ಚು ಪಟ್ಟಿಯ (ಬ್ಯಾಲನ್ಸ್ ಷೀಟ್) ಶೇಕಡ 6ರಷ್ಟು ಮೊತ್ತವನ್ನು ಸಿಆರ್‌ಬಿ ಉದ್ದೇಶಕ್ಕೆ ಮೀಸಲು ಇಡಲಾಗುತ್ತಿತ್ತು. 2024-25ಕ್ಕೆ ಅದನ್ನು ಶೇ.6.5ಕ್ಕೆ ಹೆಚ್ಚಿಸಲಾಗಿದೆ. ಇದು ಅರ್ಥ ವ್ಯವಸ್ಥೆಯಲ್ಲಿ ಆರ್‌ಬಿಐ ಹೊಂದಿರುವ ವಿಶ್ವಾಸವನ್ನು ತೋರಿಸುತ್ತದೆ. ಸಿಆರ್‌ಬಿ ಮೊತ್ತವನ್ನು ಹೆಚ್ಚಿಸುವ ಮೂಲಕ ಆರ್‌ಬಿಐ ಯಾವುದೇ ಕೆಟ್ಟ ಪರಿಸ್ಥಿತಿಯನ್ನು, ಅದರಲ್ಲೂ ಮುಖ್ಯವಾಗಿ ಅಂತರರಾಷ್ಟ್ರೀಯ ಹಣಕಾಸು ವ್ಯವಸ್ಥೆಯಲ್ಲಿನ ಸಮಸ್ಯೆಗಳ ಕಾರಣದಿಂದಾಗಿ ಸೃಷ್ಟಿಯಾಗುವ ಅಪಾಯಗಳನ್ನು ನಿಭಾಯಿಸಲು ದೇಶದ ಅರ್ಥ ವ್ಯವಸ್ಥೆಗೆ ಹೆಚ್ಚಿನ ಶಕ್ತಿಯನ್ನು ನೀಡಿದಂತೆ ಆಗಿದೆ. ಆರ್ ಬಿಐ ಗವರ್ನರ್ ಆಗಿದ್ದ ಬಿಮಲ್ ಜಲನ್ ನೇತೃತ್ವದ ಸಮಿತಿಯು ರೂಪಿಸಿದ್ದ ಸೂತ್ರಕ ಅನುಗುಣವಾಗಿ ಸಿಆರ್‌ಬಿ ಮೊತ್ತವನ್ನು ಲೆಕ್ಕಹಾಕಲಾಗಿದೆ. ಆರ್‌ಬಿಐ ಕಡೆಯಿಂದ ಸಿಕ್ಕಿರುವ ಹೆಚ್ಚಿನ ಮೊತ್ತವು ಮುಂದೆ ರಚನೆ ಆಗಲಿರುವ ಸರ್ಕಾರಕ್ಕೆ ಹಣಕಾಸಿನ ದೃಷ್ಟಿಯಿಂದ ಹೆಚ್ಚಿನ ಅನುಕೂಲಗಳನ್ನು ಕಲ್ಪಿಸಿಕೊಡಲಿದೆ. ಇದು ಬಜೆಟ್ ಮಂಡನೆಯ ಸಂದರ್ಭದಲ್ಲಿ ಅರಿವಿಗೆ ಬರಲಿದೆ. ಹೆಚ್ಚಿನ ಡಿವಿಡೆಂಡ್ ವರಮಾನವನ್ನು ನೆಚ್ಚಿಕೊಂಡು ವಿತ್ತೀಯ ಕೊರತೆಯನ್ನು ಕಡಿಮೆ ಮಾಡಲು ಅವಕಾಶ ಇದೆ. ವಿತ್ತೀಯ ಕೊರತೆಯು 2023-24ನೇ ಆರ್ಥಿಕ ವರ್ಷದಲ್ಲಿ ದೇಶದ ಒಟ್ಟು ಆಂತರಿಕ ಉತ್ಪಾದನೆಯ (ಜಿಡಿಪಿ) ಶೇ.5.8ರಷ್ಟು ಇದ್ದಿದ್ದನ್ನು, 2024-25ನೇ ಆರ್ಥಿಕ ವರ್ಷಕ್ಕೆ ಶೇ 5.1ಕ್ಕೆ ತಗ್ಗಿಸಲಾಗುವುದು ಎಂದು ಕೇಂದ್ರವು ಈಗಾಗಲೇ ಭರವಸೆ ನೀಡಿದೆ. ಅಲ್ಲದೆ, ಅಭ್ಯುದಯ ಕಾರ್ಯಕ್ರಮಗಳಿಗೆ ಅಥವಾ ಬಂಡವಾಳ ವೆಚ್ಚಕ್ಕೆ ಕೂಡ ಈ ಹಣವನ್ನು ಬಳಸಿಕೊಳ್ಳಲು ಕೇಂದ್ರಕ್ಕೆ ಅವಕಾಶ ಇದೆ. ನಿರೀಕ್ಷಿತ ಇತರ ವರಮಾನಗಳಲ್ಲಿ ಆಗಬಹುದಾದ ಯಾವುದೇ ಕೊರತೆಯನ್ನು ಭರ್ತಿ ಮಾಡಿಕೊಳ್ಳಲು ಅಥವಾ ಬಂಡವಾಳ ಹಿಂತೆಗೆತದ ಗುರಿಯನ್ನು ತಲುಪಲು ಆಗದೇ ಇದ್ದುದರಿಂದ ಉಂಟಾಗುವ ವರಮಾನದ ಕೊರತೆಯನ್ನು ಒಂದಿಷ್ಟು ನೀಗಿಸಿಕೊಳ್ಳಲು ಈ ಡಿವಿಡೆಂಡ್ ನೆರವಾಗಬಹುದು. ವಿತ್ತೀಯ ಕೊರತೆಯ ಮೇಲೆ ಹಿಡಿತ ಸಾಧಿಸಿದಾಗ ಕೇಂದ್ರಕ್ಕೆ ಹಣದುಬ್ಬರವನ್ನು ನಿಯಂತ್ರಣದಲ್ಲಿ ಇರಿಸಲಿಕ್ಕೂ ಸಾಧ್ಯವಾಗಲಿದೆ.

ಹೆಲ್ತ್‌ಕೇರ್‌ನಿಂದ ಗರ್ಭಧಾರಣೆಯ ಸಮಯದಲ್ಲಿನ ಅಪಾಯಗಳ ಬಗ್ಗೆ ಮಹತ್ವದ ಅಧ್ಯಯನ

• ಉದಯವಾಹಿನಿ, ಬೆಂಗಳೂರು

ಮಹಿಳೆ ಮತ್ತು ಮಕ್ಕಳ ಆರೋಗ್ಯ ಸಮಸ್ಯೆಗಳ ಬಗ್ಗೆ ಜಾಗೃತಿ ಮೂಡಿಸಲು ಸದಾ ಬದ್ಧವಾಗಿರುವ ಮೆಟ್ರೊಪೊಲಿಸ್ ಹೆಲ್ತ್‌ಕೇರ್ ಲಿಮಿಟೆಡ್, ಭಾರತದ ಪ್ರಮುಖ ಡಯಾಗ್ನೋಸ್ಟಿಕ್ ಸೇವಾ ಪೂರೈಕೆದಾರ ಸಂಸ್ಥೆಯಾಗಿದ್ದು ಮಗುವಿನ ಆರೋಗ್ಯದ ಬಗ್ಗೆ ಅಗತ್ಯ ಜ್ಞಾನ ಮತ್ತು ಅರಿವನ್ನು ನೀಡಿ ದಂಪತಿಗಳನ್ನು ಸಬಲೀಕರಣಗೊಳಿಸುವ ಉದ್ದೇಶಕ್ಕೆ ಸಮರ್ಪಿತವಾಗಿದೆ.

ಅಧ್ಯಯನವು ಇವುಗಳನ್ನು ಬಹಿರಂಗಪಡಿಸಿದೆ

- **140,528 ಗರ್ಭಧಾರಣೆಗಳಲ್ಲಿ, 5,879 ರಲ್ಲಿ ಹೆಚ್ಚಿನ ಅಪಾಯಗಳಿವೆ ಎಂದು ಸಾಂಪ್ರದಾಯಿಕ ಆರಂಭಿಕ ತ್ರೈಮಾಸಿಕ ಸ್ಕ್ರೀನಿಂಗ್‌ಗಳ ಮೂಲಕ ಗುರುತಿಸಲಾಗಿದೆ.**
- **ಆದರೂ, ಎನ್‌ಐಪಿಟಿಯನ್ನು ಪ್ರೆಗಾಸ್ಕ್ರೀನ್ ರಿಫ್ಲೆಕ್ಸ್ ಪರೀಕ್ಷೆಯೊಂದಿಗೆ ಸಂಯೋಜಿಸುವ ಮೂಲಕ, ಬಂದ ಫಲಿತಾಂಶಗಳು ನಿಜಕ್ಕೂ ಅಪಾಯ ಹೆಚ್ಚಿರುವ ಪ್ರಕರಣಗಳನ್ನು ಗುರುತಿಸುವಲ್ಲಿ ಹೆಚ್ಚು ನಿಖರವಾಗಿವೆ.**

140,528 ಗರ್ಭಿಣಿಯರನ್ನು ಒಳಗೊಂಡ ಮೂರು ವರ್ಷಗಳ ಸಮಗ್ರ ಅಧ್ಯಯನದಲ್ಲಿ (ಜನವರಿ 2021 ರಿಂದ ಡಿಸೆಂಬರ್ 2023) ಮೆಟ್ರೊಪೊಲಿಸ್, ಪ್ರಸವಪೂರ್ವ ಆರೈಕೆಯಲ್ಲಿನ ಪ್ರಮುಖ ಸಂಶೋಧನೆಗಳನ್ನು ಪ್ರೆಗಾಸ್ಕ್ರೀನ್ ರಿಫ್ಲೆಕ್ಸ್ ಪರೀಕ್ಷೆಯ ಮೂಲಕ ಒಳಗೆ ಪ್ರವೇಶಿಸದ ಪ್ರಸವಪೂರ್ವ ಪರೀಕ್ಷೆ (ಎನ್‌ಐಪಿಟಿ) ಅಥವಾ ಕಾರ್ಯೋಟೈಪಿಂಗ್ ಜೊತೆ ಬಿಡುಗಡೆ ಮಾಡಿದೆ. ಈ ಅಧ್ಯಯನವು ಭ್ರೂಣದ ಅಸಹಜತೆಗಳನ್ನು ಪತ್ತೆಹಚ್ಚಲು ರಿಫ್ಲೆಕ್ಸ್ ಪರೀಕ್ಷೆಯ ಪರಿಣಾಮವನ್ನು ನಿರ್ಣಯಿಸುವ ಗುರಿಯನ್ನು ಹೊಂದಿದೆ.

ಮೊದಲ ತ್ರೈಮಾಸಿಕದಲ್ಲಿ, ಆರಂಭದಲ್ಲಿ ನಡೆಸಿದ ಡ್ಯೂಯಲ್ ಮಾರ್ಕರ್ ಪರೀಕ್ಷೆ 2,416 ಪ್ರಕರಣಗಳಲ್ಲಿ ಅಪಾಯ ಹೆಚ್ಚಿದೆ ಎಂದು ಸೂಚಿಸಿದೆ. ಎನ್‌ಐಪಿಟಿ ರಿಫ್ಲೆಕ್ಸ್ ಪರೀಕ್ಷೆ ಮಾಡಿದ ಬಳಿಕ ಇವುಗಳಲ್ಲಿ 64 ಮಾತ್ರ ಹೆಚ್ಚು ಅಪಾಯಕಾರಿ ಎಂದು ವರ್ಗೀಕರಿಸಲ್ಪಟ್ಟಿವೆ. ಇದರಿಂದಾಗಿ 1,142 ಪ್ರಕರಣಗಳನ್ನು ಕಡಿಮೆ ಅಪಾಯ ಉಳ್ಳವೆಂದು ನಿಖರವಾಗಿ ಗುರುತಿಸಲಾಗಿದೆ. ಅಂತೆಯೇ, ಎರಡನೇ ತ್ರೈಮಾಸಿಕದಲ್ಲಿ, ಕ್ವಾಡ್ರುಪಲ್ ಮಾರ್ಕರ್‌ನಿಂದ ಗುರುತಿಸಿದ್ದ 3,463 ಪ್ರಕರಣಗಳಲ್ಲಿ, 455 ಪ್ರಕರಣಗಳನ್ನು ಕಡಿಮೆ ಅಪಾಯ ಉಳ್ಳವೆಂದು ಎನ್‌ಐಪಿಟಿ ಸರಿಯಾಗಿ ತಿಳಿಸಿದೆ. ಕೇವಲ 20 ರಲ್ಲಿ ಮಾತ್ರ ಈಗಲೂ ಹೆಚ್ಚಿನ ಅಪಾಯವಿದೆಯೆಂದು ಪರಿಗಣಿಸಲಾಗಿದೆ.

ಉದಯವಾಹಿನಿ ಚಿತ್ರ

ಸಂಶೋಧನೆಗಳ ಕುರಿತು ಪ್ರತಿಕ್ರಿಯೆ

ಪ್ರಸವಪೂರ್ವ ಸ್ಕ್ರೀನಿಂಗ್‌ನ ನಿಖರತೆಯನ್ನು ಸುಧಾರಿಸುವಲ್ಲಿ ಎನ್‌ಐಪಿಟಿ ಮತ್ತು ಪ್ರೆಗಾಸ್ಕ್ರೀನ್ ರಿಫ್ಲೆಕ್ಸ್ ಪರೀಕ್ಷೆಗಳ ಗಮನಾರ್ಹ ನಿಖರತೆಯನ್ನು ಈ ಸಂಶೋಧನೆಗಳು ಎತ್ತಿ ತೋರಿಸುತ್ತವೆ. ಈ ಸಮಗ್ರ ವಿಧಾನವು ತಪ್ಪಾಗಿ ಪಾಸಿಟಿವ್ ಎಂದು ಗುರುತಿಸುವುದನ್ನು ಕಡಿಮೆ ಮಾಡುವ ಮೂಲಕ ಮತ್ತು ನಿಜವಾದ ಹೆಚ್ಚಿನ-ಅಪಾಯದ ಗರ್ಭಧಾರಣೆಯನ್ನು ನಿಖರವಾಗಿ ಗುರುತಿಸುವ ಮೂಲಕ, ಹೆಚ್ಚು ಕೇಂದ್ರೀಕೃತ ಮತ್ತು ಪರಿಣಾಮಕಾರಿ ಪ್ರಸವಪೂರ್ವ ಆರೈಕೆಗೆ ಅವಕಾಶ ಮಾಡಿಕೊಡುತ್ತದೆ. ಅಂತಿಮವಾಗಿ, ಇದರಿಂದ ತಾಯಿ ಮತ್ತು ಭ್ರೂಣದ ಆರೋಗ್ಯ ಸುಧಾರಿಸುತ್ತದೆ.

ಮೆಟ್ರೊಪೊಲಿಸ್ ಹೆಲ್ತ್ ಕೇರ್ ಲಿಮಿಟೆಡ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಂದ್ರನ್ ಚೆಮ್ಮೆಂಕೋಟಿಲ್ ಹೇಳುತ್ತಾರೆ ಮೆಟ್ರೊಪೊಲಿಸ್‌ನಲ್ಲಿ, ನಮ್ಮ ಆರೋಗ್ಯ ರಕ್ಷಣೆಯ ಕುರಿತಂತೆ ನಮಗಿರುವ ಬದ್ಧತೆ ಕೇವಲ ರೋಗನಿರ್ಣಯಕ್ಕೆ ಸೀಮಿತವಾಗಿಲ್ಲ. ಹಲವಾರು ವರ್ಷಗಳ ಹಿಂದೆ ಅಭಿವೃದ್ಧಿಪಡಿಸಲಾದ ನಮ್ಮ ಪ್ರವರ್ತಕ ರಿಫ್ಲೆಕ್ಸ್ ಪರೀಕ್ಷೆ ಸಮಗ್ರ ಮತ್ತು ನಿರ್ಣಾಯಕ ರೋಗನಿರ್ಣಯವನ್ನು ನೀಡುತ್ತದೆ, ಸಮಯವನ್ನು ಉಳಿಸುತ್ತದೆ ಮತ್ತು ರೋಗಿಗಳಿಗೆ ಹೆಚ್ಚುವರಿ ವೆಚ್ಚದ ಹೊರೆಯನ್ನು ಕಡಿಮೆ ಮಾಡುತ್ತದೆ. ನವೀನ ರೋಗನಿರ್ಣಯ ಸಾಧನಗಳು ಮತ್ತು ಸುಧಾರಿತ ಸ್ಕ್ರೀನಿಂಗ್ ತಂತ್ರಜ್ಞಾನಗಳ ಮೂಲಕ ತಾಯಿಯ ಆರೋಗ್ಯ ಪರೀಕ್ಷೆಯನ್ನು ಇನ್ನಷ್ಟು ಆಧುನಿಕೀಕರಿಸಲು ನಾವು ಬದ್ಧರಾಗಿದ್ದೇವೆ. ಮಹಿಳೆಯರು ಮತ್ತು ಮಕ್ಕಳ ಆರೋಗ್ಯ ರಕ್ಷಣೆಯಲ್ಲಿ ಮೆಟ್ರೋಪೊಲಿಸ್ ಒಂದು ಶ್ರೇಷ್ಠತೆಯ ಕೇಂದ್ರವಾಗಬೇಕು, ತಿಳುವಳಿಕೆಯುಳ್ಳ ನಿರ್ಧಾರಗಳಿಗಾಗಿ ಅಗತ್ಯ ಜ್ಞಾನವನ್ನು ಹೊಂದಿರುವ ರೋಗಿಗಳು ಮತ್ತು ಆರೋಗ್ಯ ಪೂರೈಕೆದಾರರನ್ನು ಸಬಲೀಕರಣಗೊಳಿಸಬೇಕು ಮತ್ತು ವ್ಯಾಪಕ ಸಂಶೋಧನಾ ಅಧ್ಯಯನಗಳ ಮೂಲಕ ಜಾಗೃತಿ ಮೂಡಿಸಬೇಕು ಎನ್ನುವುದೇ ನಮ್ಮ ಧ್ಯೇಯ.

ಸಂಶೋಧನೆಗಳ ಕುರಿತು ಪ್ರತಿಕ್ರಿಯಿಸಿದ, ಮೆಟ್ರೊಪೊಲಿಸ್ ಹೆಲ್ತ್‌ಕೇರ್ ಲಿಮಿಟೆಡ್‌ನ ಮುಖ್ಯ ವೈಜ್ಞಾನಿಕ ಮತ್ತು ನಾವೀನ್ಯತೆ ಅಧಿಕಾರಿ ಡಾ. ಕೀರ್ತಿ ಚಡ್ಡಾ ಹೇಳುತ್ತಾರೆ: ಪ್ರೆಗಾಸ್ಕ್ರೀನ್ ರಿಫ್ಲೆಕ್ಸ್ ಪರೀಕ್ಷೆ ಕಡಿಮೆ ವೆಚ್ಚದ, ವೈಜ್ಞಾನಿಕ ವಿಧಾನವಾಗಿದ್ದು ಸಾಂಪ್ರದಾಯಿಕ ಸ್ಕ್ರೀನಿಂಗ್ ವಿಧಾನಗಳಿಗಿಂತ ಗಮನಾರ್ಹವಾಗಿ ಪರಿಣಾಮಕಾರಿಯಾಗಿದೆ. ಒಳಗೆ ಪ್ರವೇಶಿಸದ ಮತ್ತು ತ್ವರಿತವಾದ ಈ ವಿಧಾನ ಗರ್ಭಪಾತದ ಅಪಾಯವನ್ನು ಕಡಿಮೆ ಮಾಡುತ್ತದೆ; ತಾಯ್ತಂದೆಯರಿಗೆ ಮತ್ತು ಅವರ ಕುಟುಂಬ ಸದಸ್ಯರಿಗೆ ಆಗಬಹುದಾದ ಮಾನಸಿಕ ಆಘಾತವನ್ನು ಗಮನಾರ್ಹವಾಗಿ ಕಡಿಮೆ ಮಾಡುತ್ತದೆ ಮತ್ತು ಗರ್ಭಧಾರಣೆಯ ಆರಂಭದಲ್ಲಿ ಭ್ರೂಣದ ವರ್ಣತಂತುಗಳ ಅಸಹಜತೆಗಳನ್ನು ಕಂಡುಹಿಡಿಯುವಲ್ಲಿ ಇದು ಹೆಚ್ಚು ನಿಖರವಾಗಿದೆ.

ಮಳೆ: ಕರ್ನಾಟಕದ ಡ್ಯಾಂಗಳಲ್ಲಿ ಎಷ್ಟಿದೆ ನೀರು!

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ಉತ್ತಮ ಮಳೆ ಬೀಳುತ್ತಿದ್ದು, ಹೀಗಾಗಿ ಕರ್ನಾಟಕದ ನೀರಿನ ಬವಣೆ ಕೂಡ ನಿಧಾನವಾಗಿ ಕಡಿಮೆ ಆಗ್ತಿದೆ. ಅದ್ರಲ್ಲೂ ಕರ್ನಾಟಕದ ಜಲಾಶಯಗಳಿಗೆ ಉತ್ತಮ ಪ್ರಮಾಣದ ನೀರು ಕೂಡ ಹರಿದು ಬರುತ್ತಿದೆ. ಹಾಗಾದ್ರೆ ಕರ್ನಾಟಕದ ಯಾವ ಡ್ಯಾಂನಲ್ಲಿ ಎಷ್ಟು ನೀರಿದೆ ಯಾವ ಜಲಾಶಯಕ್ಕೆ ಎಷ್ಟು ನೀರು ಹರಿದು ಬರ್ತಿದೆ

ಮಳೆ ಇಲ್ಲದೆ ಸೊರಗಿದ್ದ ಕರ್ನಾಟಕದ ಜನರಿಗೆ ಮಳೆರಾಯ ಕಳೆದ ಒಂದು ತಿಂಗಳಿಂದ ಭಾರಿ ದೊಡ್ಡ ಕೊಡುಗೆ ನೀಡಿದ್ದಾನೆ. ಅದರಲ್ಲೂ ಭರ್ಜರಿ ಮಳೆಗೆ, ಕರ್ನಾಟಕದ ಪ್ರತಿಯೊಂದು ಜಿಲ್ಲೆ ಕೂಡ ತಂಪಾಗಿದೆ. ಹೀಗಿದ್ದಾಗಲೇ ಮುಂಗಾರು ಮಳೆಯ ಮೋಡಗಳು ಕರ್ನಾಟಕದ ಕಡೆಗೆ ಓಡೋಡಿ ಬರುತ್ತಿದ್ದು, ಇನ್ನೇನು ಕೆಲವೇ ಗಂಟೆಗಳಲ್ಲಿ ಕರ್ನಾಟಕ ಪ್ರವೇಶಿಸಲಿವೆ. ಈ ಸಮಯದಲ್ಲೇ ಕರ್ನಾಟಕದ ಜಲಾಶಯಗಳು ನಿಧಾನವಾಗಿ ತುಂಬುತ್ತಿವೆ. ಅದರಲ್ಲೂ ಈಗ ಕಾವೇರಿ ಕೊಳ್ಳದಲ್ಲಿ ಭರ್ಜರಿ ನೀರು ಹರಿದು ಬರ್ತಿದೆ.

ಹೇಮಾವತಿ ಡ್ಯಾಂ: ಕಾವೇರಿ ಉಪನದಿ ಹೇಮಾವತಿಗೆ ಕಟ್ಟಿದ ಡ್ಯಾಂ ಹೇಮವತಿ ಜಲಾಶಯ ಇಲ್ಲಿ 37.10 ಟಿಎಂಸಿ ಸಾಮರ್ಥ್ಯ ಇದ್ದು, ಇದೀಗ 9.90 ಟಿಎಂಸಿ ಉಳಿದಿದೆ. ಆದರೆ ಕಳೆದ ವರ್ಷ ಇದೇ ವೇಳೆಗೆ ಬರೋಬ್ಬರಿ 16.91 ಟಿಎಂಸಿ ನೀರು ಹೇಮಾವತಿ ಡ್ಯಾಂನಲ್ಲಿ ಸಂಗ್ರಹವಾಗಿ ಆಗಿತ್ತು. 579 ಕ್ಯುಸೆಕ್ ಒಳಹರಿವು ಇದ್ದು, 250 ಕ್ಯುಸೆಕ್ ಹೊರಗೆ ಬಿಡಲಾಗುತ್ತಿದೆ.

ಹಾರಂಗಿ ಜಲಾಶಯ: ಹಾರಂಗಿ ಡ್ಯಾಂನಲ್ಲಿ ನೀರೆ ಇಲ್ಲ ಹೀಗಾಗಿ ಡೆಡ್ ಸ್ಟೋರೆಜ್‌ಗೆ ಡ್ಯಾಂ ತಲುಪಿದೆ. ಗರಿಷ್ಠ 8.50 ಟಿಎಂಸಿ ಸಾಮರ್ಥ್ಯ ಇರುವ ತುಂಗಭದ್ರಾ ಡ್ಯಾಂನಲ್ಲಿ ಕೇವಲ 3.03 ಟಿಎಂಸಿ ನೀರು ಉಳಿದಿದೆ. ಕಳೆದ ವರ್ಷ 2.62 ಟಿಎಂಸಿ ನೀರು ಸಂಗ್ರಹ ಇತ್ತು. ಹೀಗಾಗಿ ಇಲ್ಲಿ ಕೂಡ ಜನ ಮಳೆಗಾಗಿ ಕಾಯುತ್ತಿದ್ದಾರೆ.

ಕರ್ನಾಟಕದ ಡ್ಯಾಂಗಳ ನೀರಿನ ಮಟ್ಟ

- **ಕೆಆರ್‌ಎಸ್ ಜಲಾಶಯ: 49.45 ಟಿಎಂಸಿ ಗರಿಷ್ಠ ಸಾಮರ್ಥ್ಯ ಹೊಂದಿರುವ ಕೆಆರ್‌ಎಸ್ ಡ್ಯಾಂ ಇದೀಗ 12.51 ಟಿಎಂಸಿ ನೀರು ಸಂಗ್ರಹ ಹೊಂದಿದೆ. ಹಾಗೇ ಕೆಆರ್‌ಎಸ್ ಜಲಾಶಯಕ್ಕೆ 1,798 ಕ್ಯುಸೆಕ್ ನೀರು ಹರಿದು ಬರುತ್ತಿದ್ದು ಕಳೆದ ವರ್ಷ ಈ ಸಮಯಕ್ಕೆ ಕೆಆರ್‌ಎಸ್ ಡ್ಯಾಂನಲ್ಲಿ 10.66 ಟಿಎಂಸಿ ನೀರು ಸಂಗ್ರಹ ಆಗಿತ್ತು. ಇದೀಗ 542 ಕ್ಯುಸೆಕ್ ನೀರನ್ನ ಡ್ಯಾಂನಿಂದ ಹೊರಗೆ ಬಿಡಲಾಗುತ್ತಿದೆ.**
- **ಕಬಿನಿ ಜಲಾಶಯ: ಕಬಿನಿ ಡ್ಯಾಂ ಕರ್ನಾಟಕದ ಪ್ರಮುಖ ಡ್ಯಾಂ ಪೈಕಿ ಒಂದಾಗಿದೆ. ಇಲ್ಲಿ 19.52 ಟಿಎಂಸಿ ಗರಿಷ್ಠ ನೀರು ಸಂಗ್ರಹ ಮಾಡಬಹುದು. ಆದರೆ ಈಗ ಕೇವಲ 7.55 ಟಿಎಂಸಿ ನೀರು ಸಂಗ್ರಹ ಇದ್ದು, 330 ಕ್ಯುಸೆಕ್ ನೀರು ಒಳಗೆ ಹರಿದು ಬರುತ್ತಿದೆ. ಭಾರಿ ಮಳೆಯ ಹಿನ್ನೆಲೆ ಮೈಸೂರಿನ ಈ ಜಲಾಶಯಕ್ಕೆ ನೀರು ಬರುತ್ತಿದ್ದು 300 ಕ್ಯುಸೆಕ್ ನೀರನ್ನ ಹೊರ ಬಿಡಲಾಗುತ್ತಿದೆ.**

ಹಿಂದೂ ಜನಜಾಗೃತಿ ಸಮಿತಿಯಿಂದ ಕೇಂದ್ರ ಸರಕಾರಕ್ಕೆ ಮನವಿ

• ಉದಯವಾಹಿನಿ, ಬೆಂಗಳೂರು

ಹಿಂದೂ ದೇವಸ್ಥಾನದಲ್ಲಿ ಕೆಲಸ ಮಾಡಲು ಹೋಗುವುದು ಎಲ್ಲಕ್ಕಿಂತ ದೊಡ್ಡ ಮಹಾಪಾಪವಾಗಿದೆ, ಹಾಗೂ ದೇವಸ್ಥಾನ ಅಥವಾ ಚರ್ಚ್‌ಗಳಿಗೆ ಹೋಗುವುದಕ್ಕಿಂತ ಸಾವಿರಾರು ಜನರನ್ನು ಕೊಲ್ಲುವ ಶಸ್ತ್ರಗಳ ತಯಾರಿಸುವ ಕಾರ್ಖಾನೆಗೆ ಹೋಗುವುದು ಹೆಚ್ಚು ಉತ್ತಮ. ದೇವಸ್ಥಾನ ಅಥವಾ ಚರ್ಚಗಳಲ್ಲಿ ಶಿರ್ಕ (ಮಹಾಪಾಪ) ಮಾಡಲಾಗುತ್ತದೆ. ಶಿರ್ಕ ಇದು ಇಸ್ಲಾಮಿನ ಪ್ರಕಾರ ಮಹಾ ಪಾಪವಾಗಿದೆ. ಅಲ್ಲಾಹ ಸ್ಪಷ್ಟವಾಗಿ ಹೇಳಿದ್ದಾನೆ, ''ನಾನು ಯಾರನ್ನಾದರೂ ಕ್ಷಮಿಸಬಹುದು, ಆದರೆ ಶಿರ್ಕ ಮಾಡುವವರನ್ನು ಎಂದಿಗೂ ಕ್ಷಮಿಸುವುದಿಲ್ಲ.'' ಈ ರೀತಿ ಅನೇಕ ಆಕ್ಷೇಪಾರ್ಹ ಹೇಳಿಕೆಗಳನ್ನು, ಇಸ್ಲಾಮಿಕ್ ರಿಸರ್ಚ್ ಫೌಂಡೇಶನ್ ನ ಡಾ. ಜಾಕೀರ್ ನಾಯಕ್ ಇವನು 'ಹುಡಾ ಟಿ.ವಿ.' ಹೆಸರಿನ ಯುಟ್ಯೂಬ್ ಚಾನೆಲ್‌ನ ಸಂದರ್ಶನದಲ್ಲಿ ಹೇಳ

ಅಪಘಾತಗಳನ್ನು ತಡೆಯಲು ಈ ಕ್ರಮ ಅನಿವಾರ್ಯ

ಜವನಗೊಂಡನಹಳ್ಳಿಯ ಸೇವಾ ಬಸ್ ರಸ್ತೆಗೆ ನಿಯಮಿತವಾಗಿ ಬಾರದೇ ಇರುವುದರಿಂದ ಪ್ರಯಾಣಿಕರು ನಿತ್ಯವೂ ಪರದಾಟ

• ಉದಯವಾಹಿನಿ, ಹಿರಿಯೂರು

ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳು ರಾಷ್ಟ್ರೀಯ ಹೆದ್ದಾರಿ 4ರಲ್ಲಿರುವ ತಾಲ್ಲೂಕಿನ ಜವನಗೊಂಡ ನಹಳ್ಳಿಯ ಸೇವಾ ರಸ್ತೆಗೆ ನಿಯಮಿತವಾಗಿ ಬಾರದೇ ಇರುವುದರಿಂದ ಪ್ರಯಾಣಿಕರು ನಿತ್ಯವೂ ಪರದಾಡುವಂತಾಗಿದೆ.ಜವನಗೊಂಡನಹಳ್ಳಿಯಿಂದ ಹಿರಿಯೂರು, ಶಿರಾ, ದಾವಣಗೆರೆ, ಬೆಂಗಳೂರು ನಗರಗಳಿಗೆ ಕನಿಷ್ಠ 150 ರಿಂದ 200 ವಿದ್ಯಾರ್ಥಿಗಳು ಹಾಗೂ ಪ್ರಯಾಣಿಕರು ಪ್ರತಿನಿತ್ಯವೂ ಸಂಚರಿಸುತ್ತಾರೆ.

ರಸ್ತೆಗೆ ಇಳಿಯದ ಸರ್ಕಾರಿ ಬಸ್‌ಗಳು

ಮೇ 23ರಂದು ಹೆದ್ದಾರಿಯಲ್ಲಿ ಸರಣಿ ಅಪಘಾತವೊಂದು ಸಂಭವಿಸಿ ವ್ಯಕ್ತಿಯೊಬ್ಬರು ಮೃತಪಟ್ಟಿದ್ದರು. ಈ ಘಟನೆಯ ನಂತರ ಪೊಲೀಸ್ ಇಲಾಖೆಯ ಹೆದ್ದಾರಿಗೆ ಯಾರೂ ಇಳಿಯದಂತೆ ತಡೆಯಲು ರಸ್ತೆ ಅಂಚಿನಲ್ಲಿ ಎತ್ತರದ ಗೋಡೆ ನಿರ್ಮಿಸಿದೆ. ರಸ್ತೆಯಿಂದ ರಸ್ತೆಗೆ ದಾಟುವುದನ್ನು ತಪ್ಪಿಸಲು ವಿಭಜಕದ

ಉದಯವಾಹಿನಿ ಚಿತ್ರ

ಮೇಲೆ ತಂತಿ ಬೇಲಿಯನ್ನೂ ಅಳವಡಿಸಿದೆ. ಇದರಿಂದ ಪ್ರಯಾಣಿಕರು ಸೇವಾ ರಸ್ತೆ ಮೇಲೆ ಬಸ್‌ಗಾಗಿ ಕಾಯುವುದು ಅನಿವಾರ್ಯವಾಗಿದೆ. ಆ ರಸ್ತೆಯಲ್ಲಿ ಬಸ್‌ಗಳೇ ಬರದಿರುವುದು ಅವರನ್ನು ಚಿಂತೆಗೀಡುಮಾಡಿದೆ.

ಹೆದ್ದಾರಿಯಲ್ಲಿ ಸಾಗುವ ಎಲ್ಲಾ ಬಸ್‌ಗಳು ಸೇವಾ ರಸ್ತೆಯ ಮೂಲಕ ಸಂಚರಿಸುವಂತಾಗಬೇಕು. ಈ ಸಂಬಂಧ ಕೆಎಸ್‌ಆರ್‌ಟಿಸಿ ಅಧಿಕಾರಿಗಳ ಜೊತೆ ಚರ್ಚಿಸುತ್ತೇವೆ. ಪದೇ ಪದೇ ಸಂಭವಿಸುವ ಅಪಘಾತಗಳನ್ನು ತಡೆಯಲು ಈ ಕ್ರಮ ಅನಿವಾರ್ಯ ಎಂದು ಪೊಲೀಸರು ತಿಳಿಸಿದ್ದಾರೆ. ಅವರ ನಿರ್ಧಾರಕ್ಕೆ ಸಾರ್ವಜನಿಕರೂ ಸಹಮತ ವ್ಯಕ್ತಪಡಿಸಿದ್ದಾರೆ' ಎಂದು

> ರಸ್ತೆ ಮಧ್ಯದಲ್ಲಿ ತಂತಿಬೇಲಿ ಅಳವಡಿಸಿರುವುದಕ್ಕೆ ನಮ್ಮ ಅಭ್ಯಂತರವೇನೂ ಇಲ್ಲ. ಆದರೆ ಹೆದ್ದಾರಿ ಅಂಚಿಗೆ ಕಟ್ಟಿರುವ ಗೋಡೆಯನ್ನು ತೆಗೆದು ಅಲ್ಲಿ ನಾಲ್ಕನೇ ಮಾರ್ಗ ನಿರ್ಮಿಸಬೇಕು. ಇಲ್ಲವೇ ಎಲ್ಲಾ ಬಸ್‌ಗಳೂ ಸೇವಾ ರಸ್ತೆಯ ಮೂಲಕ ಸಂಚರಿಸುವಂತೆ ಮಾಡಬೇಕು
>
> -ಖಾಲಿದ್ ಹುಸೇನ್
> ಗ್ರಾ.ಪಂ. ಮಾಜಿ ಅಧ್ಯಕ್ಷ

ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಖಾಲಿದ್ ಹುಸೇನ್ ಹೇಳಿದರು.

ಹೆದ್ದಾರಿಯಲ್ಲಿ ಸಾಗುವ ಬಹಳಷ್ಟು ಬಸ್‌ಗಳು ಸೇವಾ ರಸ್ತೆಗೆ ಇಳಿಯುತ್ತಿಲ್ಲ. ಈಶಾನ್ಯ ಹಾಗೂ ವಾಯವ್ಯ ಕರ್ನಾಟಕ ಸಾರಿಗೆ ಬಸ್‌ಗಳು ಸೀಟುಗಳು ಖಾಲಿ ಇದ್ದರೆ ಮಾತ್ರ ಸೇವಾ ರಸ್ತೆಗೆ ಬರುತ್ತವೆ. ಆದರೆ ದಾವಣಗೆರೆ, ಚಿತ್ರದುರ್ಗದಿಂದ ಬರುವ ಬಸ್‌ಗಳು ಖಾಲಿ ಇದ್ದರೂ ಹೆದ್ದಾರಿಯಲ್ಲೇ ಸಾಗುತ್ತವೆ. ಅಡ್ಡ ಹಾಕಿ ಕೇಳಿದರೆ,

> ಜವನಗೊಂಡನಹಳ್ಳಿ ಸಮೀಪ ಸೇವಾ ರಸ್ತೆಯ ಎರಡೂ ಬದಿಗೆ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ನಿಯಂತ್ರಣ ಅಧಿಕಾರಿಗಳನ್ನು ನೇಮಿಸಿದ್ದು ಸಾರಿಗೆ ಸಂಸ್ಥೆಯ ಎಲ್ಲಾ ಬಸ್‌ಗಳು ಸೇವಾ ರಸ್ತೆಯ ಮೂಲಕ ಸಂಚರಿಸುವಂತೆ ಕ್ರಮ ಕೈಗೊಳ್ಳಲಾಗಿದೆ. ರಾತ್ರಿ ವೇಳೆಯೂ ಪ್ರಯಾಣಿಕರಿದ್ದಲ್ಲಿ ಸೇವಾ ರಸ್ತೆಯ ಮೂಲಕ ಹೋಗುವಂತೆ ರಸ್ತೆ ಸಾರಿಗೆ ಸಂಸ್ಥೆ ಸಿಬ್ಬಂದಿಗೆ ಸೂಚಿಸಲಾಗುವುದು
>
> -ಕಾಳಿಕೃಷ್ಣ, ಇನ್‌ಸ್ಪೇಕ್ಟರ್

'ನಮ್ಮದು ನಾನ್ ಸ್ಟಾಪ್ ಬಸ್' ಎಂದು ನಿರ್ವಾಹಕರು ಉತ್ತರ ನೀಡುತ್ತಾರೆ. ಈ ಮುಂಚೆ ಹೆದ್ದಾರಿಯಲ್ಲಿ ನಿಂತು ಬಸ್ ಹತ್ತುವಾಗ ತುಂಬಿ ತುಳುಕುತ್ತಿದ್ದರೂ ಹತ್ತಿಸಿಕೊಂಡು ಹೋಗುತ್ತಿದ್ದರು. ಸೇವಾ ರಸ್ತೆ ಮೂಲಕ ಹೋದರೆ ಹೆಚ್ಚಿನ ಸಮಯ ತೆಗೆದುಕೊಳ್ಳುತ್ತದೆ ಎಂದು ಹೀಗೆ ಮಾಡುತ್ತಿದ್ದಾರೆ' ಎಂದು ಅವರು ಆರೋಪಿಸಿದರು.

ಸಂಜೆ 6ರ ನಂತರ ಕೆಲವು ಬಸ್‌ಗಳು ಸೇವಾ ರಸ್ತೆಯ ಬದಲಿಗೆ ಮುಂಚಿನಂತೆ ಹೆದ್ದಾರಿಯಲ್ಲೇ ಪ್ರಯಾಣಿಕರನ್ನು ಇಳಿಸಿ ಹೋಗುತ್ತವೆ. ಹೀಗೆ ಇಳಿದವರು ತಡೆಗೋಡೆ, ತಂತಿಬೇಲಿ ಇರುವ ಕಾರಣಕ್ಕೆ ಹೆದ್ದಾರಿಯ ಅಂಚಿನಲ್ಲಿ ಸುಮಾರು 1 ಕಿ.ಮೀ. ಕ್ರಮಿಸಿ ಸೇವಾ ರಸ್ತೆಗೆ ಬಂದು ಮನೆಗಳನ್ನು ಸೇರಬೇಕಿರುವುದು ತ್ರಾಸದಾಯಕವಾಗಿದೆ. ಹೆದ್ದಾರಿ ಅಂಚಿನಲ್ಲಿ ರಾತ್ರಿ ವೇಳೆ ನಡೆದು ಹೋಗುವುದು ಮೊದಲಿಗಿಂತ ಅಪಾಯಕಾರಿ. ಈ ವಿಚಾರದಲ್ಲಿ ಮಹಿಳೆಯರ ಪಾಡು ಹೇಳುವಂತಿಲ್ಲ. ಪ್ರಯಾಣಿಕರು ಅನುಭವಿಸುತ್ತಿರುವ ತೊಂದರೆಗಳ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರಿಗೆ, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರಿಗೆ ಮನವಿ ಸಲ್ಲಿಸಿದರೂ ಕ್ರಮ ಕೈಗೊಂಡಿಲ್ಲ. ಬಸ್ ಚಾಲಕರು ಹಾಗೂ ನಿರ್ವಾಹಕರು ಯಾರ ಮಾತನ್ನೂ ಕೇಳುತ್ತಿಲ್ಲ. ಜವನಗೊಂಡನಹಳ್ಳಿ ಜಂಕ್ಷನ್ ಆಗಿದ್ದು, ಯಲ್ಲದಕೆರೆ ಗ್ರಾಮದ ಹಾಗೂ ಶಿರಾ ತಾಲ್ಲೂಕಿನ ನೂರಾರು ಪ್ರಯಾಣಿಕರು ಇಲ್ಲಿಂದಲೇ ಬಸ್ ಹಿಡಿದು ಕೆಲಸಗಳಿಗೆ ಹೋಗುತ್ತಾರೆ' ಎಂದು ವಿವರಿಸಿದರು.

ಪದವೀಧರ ಮತದಾರರು ತಪ್ಪದೇ ಮತ ಹಾಕಿ

• ಉದಯವಾಹಿನಿ, ಕಲಬುರಗಿ

ವಿಧಾನ ಪರಿಷತ್ತಿನ ಈಶಾನ್ಯ ಕರ್ನಾಟಕ ಪದವೀಧರರ ಮತಕ್ಷೇತ್ರಕ್ಕೆ ಜೂನ್ 3ರಂದು ನಡೆಯಲಿರುವ ಚುನಾವಣೆಯಲ್ಲಿ ಪದವೀಧರರ ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಮತದಾನ ಮಾಡಬೇಕು' ಎಂದು ಕಲಬುರಗಿ ಪ್ರಾದೇಶಿಕ ಆಯುಕ್ತರೂ ಆಗಿರುವ ಮತ ಕ್ಷೇತ್ರದ ಚುನಾವಣಾಧಿಕಾರಿ ಕೃಷ್ಣ ಬಾಜಪೇಯಿ ಕೋರಿದರು.

ನಗರದ ಡಾ.ಎಸ್.ಎಂ.ಪಂಡಿತ್ ರಂಗ ಮಂದಿರದಲ್ಲಿ ಭಾರತದ ಚುನಾವಣಾ ಆಯೋಗ, ಕಲಬುರಗಿ ಪ್ರಾದೇಶಿಕ ಆಯುಕ್ತರ ಕಚೇರಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಮತ್ತು ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಈಶಾನ್ಯ ಕರ್ನಾಟಕ ಪದವೀಧರ ಮತದಾರರಿಗೆ ಹಮ್ಮಿಕೊಂಡಿದ್ದ ಮತದಾನ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಯೂ ಆಗಿರುವ ಜಿ ಲಾಧಿಕಾರಿ

ಉದಯವಾಹಿನಿ ಚಿತ್ರ

ಬಿ.ಫೌಜಿಯಾ ತರನ್ನುಮ್ ಮಾತನಾಡಿ, ಪರಿಷತ್ ಚುನಾವಣೆಯಲ್ಲಿ ಮತದಾನವು ಮತಪತ್ರದ ಮೂಲಕ ನಡೆಯುತ್ತದೆ. ಪ್ರಾಶಸ್ತ್ಯ ನೀಡುವಾಗ ಸ್ವಲ್ಪ ತಪ್ಪಾದರೂ, ಮತ ತಿರಸ್ಕೃತವಾಗಬಹುದು. ಹೀಗಾಗಿ ನಿಮ್ಮ ಮತ ತಿರಸ್ಕೃತವಾಗದಂತೆ ಎಚ್ಚರಿಕೆ ವಹಿಸಬೇಕು' ಎಂದು ಮತದಾರರಿಗೆ ಸಲಹೆ ನೀಡಿದರು.

ಪಾಲಿಕೆ ಆಯುಕ್ತ ಭುವನೇಶ ಪಾಟೀಲ ಮಾತನಾಡಿದರು. ಇದೇ ಸಂದರ್ಭದಲ್ಲಿ ಪದವೀಧರ ಮತಕ್ಷೇತ್ರಕ್ಕೆ ಸಂಬಂಧಿಸಿದಂತೆ ರಾಜ್ಯಮಟ್ಟದ ತರಬೇತಿದಾರರಾದ ಶಶಿಶೇಖರ ರೆಡ್ಡಿ ತರಬೇತಿ ನೀಡಿದರು.

ಉತ್ತಮ ಮಳೆ ಮುನ್ಸೂಚನೆ: ಮುಂದಿನ ವಾರ ಬಿತ್ತನೆ

• ಉದಯವಾಹಿನಿ, ರಾಯಚೂರು

ಕಲ್ಯಾಣ ಕರ್ನಾಟಕದ ರೈತರು ಕಳೆದ ವರ್ಷ ಬರದಿಂದ ಕಂಗೆಟ್ಟು ಆರ್ಥಿಕ ನಷ್ಟ ಅನುಭವಿಸಿದ್ದಾರೆ. ಹವಾಮಾನ ಇಲಾಖೆಯು ಈ ವರ್ಷ ಸಮೃದ್ಧ ಮುಂಗಾರಿನ ಮುನ್ಸೂಚನೆ ನೀಡಿರುವ ಪ್ರಯುಕ್ತ ರೈತರು ಬಿತ್ತನೆ ಕಾರ್ಯ ಚುರುಕುಗೊಳಿಸಿದ್ದಾರೆ.

ಆದರೆ, ಜೂನ್‌ನಲ್ಲಿ ಮಳೆಯೇ ಬಂದಿರಲಿಲ್ಲ. ಮಳೆ ನಂಬಿ ಬಿತ್ತನೆ ಮಾಡಿದವರು ಬಿಸಿಲಿನ ಝಳಕ್ಕೆ ಬೀಜ ಮೊಳಕೆ ಒಡೆಯುವ ಮೊದಲೇ ನೆಲದಲ್ಲೇ ಒಣಗಿದ್ದವು. ರೈತರು ನಷ್ಟ ಅನುಭವಿಸಿದ್ದರು. ಮಳೆಗಾಲವೂ ಬೇಸಿಗೆಯಂತೇ ಭಾಸವಾಗಿತ್ತು. ಈ ವರ್ಷ ಮಳೆ ಕೊರತೆ ಇಲ್ಲ. ಆದರೆ, ಜೂನ್ ಎರಡನೇ ವಾರದಲ್ಲಿ ನಿಧಾನವಾಗಿ ಮಳೆ ಶುರುವಾಗುವುದರಿಂದ ಬಿತ್ತನೆಗೆ ಸಕಾಲ ಎಂದು ಕೃಷಿ ವಿಜ್ಞಾನಿಗಳು ಅಭಿಪ್ರಾಯಪಟ್ಟಿದ್ದಾರೆ.

ಉದಯವಾಹಿನಿ ಚಿತ್ರ

ರೈತರು ಒಂದು ಅಥವಾ ಎರಡು ಬೆಳೆಗಳನ್ನು ಬಿತ್ತುವ ಬದಲು ಕನಿಷ್ಠ 3ರಿಂದ 4 ಬೆಳೆಗಳನ್ನು ಆಯ್ಕೆ ಮಾಡಿಕೊಂಡು ಬಿತ್ತನೆ ಮಾಡಿಕೊಳ್ಳಬೇಕು ಎಂದು ಕೃಷಿ ವಿಜ್ಞಾನಿಗಳು ಸಲಹೆ ನೀಡಿದ್ದಾರೆ.

ಪ್ರಸಕ್ತ ವರ್ಷ ಹೆಚ್ಚು ಮಳೆಯಾಗುವ ಸಾಧ್ಯತೆ ಇರುವ ಕಾರಣ ತಗ್ಗು ಪ್ರದೇಶದ ಹೊಲಗಳಲ್ಲಿ ಅಥವಾ ನೀರು ಸರಾಗವಾಗಿ ಹರಿದು ಹೋಗದ ಪ್ರದೇಶಗಳಲ್ಲಿ ಹೆಚ್ಚಿನ ನೀರಿನ ಬೇಡಿಕೆ ಇರುವ ಬೆಳೆಗಳನ್ನು ಬಿತ್ತನೆ ಮಾಡಬೇಕು. ಭತ್ತ, ಕಬ್ಬು ಹಾಗೂ ಗೋವಿನ ಜೋಳ ಬಿತ್ತನೆ ಮಾಡುವುದು

> ಆಗಸ್ಟ್‌ನಿಂದ ಸೆಪ್ಟೆಂಬರ್‌ನಲ್ಲಿ ಹೆಚ್ಚುವರಿ ಮಳೆಯಾಗುವ ಸಾಧ್ಯತೆ ಇರುವ ಕಾರಣ ಮಣ್ಣಿನ ತೇವಾಂಶ ತಡೆದುಕೊಳ್ಳಲು ಬಹುಬೇಗ ಬಿತ್ತನೆ ಮಾಡುವುದು ಆರ್ಥಿಕ ದೃಷ್ಟಿಯಿಂದ ಒಳ್ಳೆಯದು ಎಂದು ರೈತರಿಗೆ ಮುನ್ಸೂಚನೆ ನೀಡಿದ್ದಾರೆ.

ಸೂಕ್ತ ಎಂದು ರೈತರಿಗೆ ಸಲಹೆ ನೀಡಿದ್ದಾರೆ.

ಅತಿಯಾದ ಮಣ್ಣಿನ ತೇವಾಂಶ ತಡೆದುಕೊಳ್ಳದ ಈರುಳ್ಳಿ, ಹೆಸರು, ಮೆಣಸಿನಕಾಯಿ, ತೊಗರಿ ಹಾಗೂ ತರಕಾರಿಯನ್ನು ಇಳಿಜಾರು ಜಮೀನುಗಳಲ್ಲಿ ಅಥವಾ ಸುಲಭವಾಗಿ ಬಸಿದು ಹೋಗುವ ಜಮೀನುಗಳಲ್ಲಿ ಬಿತ್ತನೆ ಮಾಡಬೇಕು ಎಂದು ಸೂಚಿಸಿದ್ದಾರೆ.

ಕೈ ವಿರುದ್ಧವಲ್ಲ; ಪಕ್ಷಾಂತರಿಯ ವಿರುದ್ಧ ಸ್ಪರ್ಧೆ

• ಉದಯವಾಹಿನಿ, ಉಡುಪಿ

ವಿಧಾನ ಪರಿಷತ್ ಚುನಾವಣೆಯಲ್ಲಿ ರಾಜ ಕೀಯ ಪಕ್ಷಗಳ ಮತದಾರರ ಬೆಂಬಲಿತ ಅಭ್ಯರ್ಥಿಗಳ ನಡುವೆ ಹಣಾಹಣಿ ನಡೆಯುತ್ತಿದ್ದು, ಮತದಾರರು ಆಶೀರ್ವದಿಸುವ ವಿಶ್ವಾಸವಿದೆ ಎಂದು ನೈರುತ್ಯ ಪದವೀಧರರ ಕ್ಷೇತ್ರದ ಪಕ್ಷೇತರ ಅಭ್ಯರ್ಥಿ ಎಸ್.ಪಿ. ದಿನೇಶ್ ವಿಶ್ವಾಸ ವ್ಯಕ್ತಪಡಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕಾಂಗ್ರೇಸ್‌ನಿಂದ ಸ್ಪರ್ಧಿಸಿರುವ ಅಭ್ಯರ್ಥಿ ಪಕ್ಷಾಂತರಕ್ಕೆ ಹೆಸರುವಾಸಿಯಾಗಿದ್ದಾರೆ. ಬಿಜೆಪಿ, ಕಾಂಗ್ರೇಸ್, ಜೆಡಿಎಸ್ ಹಾಗೂ ವಿ ಜಯ ಮಲ್ಯನ ಪಕ್ಷವನ್ನೂ ಸೇರಿ ಇದೀಗ ಕೊನೆಯ ನಿಲ್ದಾಣ ಎಂದು ಕಾಂಗ್ರೇಸ್‌ನಿಂದ ಸ್ಪರ್ಧಿಸಿದ್ದಾರೆ. ಸಿದ್ದರಾಮಯ್ಯ, ರಾಹುಲ್ ಗಾಂಧಿ ವಿರುದ್ಧ ಏಕವಚನದಲ್ಲಿ ತುಚ್ಛವಾಗಿ ವಾಗ್ದಾಳಿ ನಡೆಸಿದ್ದ ಆರ್‌ಎಸ್‌ಎಸ್ ಹಿನ್ನೆಲೆಯ ವ್ಯಕ್ತಿ ಕಾಂಗ್ರೇಸ್‌ನ ಅಧಿಕೃತ ಅಭ್ಯರ್ಥಿಯಾಗಿರುವುದ ಆ ಪಕ್ಷದ ದುರಂತ ಎಂದು ವಾಗ್ದಾಳಿ ನಡೆಸಿದರು. ಸ್ಪರ್ಧೆಯಿಂದ ಹಿಂದೆ ಸರಿಯುವಂತೆ ರಾಷ್ಟ್ರೀಯ ಕಾಂಗ್ರೇಸ್ ನಾಯಕರಾದ ರಣದೀಪ್ ಸುರ್ಜೆವಾಲಾ ಹಾಗೂ ಮಯೂರ್ ಜಯಕುಮಾರ್ ಮನವಿ ಮಾಡಿದ್ದರು.

ಪಕ್ಷಾಂತರಿಗಳ ಬದಲಿಗೆ ಪಕ್ಷದ ಹಿರಿಯ ಕಾರ್ಯಕರ್ತರಿಗೆ ಟಿಕೆಟ್ ನೀಡಿದರೆ ಸ್ಪರ್ಧೆಯಿಂದ ಹಿಂದೆ ಸರಿಯುವ ಬಗ್ಗೆ ಯೋಚನೆ ಮಾಡುತ್ತೇನೆ ಎಂದು ಅವರಿಗೆ ಮನವರಿಕೆ ಮಾಡಿಕೊಟ್ಟಿದ್ದೆ. ಜತೆಗೆ, ಚುನಾವಣಾ ಪೂರ್ವಭಾವಿ ತಯಾರಿ ಬಗ್ಗೆ ವಿವರಿಸಿ ಸ್ಪರ್ಧೆ ಮಾಡುವುದು ಖಚಿತ ಎಂಬುದನ್ನು ಮನದಟ್ಟು ಮಾಡಿಸಿದ್ದೇನೆ ಎಂದರು. ಒತ್ತಡಕ್ಕೆ ಮಣಿದು ಪಕ್ಷದ ನಾಯಕರು ಅಭ್ಯರ್ಥಿಗಳನ್ನು ಘೋಷಣೆ ಮಾಡಿದ್ದರೂ ಕಾರ್ಯಕರ್ತರು ಪ್ರಜ್ಞಾವಂತಿಕೆಯಿಂದ ಮತ ಚಲಾಯಿಸಬೇಕು. ನನ್ನ ಸ್ಪರ್ಧೆ ಕಾಂಗ್ರೇಸ್ ವಿರುದ್ಧವಲ್ಲ; ಪಕ್ಷಾಂತರಿಗಳ ವಿರುದ್ಧ ಎಂದು ದಿನೇಶ್ ಹೇಳಿದರು.

ಜನರಿಗೆ ಅಡ್ಡಿಪಡಿಸಿ ನಮಾಜ್ ನಡೆಸಲು ಅವಕಾಶವಿಲ್ಲ

• ಉದಯವಾಹಿನಿ, ಮಂಗಳೂರು

ಮಸೀದಿಯ ಆವರಣ ಗೋಡೆಯ ಹೊರಗಡೆ ಅಥವಾ ರಸ್ತೆಗಳಲ್ಲಿ ಸಾರ್ವಜನಿಕರಿಗೆ ಸಮಸ್ಯೆ ಉಂಟಾಗುವಂತೆ ಅಥವಾ ವಾಹನ ಸಂಚಾರಕ್ಕೆ ತೊಂದರೆಯಾಗುವ ನಮಾಜ್ ನಿರ್ವಹಿಸಲು ಇಸ್ಲಾಮಿನ ನಿಯಮಗಳಲ್ಲಿ ಅವಕಾಶ ಇಲ್ಲ' ಎಂದು ದಕ್ಷಿಣ ಕನ್ನಡ ಜಿಲ್ಲಾ ವಕ್ಫ್ ಸಲಹಾ ಸಮಿತಿ ತಿಳಿಸಿದೆ. ಕಂಕನಾಡಿಯ ಮಸೀದಿಯ ಮುಂಭಾಗದ ರಸ್ತೆಯಲ್ಲಿ ಈಚೆಗೆ ನಮಾಜ್ ನಡೆಸಿದ ವಿಡಿಯೋ ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡಿರುವ ಕುರಿತು ಸ್ಪಷ್ಟನೆ ನೀಡಿದ ಸಮಿತಿಯ ಅಧ್ಯಕ್ಷ ಅಬ್ದುಲ್ ನಾಸಿರ್ ಲಕ್ಕಿಸ್ಟಾರ್, 'ಮುಸ್ಲಿಮರು ಶುಕ್ರವಾರ ಮಧ್ಯಾಹ್ನದ ನಮಾಜನ್ನು ಸಾಮೂಹಿಕವಾಗಿ ನಿರ್ವಹಿಸಬೇಕಾಗಿದ್ದು, ಇದಕ್ಕಾಗಿ ತಮ್ಮ ಮನೆ ಪರಿಸರದ ಅಥವಾ ಕೆಲಸ ಮಾಡುವ ಸ್ಥಳದ ಸಮೀಪದ ಮಸೀದಿಗೆ ತೆರಳುತ್ತಾರೆ. ಇನ್ನೂ ಹೆಚ್ಚಿನ ಜನರು ಬಂದರೆ, ಮಸೀದಿಯ ಆವರಣಗೋಡೆಯ ಒಳಗಡೆ ಇರುವ ಖಾಲಿ ಜಾಗದಲ್ಲಿ ಚಾಪೆ ಹಾಕಿ ನಮಾಜ್ ನೆರವೇರಿಸಲು ಬಹುತೇಕ ಮಸೀದಿಗಳಲ್ಲಿ ವ್ಯವಸ್ಥೆ ಕಲ್ಪಿಸಲಾಗಿದೆ. ಹೀಗಾಗಿ, ಸಾರ್ವಜನಿಕ ರಸ್ತೆಯಲ್ಲಿ ನಮಾಜ್ ನೆರವೇರಿಸುವ ಅಗತ್ಯವೇ ಬರುವುದಿಲ್ಲ' ಎಂದು ತಿಳಿಸಿದ್ದಾರೆ.

ಭಕ್ತಿಪ್ರಧಾನ ನಾಟಕದಿಂದ ಸೇಡಂಗೆ ಕೀರ್ತಿ

• ಉದಯವಾಹಿನಿ, ಸೇಡಂ

ಕಲೆ ಎಲ್ಲರಿಗೂ ಒಲಿಯೋದಿಲ್ಲ. ಅದಕ್ಕೆ ನಿರಂತರ ಪರಿಶ್ರಮದ ಜೊತೆಗೆ ಕಲೆ ಬೇಕು. ಇಂತಹ ಕಲೆಯನ್ನು ಸೇಡಂ ಕಲಾವಿದರು ಭಕ್ತಿ ಪ್ರಧಾನ ನಾಟಕದ ಮೂಲಕ ಸೇಡಂಗೆ ಕೀರ್ತಿ ತಂದಿದ್ದಾರೆ' ಎಂದು ಹಾಲಪ್ಪಯ್ಯ ವಿರಕ್ತ ಮಠದ ಪಂಚಾಕ್ಷರಿ ಸ್ವಾಮೀಜಿ ಹೇಳಿದರು.ಪಟ್ಟಣದ ಹಾಲಪ್ಪಯ್ಯ ವಿರಕ್ತ ಮಠದಲ್ಲಿ ನಡೆದ ಹಾಲಪ್ಪಯ್ಯ ಶ್ರೀ ಕ ಲಾ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಸೇಡಂನಿಂದ ಭಕ್ತಿ ಪ್ರಧಾನ ನಾಟಕ ಪ್ರದರ್ಶನ ಗೊಳ್ಳುತ್ತಿರುವುದು ಕಲೆ, ಜ್ಞಾನ ಮತ್ತು ಭಕ್ತಿಗೆ ಸಾಕ್ಷಿಯಾಗಿದೆ. ಇದರಿಂದ ಹಿರಿಯ ಕಲಾವಿದರಿಂದ ಕಿರಿಯರಿಗೆ ಮಾರ್ಗದರ್ಶನ ನೀಡುವ ಪರಂಪರೆ ಬೆಳೆಯುತ್ತಿದೆ' ಎಂದರು. ಕಲಾವಿದ ಶಿವಯ್ಯಸ್ವಾಮಿ ಬಿಬ್ಬಳ್ಳಿ ಮಾತನಾಡಿ, ಭಕ್ತಿ ಪ್ರಧಾನ ನಾಟಕ ಪ್ರದರ್ಶನದಿಂದ ಇತಿಹಾಸ ಮತ್ತು ನೆಲದ ಮಹತ್ವ ಅರಿಯಲು ಸಾಧ್ಯ.

ಉದಯವಾಹಿನಿ ಚಿತ್ರ

ಇದಕ್ಕೆ ಮಾಲೀಕ, ಕಲಾವಿದ, ಸಾಹಿತಿ, ಪ್ರೇಕ್ಷಕರ ಸಹಕಾರ ತುಂಬಾ ಅವಶ್ಯಕ' ಎಂದರು.ನಾಟಕ ಮಾಲೀಕ ರಮೇಶ ಮಾಲಪಾಣಿ ಮಾತನಾಡಿ, ಕಲಾವಿದರೇ ನಾಟಕಕ್ಕೆ ಜೀವಾಳ. ಅವರ ಸಹಕಾರದಿಂದ ನಾಟಕ ಯಶಸ್ವಿಯಾಗಿದೆ' ಎಂದರು. ವೀರೇಶ ಹೂಗಾರ, ಬಸವರಾಜ ಕೋಸಗಿ, ಬಸವರಾಜ ಹೊಸ್ಮನಿ, ಸಿದ್ದಪ್ಪ ತಳಳ್ಳಿ, ಬಸವರಾಜ ಬಾಳಿ, ಬಸವರಾಜ ಬಂಡಾ, ಶಿವಕುಮಾರ ನಿಡಗುಂದಾ, ಸಂಗಮೇಶ ಅವಂಟಿ, ಶಿವಶರಣಪ್ಪ ಚಂದನಕೇರಿ, ರೇವಣಸಿದ್ದಪ್ಪ ನೀಲಿ, ಮಲ್ಲಿಕಾರ್ಜುನ ದಿಗ್ಗಾಂವ, ನಾಗರಾಜ ಬಾಳಿ ಹಾಜರಿದ್ದರು.

ಸಿದ್ದಯ್ಯಸ್ವಾಮಿ ಆಡಕಿ ನಿರೂಪಿಸಿದರು. ಸುಧೀರ ಬಿರಾದಾರ ವಂದಿಸಿದರು.

ನಾಗಣ್ಣ ಮಾಸ್ತರ ಬಳ್ಳಾ ಮನೆಯಲ್ಲಿ ಚಿತಾಶಾವಲಿ ಗಲಾಫ್‌ಗೆ ವಿಶೇಷ ಪ್ರಾರ್ಥನೆ

• ಉದಯವಾಹಿನಿ ಚಿತ್ತಾಪುರ

ಪಟ್ಟಣದ ಭಾವೈಕ್ಯತೆಯ ಪ್ರತೀಕ ಐತಿಹಾಸಿಕ ಸೂಫಿ ಸಂತ ಹಜರತ್ ಚಿತಾಶಾವಲಿಯ 797 ಜಾತ್ರಾ ಮಹೋತ್ಸವವು ನಿಮಿತ್ಯ ಸರ್ವಧರ್ಮೀಯರಿಂದ ಭಕ್ತಿಪೂರ್ವಕವಾಗಿ ಚಿತಾಶಾವಲಿ ಗಲಾಫ್ ವಿಶೇಷ ಪ್ರಾರ್ಥನೆ (ಫಾತೇಹಾ) ಸಲ್ಲಿಸುವ ಮೂಲಕ ಜಾತ್ರೆ ಆರಂಭಗೊಂಡಿತು. ಪಟ್ಟಣದ ನಾಗಣ್ಣ ಮಾಸ್ಟರ್ ಬಳ್ಳಾ ಅವರ ಮನೆಯಲ್ಲಿ ಮುತುವಲಿ ಮತ್ತು ಸಜ್ಜಾದ ಮಿನಾಜುದ್ದೀನ್ ಚಿಸ್ತಿ ಅವರ ನೇತೃತ್ವದಲ್ಲಿ ಹಜರತ್ ಚಿತಾಶಾವಲಿ ಅವರ ಮಜಹರ್ ಗೆ ಹೊದಿಸುವ ಗಲಾಫ್ ವಿಶೇಷ ಪ್ರಾರ್ಥನೆ (ಫಾತೇಹಾ) ನಡೆಯಿತು ನಂತರ ದೋಸ್ತರ ಧೀನ ಘೋಷಣೆ ಮೊಳಗಿದವು.

ದಿನ ಭವಿಷ್ಯ

ರಾಹುಕಾಲ	ಬೆಳಿಗ್ಗೆ	10:30 ರಿಂದ 12:00
ಗುಳಿಕ ಕಾಲ	ಬೆಳಿಗ್ಗೆ	07:30 ರಿಂದ 09:00
ಯಮಗಂಡ ಕಾಲ	ಮಧ್ಯಾಹ್ನ	03:00 ರಿಂದ 04:30

ಮೇಷ – ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ – ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ನೀವು ಇಂದು ನಿಮಗೆ ನೀಡಲಾದ ಹೂಡಿಕೆಯ ಯೋಜನೆಗಳ ಬಗ್ಗೆ ಚೆನ್ನಾಗಿ ಆಲೋಚಿಸಬೇಕು.

ವೃಷಭ – ನಗು ನಿಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಮತ್ತು ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಇಂದು ಖರೀದಿಸಲು ಪ್ರಯತ್ನಿಸಿ. ಸಂಗಾತಿ ಕಾಳಜಿ ತೋರಿಸುತ್ತಾರೆ.

ಮಿಥುನ – ನೀವು ಧೀರ್ಘಕಾಲೀನ ಅನಾರೋಗ್ಯದಿಂದ ಬಳಲಬಹುದು. ಇಂದಿನವರೆಗೂ ಅಗತ್ಯವಿಲ್ಲದೆ ಹಣವನ್ನು ಖರ್ಚು ಮಾಡುತ್ತಿದ್ದ ಜನರು, ಇಂದು ಅವರು ತನ್ನನ್ನು ನಿಯಂತ್ರಿಸಬೇಕು ಮತ್ತು ಹಣವನ್ನು ಉಳಿಸಬೇಕು.

ಕರ್ಕಾಟಕ – ನಿಮ್ಮ ಜೊತಗಿರುವವರ ಜೊತೆ ವಾದವಿವಾದಕ್ಕೆ ತೊಡಗಬೇಡಿ. ಯಾವುದೇ ಭಿನ್ನಾಭಿಪ್ರಾಯದ ವಿಷಯಗಳಿದ್ದಲ್ಲಿ – ಸೌಹಾರ್ದತೆಯಿಂದ ಬಗೆಹರಿಸಿಕೊಳ್ಳಿ. ಮೊಂಬತ್ತಿ ಬೆಳಕಿನಲ್ಲಿ ಪ್ರೀತಿಪಾತ್ರರ ಜೊತೆ ಆಹಾರ ಹಂಚಿಕೊಳ್ಳುವುದು.

ಸಿಂಹ – ಕೆಲವು ಅನಿವಾರ್ಯ ಸಂದರ್ಭಗಳು ನಿಮಗೆ ಅಹಿತಕರವೆನಿಸಬಹುದು. ಆದರೆ ನೀವು ನಿಮ್ಮ ಸಮತೋಲನ ಕಾಯ್ದುಕೊಳ್ಳಬೇಕು ಮತ್ತು ಪರಿಸ್ಥಿತಿಯನ್ನು ನಿಭಾಯಿಸಲು ತಕ್ಷಣವೇ ಪ್ರತಿಕ್ರಿಯಿಸಬಾರದು.

ಕನ್ಯಾ – ನೀವು ವಿಶ್ರಾಂತಿ ಪಡೆಯಬೇಕು ಮತ್ತು ನಿಕಟ ಸ್ನೇಹಿತರು ಮತ್ತು ಕುಟುಂಬದ ಸದಸ್ಯರ ನಡುವೆ ಸಂತೋಷವಾಗಿರಲು ಪ್ರಯತ್ನಿಸಬೇಕು ನೀವು ಯಾರಾದರೂ ವಿಶೇಷವಾದವರ ಗಮನ ಸೆಳೆಯುತ್ತೀರಿ.

ತುಲಾ – ನಿಮ್ಮ ಹೆತ್ತವರ ಆರೋಗ್ಯದ ಬಗೆಗೆ ಹೆಚ್ಚುವರಿ ಗಮನ ಮತ್ತು ಎಚ್ಚರಿಕೆ ಅಗತ್ಯವಿದೆ. ನಿಮ್ಮ ಗೆಳತಿ ನಿಮಗೆ ಮೋಸ ಮಾಡಬಹುದು. ನಿಮ್ಮ ಪ್ರೀತಿಯ ಸಂಬಂಧ ಮಾಂತ್ರಿಕ ತಿರುವು ಪಡೆಯುತ್ತಿದೆ.

ವೃಶ್ಚಿಕ – ರಕ್ತದೊತ್ತಡವಿರುವ ರೋಗಿಗಳು ತಮ್ಮ ರಕ್ತದೊತ್ತಡ ಕಡಿಮೆ ಮಾಡಲು ಮತ್ತು ಕೊಲೆಸ್ಟರಾಲ್ ನಿಯಂತ್ರಣದಲ್ಲಿರಿಸಲು ಕೆಂಪು ವೈನ್ ತೆಗೆದು ಕೊಳ್ಳಬಹುದು. ಇದು ಅವರಿಗೆ ಮತ್ತಷ್ಟು ವಿಶ್ರಾಂತಿ ತರುತ್ತದೆ.

ಧನಸ್ಸು – ಹಾಸ್ಯಪ್ರಜ್ಞೆಯಿರುವ ಸಂಬಂಧಿಕರ ಸಂಗ ನಿಮ್ಮ ಉದ್ವೇಗವನ್ನು ಕಡಿಮೆ ಮಾಡುತ್ತದೆ ಮತ್ತು ನಿಮಗೆ ತುಂಬಾ ಅಗತ್ಯವಾಗಿರುವ ಶಮನವನ್ನು ನೀಡುತ್ತದೆ. ಈ ರೀತಿಯ ಸಂಬಂಧಿಗಳನ್ನು ಹೊಂದಿದ ನೀವೇ ಅದೃಷ್ಟವಂತರು.

ಮಕರ – ಸ್ನೇಹಿತರೊಂದಿಗೆ ಸಂಜೆ ಆನಂದ ಹಾಗೂ ಕೆಲವು ರಜೆಯ ಯೋಜನೆಗಳಿಗೂ ಉತ್ತಮವಾಗಿರುತ್ತದೆ. ನೀವು ಕಾಳಜಿಯುಳ್ಳ ಮತ್ತು ತಿಳುವಳಿಕೆಯುಳ್ಳ ಸ್ನೇಹಿತರನ್ನು ಭೇಟಿ ಮಾಡುತ್ತೀರಿ.

ಕುಂಭ – ತುಂಬಾ ಪ್ರಯಾಣ ನಿಮಗೆ ದಣಿವಾಗಿಸುತ್ತದೆ ನೀವು ವಿಧ್ಯಾರ್ಥಿಯಾಗಿದ್ದರೆ ಮತ್ತು ವಿದೇಶಕ್ಕೆ ಹೋಗಿ ಅಧ್ಯಯನ ಮಾಡಲು ಬಯಸುತ್ತಿದ್ದರೆ ಆರ್ಥಿಕ ಬಿಕ್ಕಟ್ಟು ಇಂದು ನಿಮ್ಮ ಹಣೆಯ ಮೇಲೆ ಸುಕ್ಕು ತರಬಹುದು.

ಮೀನ – ಮಕ್ಕಳಲ್ಲಿ ನಿಮಗೆ ರೋಮಾಂಚಕ ಸುದ್ದಿ ತರಬಹುದು. ನಿಮ್ಮ ಪ್ರೀತಿಯ ಸಂಗಾತಿ ಇಂದು ಏನಾದರೂ ಸುಂದರವಾದದ್ದನ್ನು ಮಾಡಿ ನಿಮಗೆ ಆಶ್ಚರ್ಯವನ್ನುಂಟು ಮಾಡುತ್ತಾರೆ.

ಜಮೀನು ಇಲ್ಲದಿದ್ದರೂ 77 ತಳಿ ರಾಗಿ ಬೆಳೆದ ಮಹಿಳೆಯರು

• ಗೇಣಿ ಪಡೆದ ಜಮೀನಿನಲ್ಲಿ ಸಿರಿಧಾನ್ಯ ಬೆಳೆಯಲು ಆರಂಭಿಸಿ ಸ್ವಾವಲಂಬನೆಯ ಹಾದಿ ತುಳಿದಿದ್ದಾರೆ

• ಉದಯವಾಹಿನಿ ಹುಬ್ಬಳ್ಳಿ

ಇಂದಿನ ದಿನಗಳಲ್ಲಿ ವಿದ್ಯಾವಂತರು ಸೇರಿದಂತೆ ಅದೇಷ್ಟೊ ಮಂದಿ ಕೃಷಿಯತ್ತ ಒಲವು ಹೊಂದಿರುತ್ತಾರೆ. ಆದರೆ ಅವರಿಗೆ ವ್ಯವಸಾಯ ಮಾಡಿ ಈ ಕ್ಷೇತ್ರದಲ್ಲಿ ಸಾಧನೆ ಮಾಡಿ ತೋರಿಸಲು ಕೃಷಿ ಜಮೀನು ಇರುವುದಿಲ್ಲ. ಇಂತದ್ದೆ ಸ್ಥಿತಿಯಲ್ಲಿದ್ದ ಧಾರವಾಡ ಜಿಲ್ಲೆಯ ಮಹಿಳೆಯರು ಜಮೀನು ಲೀಸ್ ಪಡೆದು ಕೃಷಿ ಮಾಡಿ ಮಾದರಿಯಾಗಿದ್ದಾರೆ.

ಹೌದು, ಕೂಲಿಯಾಳಾಗಿ ದುಡಿದು ಜಮೀನನ್ನು ಲೀಸ್‌ಗೆ ಪಡೆದು ಸಾವಯವ ಪದ್ಧತಿಯಲ್ಲಿ ಸಿರಿಧಾನ್ಯ ಬೆಳೆದು ಎಲ್ಲರೂ ಗಮನ ಸೆಳೆಯುವಂತೆ ಮಾಡಿದವರು ಧಾರವಾಡ ಜಿಲ್ಲೆಯ ಕುಂದಗೋಳ ತಾಲ್ಲೂಕಿನ ಮತ್ತಿಕಟ್ಟಿ ಗ್ರಾಮದ ನಿವಾಸಿ ರತ್ನಾ ಪ್ರಕಾಶ್ ಹೊಸಳ್ಳಿ ಅವರು.

ವಿನಾಯಕ ಸ್ತ್ರೀ ಶಕ್ತಿ ಸಂಘದ ಸಂಚಾಲಕಿಯು ಆಗಿರುವ ರತ್ನಾ ಪ್ರಕಾಶ ಹೊಸಳ್ಳಿ ಅವರ ನೇತೃತ್ವದಲ್ಲಿ ಕೃಷಿಯಲ್ಲಿ ಮಾದರಿ ಕಾರ್ಯ ಆಗಿದೆ. ರಾಗಿಯಲ್ಲಿ ಇಷ್ಟೊಂದು ತಳಿಗಳು ಇವೆ ಎಂಬುದರ ಬಗ್ಗೆ ಕೃಷಿ ಲೋಕಕ್ಕೆ ಅವರು ಪರಿಚಯ ಮಾಡಿಕೊಟ್ಟಿದ್ದಾರೆ.

ಉದಯವಾಹಿನಿ ಚಿತ್ರ

ರಾಗಿಯ 77 ತಳಿಯಲ್ಲಿ ಒಂದೊಂದು ತಳಿಯ 50-100 ಗ್ರಾಮ್‌ನಿಂದ ಒಟ್ಟಾರೆ 2 ಕ್ವಿಂಟಲ್ ನಷ್ಟು ರಾಗಿಯ ಬೀಜವನ್ನು ಬೆಳೆದು ಕೊಡಲಾಗಿದೆ. ಇದರಿಂದ ನಮ್ಮ ನೆಲದ ಸಿರಿಧಾನ್ಯ ತಳಿಯ ಸಂರಕ್ಷಿಸಿದ ಸಂತೃಪ್ತಿಯೂ ನಮಗಿದೆ

-ರತ್ನಾ ಪ್ರಕಾಶ್, ಹೊಸಳ್ಳಿ

ವಿನಾಯಕ ಸ್ತ್ರೀ ಸಂಘದ ಮಹಿಳೆಯರ 20 ವರ್ಷದ ಸಾಮೂಹಿಕ ಕೃಷಿ, ಸಾಧನೆ ಕಂಡು ಸಹಜ ಸಮೃದ್ಧಿಯವರು ರಾಗಿ ತಳಿಗಳ ಬೀಜವನ್ನು ನೀಡಿ ಅವರನ್ನು ಪ್ರೋತ್ಸಾಹಿಸಿದೆ. ಗೇಣಿ ಪಡೆದ ಜಮೀನಿನಲ್ಲಿ ಸಿರಿಧಾನ್ಯ ಬೆಳೆಯಲು ಆರಂಭಿಸಿ ಸ್ವಾವಲಂಬನೆಯ ಹಾದಿ ತುಳಿದಿದ್ದಾರೆ.

ಲೀಸ್ ಹೊಲದಲ್ಲಿ ಸ್ವಾವಲಂಬನೆ

ಸ್ವಂತ ಜಮೀನಿಲ್ಲದಿದ್ದರೂ ಸಾಮೂಹಿಕ ಕೃಷಿ' ಮೂಲಕ ಗೇಣಿ, ಲೀಸ್ ಹೊಲದಲ್ಲಿ ಸ್ವಾವಲಂಬನೆ ಕಂಡುಕೊಂಡಿದ್ದಾರೆ. ವಿನಾಯಕ ಸ್ತ್ರೀ ಶಕ್ತಿ ಸಂಘದ ಮಹಿಳೆಯರು. ಕೂಲಿಯಾಳಾಗಿ ದುಡಿದವರ ಸಾಮೂಹಿಕ ಕೃಷಿಯ 'ಯಶೋಗಾಥೆ' ಗುರುತಿಸಿ ಸಾಕಷ್ಟು ಪ್ರಶಸ್ತಿ, ಪುರಸ್ಕಾರಗಳೂ ವಿನಾಯಕ ಸ್ತ್ರೀ ಶಕ್ತಿ ಸಂಘಕ್ಕೆ ಲಭಿಸಿವೆ ಎಂದು ರತ್ನಾ ಅವರು ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ 2021ರಲ್ಲಿ ಸಹಜ ಸಮೃದ್ಧವಾಗಿ 77 ತಳಿ ರಾಗಿಯನ್ನು ಬೀಜಕ್ಕಾಗಿ ಬೆಳೆಯುವ ಪದ್ಧತಿಯನ್ನು ಸಂಘಟ ಒಪ್ಪಿಕೊಂಡಿತು. ಪರಿಣಾಮವೇ ಇಂದು ನಮ್ಮ ಲೀಸ್ ಹೊಲದಲ್ಲಿ ರಾಗಿಯ 77 ತಳಿಯ ತಾಕುಗಳು ನಿರ್ಮಾಣವಾಗಿ ಸಾವಯವ ಪದ್ಧತಿಯಲ್ಲಿ ಪ್ರತಿ ವರ್ಷ 2 ಕ್ವಿಂಟಲ್‌ನಷ್ಟು ರಾಗಿಯ ಬೀಜಗಳನ್ನು ಬೆಳೆಯಲಾಗುತ್ತಿದೆ.

ಸಾಮೂಹಿಕ ಕೃಷಿಯ ಯಶೋಗಾಥೆ

10 ರೂಪಾಯಿ ಕೂಲಿ ಕೆಲಸಕ್ಕೆ ಹೋಗುತ್ತಿದ್ದ 13 ಮಂದಿ ಮಹಿಳೆಯರು ಕೂಡಿಕೊಂಡು 2000ನೇ ಇಸವಿಯಲ್ಲಿ ಸಂಘ ಕಟ್ಟಿದರು. 10 ರೂಪಾಯಿ ನಂತರ ಅದು ತಿಂಗಳಿಗೆ 50 ರೂಪಾಯಿ, ಹಾಗೇ ಮುಂದೆ 100, 200 ರೂಪಾಯಿ ವಿನಿಯೋಗಿಸಿ ಸ್ವಸಹಾಯ ಸಂಘವನ್ನು ನಡೆಸುತ್ತಾ ಬಂದರು.

ಈ ಸಂಘದಲ್ಲಿ ಕೆಲವರು ಸಾಲ ಪಡೆದು ಮನೆಯಲ್ಲೇ ಗೃಹೋದ್ಯಮ, ಟೇಲರಿಂಗ್ ಆರಂಭಿಸಿದರು. ಮುಂದೆ ಜಮೀನನ್ನೇ ಗೇಣಿಗೆ ಪಡೆದು ಶೇಂಗಾ, ಸಿರಿಧಾನ್ಯ ಬೆಳೆಯಲು ಆರಂಭಿಸಿದರು.

2021ರಿಂದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ 1 ಲಕ್ಷ ಪ್ರೋತ್ಸಾಹ ಹಣ ದೊರೆತಾಗ 50 ಸಾವಿರ ನೀಡಿ ಅರ್ಧ ಎಕರೆ ಜಮೀನನ್ನು 2 ವರ್ಷಕ್ಕೆ ಲೀಸ್‌ಗೆ ಪಡೆದು ರಾಗಿಯ 77 ತಳಿಯನ್ನು ಬೆಳೆಯಲು ಆರಂಭಿಸಿದೆವು. ಹೇಗೆ ಬೆಳೆಯಬೇಕು ಎಂಬುದನ್ನು ಸಹಜ ಸಮೃದ್ಧದವರೇ ಮಾರ್ಗ ದರ್ಶನ ನೀಡಿದರು.

ಈ ರಾಗಿಗಳನ್ನು ಬೀಜಕ್ಕಾಗಿ ಬೆಳೆದು ನೀಡಬೇಕಿರುವುದರಿಂದ ವಿಶೇಷ ಮುತುವರ್ಜಿ ವಹಿಸಬೇಕಿರುತ್ತದೆ.

ತಳಿಗಳು ಮಿಶ್ರವಾಗುವಂತಿಲ್ಲ. ಅದಕ್ಕಾಗಿ ಒಂದು ರಾಗಿ ತಳಿಯ ತಾಕಿನಿಂದ ಇನ್ನೊಂದು ತಾಕಿಗೆ ಹೆಚ್ಚಿನ ಜಾಗ ಬಿಡುವುದು ಅನಿವಾರ್ಯ. ಆಗ ನಾವು ಆಗ ಜಾಗವನ್ನು ವ್ಯರ್ಥ ಮಾಡದೆ ಎಳ್ಳನ್ನು ಬೆಳೆದೆವು. ಮಳೆಯ ಕೊರತೆಯಿಂದ ಬೆಳೆಯಲ್ಲಿ ಕೊಂಚ ಹಿನ್ನೆಡೆ ಅನಿಸಿದರೂ ನಷ್ಟವೇನು ಆಗಲಿಲ್ಲ.

ಅಕ್ರಮ ಪಡಿತರ ಅಕ್ಕಿ ಸಾಗಾಟ ವೇಳೆ ಅಧಿಕಾರಿಗಳ ದಾಳಿ 1.89 ಲಕ್ಷ ಮೌಲ್ಯದ 8,230 ಕೆಜಿ ಪಡಿತರ ಅಕ್ಕಿ ವಶ

• ಶಿವರಾಜಕುಮಾರ ವಾಲಿಕಾರ

• ಉದಯವಾಹಿನಿ ಇಂಡಿ

ಯಾವುದೆ ಪರವಾನಗಿ ಇಲ್ಲದೆ ಅಕ್ರಮವಾಗಿ ಸಂಗ್ರಹಿಸಿಟ್ಟಿದ್ದ 1,89,290 ರೂಪಾಯಿ ಕಿಮ್ಮತ್ತಿನ ಸುಮಾರು 8,230 ಕೆಜಿ ಪಡಿತರ ಅಕ್ಕಿ ಸಮೇತ ಆರೋಪಿಯನ್ನು ವಶಕ್ಕೆ ಪಡೆದುಕೊಂಡ ಘಟನೆ ಮಂಗಳವಾರಂದು ತಾಲೂಕಿನ ಶಿರಶ್ಯಾಡ ಗ್ರಾಮದ ಖಾಸಗಿಯವರಿಗೆ ಸೇರಿದ ಜಮಿನೊಂದರಲ್ಲಿ ಜರುಗಿದೆ.

ಆಕ್ರಮವಾಗಿ ಪಡಿತರ ಅಕ್ಕಿ ಸಂಗ್ರಹಿಸಿದ ಮಾಹಿತಿ ಆದರಿಸಿ ಇಂಡಿ ಗ್ರಾಮಿಣ ಪಿಎಸ್‌ಐ ಮಂಜುನಾಥ ಹುಲಕುಂದ ಹಾಗೂ ಆಹಾರ ನೀರಿಕ್ಷಕ ಪರಮಾನಂದ ಹೂಗಾರ ಇವರು ಜಂಟಿಯಾಗಿ ಕಾರ್ಯಚರಣೆ ಮಾಡಿ ಪಡಿತರ ಅಕ್ಕಿ ವಶಕ್ಕೆ ಪಡೆದುಕೊಂಡಿದ್ದಾರೆ. ಈ ಕುರಿತು

ಉದಯವಾಹಿನಿ ಚಿತ್ರ

ವಿಚಾರಣೆ ಮಾಡಲಾಗಿ ಪಡಿತರ ಅಕ್ಕಿ ಸಂಗ್ರಹಿಸಿ ಮಾರಾಟ ಮಾಡುವ ಉದ್ದೇಶವಾಗಿರುವುದು ಕಂಡು ಬಂದಿದ್ದರಿಂದ ಆರೊಪಿ ಅಸುದುಲ್ಲಾ ಶೇಖಲಾಲ ಮುಜಾವರ ಸಾಕಿನ ತೆಗ್ಗಿಹಳ್ಳಿ ಇತನನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಆರೊಪಿಯ ಹೇಳಿಕೆ ಮೇರೆಗೆ ಆಕ್ರಮ ಅಕ್ಕಿಯನ್ನು ಪತ್ರಾಸ ಶಡ್ಡನಲ್ಲಿ ಸಂಗ್ರಹಿಸಿ ಮಾರಾಟ ಮಾಡುವ ಉದ್ದೇಶದಿಂದ ಸಂಗ್ರಹಿಸಲಾಗಿತದೆ. ಈ ಕುರಿತು ಇಂಡಿ ಗ್ರಾಮಿಣ ಪೋಲಿಸ ಠಾಣೆಯಲ್ಲಿ ಪ್ರಕರಣ ದಾಖಲಾಗಿ ತನಿಖೆ ಮುಂದುವರೆದಿದೆ.

ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಕರೆತನ್ನಿ: ಬಿ.ಟಿ.ಕುಮಾರಸ್ವಾಮಿ

• ಉದಯವಾಹಿನಿ ಚಿತ್ರದುರ್ಗ

ಬಾಲಕಾರ್ಮಿಕರನ್ನು ಗುರುತಿಸಿ, ಸಮಾಜದ ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಕಾರ್ಮಿಕ ನಿರೀಕ್ಷಕರು ಹೆಚ್ಚಿನ ಮುತುವರ್ಜಿ ವಹಿಸಬೇಕು. ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮುಖ್ಯವಾಹಿನಿಗೆ ತರುವ ಜತೆಗೆ ವಸತಿ ಶಾಲೆಗಳಿಗೆ ಪ್ರವೇಶಾತಿ ನೀಡಲು ಅಧಿಕಾರಿಗಳು ಅಗತ್ಯ ಕ್ರಮ ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನ ಆಚರಣೆಗೆ ಸಂಬಂಧಿಸಿದಂತೆ ಜಿಲ್ಲಾಮಟ್ಟದ ಕಾರ್ಯಕಾರಿ ಸಮಿತಿ ಮತ್ತು

ಉದಯವಾಹಿನಿ ಚಿತ್ರ

ಕಾರ್ಮಿಕ ಪದ್ಧತಿ ಬಗ್ಗೆ ಅರಿವು

ಜಿಲ್ಲಾಮಟ್ಟದ ಟಾಸ್ಕ್‌ಫೋರ್ಸ್ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕಾರ್ಮಿಕ ಅಧಿಕಾರಿಗಳು ತಾಲ್ಲೂಕು ವಾರು ಶಾಲೆಯಿಂದ ಹೊರಗುಳಿದ ಮಕ್ಕಳ ಮಾಹಿತಿಯನ್ನು ಪಡೆದು, ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮುಖ್ಯವಾಹಿನಿಗೆ ತರುವ ಕೆಲಸ ಮಾಡಬೇಕು. ಯಾವುದೇ ಮಗು ಶಿಕ್ಷಣದಿಂದ ವಂಚಿತರಾಗಬಾರದು ಎಂದು ಸೂಚನೆ ನೀಡಿದರು. ಮಂಡಕ್ಕಿ ಭಟ್ಟಿ, ಇಟ್ಟಿಗೆ ಭಟ್ಟಿ, ಗ್ಯಾರೇಜ್‌ಗಳಲ್ಲಿ ಬಾಲಕಾರ್ಮಿಕರು ಕಾರ್ಯನಿರ್ವಹಿಸುವ ಸಂಭವ ಹೆಚ್ಚಾಗಿರುವುದರಿಂದ ಕಾರ್ಮಿಕ ನಿರೀಕ್ಷಕರು ನಿಯಮಿತವಾಗಿ ದಾಳಿ ನಡೆಸಿ ತಪಾಸಣೆ ಮಾಡಬೇಕು ಎಂದು ತಿಳಿಸಿದ ಅವರು, ಬಾಲ್ಯಾ ಮತ್ತು ಕಿಶೋರಾವಸ್ಥೆಯ ಕಾರ್ಮಿಕ ಪದ್ದತಿ ಬಗ್ಗೆ ಅರಿವು ಮೂಡಿಸಬೇಕು ಎಂದು ಹೇಳಿದರು.

ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ನಾಸಿರುದ್ದಿನ್ ಮಾತನಾಡಿ, ಜಿಲ್ಲೆಯಲ್ಲಿ ಶಾಲೆಯಿಂದ ಹೊರಗುಳಿದ 764 ಮಕ್ಕಳು ಶಾಲೆಯಿಂದ ಹೊರಗುಳಿದಿದ್ದು, ಪೋಷಕರ ವಲಸೆ ಕಾರಣದಿಂದಾಗಿ ಮೊಳಕಾಲ್ಮುರು ಹಾಗೂ ಹೊಸದುರ್ಗ ತಾಲ್ಲೂಕಿನಲ್ಲಿ ಹೆಚ್ಚಿನ ಮಕ್ಕಳು ಶಾಲೆಯಿಂದ ಹೊರಗುಳಿದಿದ್ದಾರೆ. ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮುಖ್ಯವಾಹಿನಿಗೆ ತರಲು ಕ್ರಮವಹಿಸಲಾಗುತ್ತಿದೆ ಎಂದರು.

ವಿಮಾನ ನಿಲ್ದಾಣದಲ್ಲೇ ಸಂಸದನ ಬಂಧನಕ್ಕೆ ಆಗ್ರಹ

• ಉದಯವಾಹಿನಿ ಹಾಸನ

ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಪ್ರಮುಖ ಆರೋಪಿಯಾಗಿರುವ ಹಾಸನ ಸಂಸದ ಪ್ರಜ್ವಲ್ ರೇವಣ್ಣರನ್ನು ವಿಮಾನ ನಿಲ್ದಾಣದಲ್ಲೇ ಬಂಧಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ಜನಪರ ಚಳವಳಿಗಳ ಒಕ್ಕೂಟ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿದೆ.

ಹಾಸನದಲ್ಲಿ ಹಾಸನ ಚಲೋ ಪ್ರತಿ ಭಟನಾ ಮೆರವಣಿಗೆ ನಡೆಸಲಾಗಿದ್ದು, ರಾಜ್ಯದ ಹಲವೆಡೆಗಳಿಂದ 113 ಸಂಘಟನೆಗಳ ಸುಮಾರು 10 ಸಾವಿರ ಪ್ರತಿನಿಧಿಗಳು ಭಾಗವಹಿದ್ದಾರೆ.

ಹಾಸನದ ಹೇಮಾವತಿ ಪ್ರತಿಮೆಯ ಬಳಿಯಿಂದ ಮೆರವಣಿಗೆ ಆರಂಭವಾಗಿದ್ದು, ಜಿಲ್ಲಾಧಿಕಾರಿ ಕಚೇರಿ ಬಳಿಯ ಹೊಸ ಬಸ್‌ನಿಲ್ದಾಣ ರಸ್ತೆಯಲ್ಲಿ ಬಹಿರಂಗ ಸಭೆ ನಡೆಸಿದ್ದಾರೆ. ಸಿಪಿಎಂ ನಾಯಕಿ ಸುಭಾಷಿಣಿ ಅಲಿ, ಜನವಾದಿ ಮಹಿಳಾ ಸಂಘಟನೆ ಅಧ್ಯಕ್ಷೆ ಮೀನಾಕ್ಷಿ ಬಾಳಿ, ಲೇಖಕಿಯರಾದ ಬಾನು ಮುಷ್ತಾಕ್, ರೂಪ


ಉದಯವಾಹಿನಿ ಚಿತ್ರ

ಬಸ್‌ನಿಲ್ದಾಣ ರಸ್ತೆಯಲ್ಲಿ ಬಹಿರಂಗ ಸಭೆ

ಹಾಸನ ಸೇರಿದಂತೆ ವಿವಿಧ ಸಂಘಟನೆಗಳ ಪ್ರತಿನಿಧಿಗಳು ಭಾಗವಹಿಸಿದ್ದಾರೆ.

ಮಹಿಳೆಯರು, ರೈತರು, ವಿದ್ಯಾರ್ಥಿಗಳು, ಲಿಂಗ ಅಲ್ಪಸಂಖ್ಯಾತರು, ಸಾಹಿತಿಗಳು, ಬುದ್ಧಿಜೀವಿಗಳು, ಕಲಾವಿದರು ಮತ್ತು ನಿವೃತ್ತ ಸರ್ಕಾರಿ ಅಧಿಕಾರಿಗಳನು ಒಳಗೊಂಡ ಹಲವಾರು ಸಂಘಟನೆಗಳು ಪ್ರಜ್ವಲ್ ರೇವಣ್ಣ ವಿರುದ್ಧ ಪ್ರತಿಭಟನೆಗೆ ಆಗಮಿಸಿದ್ದಾರೆ. ಬೆಂಗಳೂರು, ಮೈಸೂರು, ಹಾಸನ, ಮಂಗಳೂರು, ಮಂಡ್ಯ ಮತ್ತು ಚಿಕ್ಕಮಗಳೂರುಗಳಿಂದ ಮಹಿಳೆಯರ ಮೇಲಿನ ಲೈಂಗಿಕ ಶೋಷಣೆಯನ್ನು ವಿರೋಧಿಸಿ ಹಾಸನ ಚಲೋ ಪ್ರತಿಭಟನಾ ರ್‍ಯಾಲಿಯಲ್ಲಿ ಭಾಗವಹಿಸಿದ್ದಾರೆ.

ಹಾಸನ ಚಲೋ ಪ್ರತಿಭಟನಾ ಮೆರವಣಿಗೆ

ಕೆಲವು ಸಂಘಟನೆಗಳು ಸಂಸದ ಪ್ರಜ್ವಲ್ ಬಂಧನಕ್ಕೆ ಆಗ್ರಹಿಸಲು ಮುಂದಾಗಿದ್ದು, ಅದಕ್ಕೆ ಆಕ್ಷೇಪ ವ್ಯಕ್ತವಾಗಿತ್ತು. ಪೆನ್ ಡ್ರೈವ್ ಹಂಚಿ ಮಹಿಳೆಯರ ಮಾನ ಹರಾಜು ಮಾಡಿದವರನ್ನೂ ಬಂಧಿಸುವಂತೆ ಆಗ್ರಹಿಸಬೇಕು ಎನ್ನುವ ಚರ್ಚೆಯಾಗಿದ್ದರಿಂದ ಪ್ರಜ್ವಲ್ ಬಂಧನ ಹಾಗೂ ಪೆನ್‌ಡ್ರೈವ್ ಹಂಚಿದವರ ಮೇಲೆ ಕ್ರಮಕ್ಕೆ ಆಗ್ರಹಿಸಿ ಹಾಸನ ಚಲೋ ನಡೆಸಲು ನಿರ್ಧರಿಸಲಾಗಿದೆ' ಎಂದು ಸಂಘಟನೆಗಳ ಪ್ರಮುಖರು ತಿಳಿಸಿದ್ದಾರೆ.

ಬೆಂಕಿಗೆ ಆಹುತಿಯಾದ ನಿಂಬೆ ಬೆಳೆಗಾರ ಗುರುಶಾಂತ, ಚಂದ್ರಶೇಖರ, ಸಾಲೋಟಗಿಗೆ ಪರಿಹಾರಕ್ಕೆ ಆಗ್ರಹ

• ಶಿವರಾಜಕುಮಾರ ವಾಲಿಕಾರ

• ಉದಯವಾಹಿನಿ ಇಂಡಿ

ನಗರದ ಹಂಜಗಿ ರಸ್ತೆಯಲ್ಲಿ ಬರುವ ಸರ್ವೇ ನಂ975/5ರಲ್ಲಿ ಬರುವ 3 ಏಕರೆ ನಿಂಬೆ ಗಿಡಗಳು ಆಕಸ್ಮಿಕ ಬೆಂಕಿ ಅನಾಹುತದಲ್ಲಿ ಸುಟ್ಟು ಕರಕಲಾಗಿವೆ. ಸುಮಾರು 10 ವರ್ಷದ ನಿಂಬೆ ಗಿಡಗಳು ಮಗುವಿನಂತೆ ಟ್ಯಾಂಕರ ನೀರಿನಿಂದ ಜೋಪಾನ ಮಾಡಿದ ನಿಂಬೆ ಗಿಡಗಳು ಬೆಂಕಿಗೆ ಆಹುತಿಯಾದ ಘಟನೆ ರೈತನ ಕುಟುಂಬಕ್ಕೆ ಬರಸಿಡಿಲು ಬಡಿದಂತಾಗಿದೆ. ಇಲ್ಲಿಯವರೆ ಸಂಬಂಧಿಸಿದ ಇಲಾಖೆಯಾಗಲಿ,ನಿಂಬೆ ಅಬಿವೃದ್ಧಿ ಮಂಡಳಿಯಾಗಲಿ ಸೂಕ್ತ ಕ್ರಮದ ಭರವಸೆ ನೀಡದಿರುವುದು ವಿಪರ್ಯಾಸವೆಂದು ರೈತ ತಮ್ಮ ತೋಳಲು ತೋಡಿಕೊಂಡಿದ್ದಾನೆ.

ಈ ಘಟನೆಯನ್ನ

ಉತ್ತರ ಪ್ರದೇಶದ ಪೂರ್ವಭಾಗದಲ್ಲಿ ನಾಳೆ ಮತದಾನ

ಉ.ಪ್ರದೇಶದ ಪೂರ್ವಾಂಚಲದಲ್ಲಿ ಬಿಜೆಪಿಗೆ ವರವಾಗುವುದೇ 'ಯೋಗಿ – ಮೋದಿ', 'ಬುಲ್ಡೋಜರ್ – ರಾಮಮಂದಿರ್' ಫ್ಯಾಕ್ಟರ್?

ಲಕ್ನೋ: ವಿಶ್ವದ ಅತಿ ದೊಡ್ಡ ಪ್ರಜಾಪ್ರಭುತ್ವವಾದ ಭಾರತದ ಲೋಕಸಭಾ ಚುನಾವಣೆಯ ಪರ್ವ ಈಗ ಅಂತಿಮ ಚರಣಕ್ಕೆ ಕಾಲಿಟ್ಟಿದೆ. ಬಿಹಾರದಲ್ಲಿ 8 ಸ್ಥಾನ, ಹಿಮಾಚಲ ಪ್ರದೇಶದಲ್ಲಿ 4, ಒಡಿಶಾದಲ್ಲಿ 6, ಪಂಜಾಬ್ ನಲ್ಲಿ 13, ಪಶ್ಚಿಮ ಬಂಗಾಳದಲ್ಲಿ 9, ಜಾರ್ಖಂಡ್ ನಲ್ಲಿ 3, ಚಂಡೀಗಢದಲ್ಲಿ 1 ಸ್ಥಾನ ಹಾಗೂ ಉತ್ತರ ಪ್ರದೇಶದಲ್ಲಿ 13 ಸ್ಥಾನಗಳಿಗೆ ಜೂ. 1ರಂದು ಮತದಾನ ನಡೆಯಲಿದೆ. ಈ ಹಂತದ ಮತದಾನದೊಂದಿಗೆ ಈ ಬಾರಿಯ ಲೋಕಸಭಾ ಚುನಾವಣೆಯ ಎಲ್ಲಾ ಏಳು ಹಂತದ ಮತದಾನ ಪೂರ್ಣವಾಗಿ ಜೂ. 4ರಂದು ಫಲಿತಾಂಶ ಹೊರಬೀಳಲಿದೆ.

ಏಳನೇ ಸುತ್ತಿನ ಈ ಮತದಾನದಲ್ಲಿ ಅತ್ಯಂತ ಪ್ರಮುಖವೆಂದು ಪರಿಗಣಿಸಲ್ಪಟ್ಟಿರುವುದು, ಉತ್ತರ ಪ್ರದೇಶದ 13 ಸ್ಥಾನಗಳು. ಈ ಎಲ್ಲಾ ಸ್ಥಾನಗಳು ಇರುವುದು ಆ ರಾಜ್ಯದ ಪೂರ್ವಭಾಗದಲ್ಲಿ. ಅದನ್ನು ಪೂರ್ವಾಂಚಲ ಎಂದು ಕರೆಯಲಾಗುತ್ತದೆ. ಈ 13 ಸ್ಥಾನಗಳಲ್ಲೇ ಪ್ರಧಾನಿ ನರೇಂದ್ರ ಮೋದಿಯವರು ಸ್ಪರ್ಧಿಸಿರುವ ವಾರಾಣಸಿ ಕ್ಷೇತ್ರವೂ ಇದೆ.

ಮತದಾನ ಅತ್ಯಂತ ಮಹತ್ವ

ಅದರ ಜೊತೆಗೆ, ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರ ಸ್ವಕ್ಷೇತ್ರವಾದ ಗೋರಖ್ ಪುರ ಹಾಗೂ ಇತ್ತೀಚೆಗೆ ರಾಷ್ಟ್ರಮಟ್ಟದಲ್ಲಿ ಸುದ್ದಿಯಾಗಿದ್ದ ಭೂಗತ ಪಾತಕಿಗಳಾದ ಅನ್ಸಾರಿ ಸಹೋದರರ ಆಡಂಬೋಲವಾಗಿದ್ದ ಗಾಜಿಯಾಪುರ ಕ್ಷೇತ್ರವೂ ಇದೆ. ಹಾಗಾಗಿಯೇ, ಪೂರ್ವ ಉತ್ತರ ಪ್ರದೇಶದ ಕ್ಷೇತ್ರಗಳಿಗಾಗಿ ನಡೆಯುತ್ತಿರುವ ಮತದಾನ ಅತ್ಯಂತ ಮಹತ್ವದ್ದಾಗಿದೆ.

ಪೂರ್ವಾಂಚಲದಲ್ಲಿ ಬಿಜೆಪಿಗೆ ಅನುಕೂಲವಾಗುತ್ತದೆಯೇ?

ಪೂರ್ವಾಂಚಲ ಪ್ರಾಂತ್ಯ ನಟೋರಿಯಸ್ ಗ್ಯಾಂಗ್ ಸ್ಟರ್ ಗಳು, ಪುಡಿ ರೌಡಿಗಳು, ಭ್ರಷ್ಟಾಚಾರ ಹಾಗೂ ಅಭಿವೃದ್ಧಿ ರಹಿತ ಪ್ರದೇಶ ಎಂದೇ ಈ ಹಿಂದೆ ಹೆಸರು ಮಾಡಿತ್ತು. ಯೋಗಿ ಆದಿತ್ಯನಾಥ್ ಅಧಿಕಾರಕ್ಕೆ ಬಂದ ನಂತರ, ಇಡೀ ಉತ್ತರ ಪ್ರದೇಶದಲ್ಲಿ ಅವರು ಭೂಗತ ಪಾತಕಿಗಳನ್ನು ಮಟ್ಟ ಹಾಕಲು ಮುಂದಾಗಿದ್ದರು. ಅದರ ಫಲವಾಗಿ, ಪೂರ್ವಾಂಚಲದಲ್ಲಿ ಜನ ಸಾಮಾನ್ಯರಿಗೆ ರೌಡಿಗಳ ಹಾವಳಿಯಿಂದ ಕೊಂಚ ರಿಲೀಫ್ ಸಿಕ್ಕಿದೆ ಎಂದು ಹೇಳಲಾಗಿದೆ. ಜೊತೆಗೆ, ಯೋಗಿ ಆದಿತ್ಯನಾಥ್ ಅವರಿಂದ ಸಮಾಜ ಘಾತುಕ ವ್ಯಕ್ತಿಗಳ ಮನೆಗಳನ್ನು ಧ್ವಂಸ ಮಾಡುವಂಥ ರೀತಿ ಕೂಡ ಅಲ್ಲಿನ ಜನರಲ್ಲಿ ಸರ್ಕಾರದ ಮೇಲೆ ಭರವಸೆ ಮೂಡಿಸಿದೆ ಎಂದು ಹೇಳಲಾಗಿದೆ.

ಇದೆಲ್ಲದರ ಜೊತೆಗೆ, ಪೂರ್ವಾಂಚಲದಲ್ಲಿ ಅನೇಕ ಅಭಿವೃದ್ಧಿ ಕಾರ್ಯಕ್ರಮಗಳನ್ನು ಯೋಗಿ ಸರ್ಕಾರ ಜಾರಿಗೊಳಿಸಿದೆ. ನಾವು ನೀವೆಲ್ಲಾ ತಿಳಿದಂತೆ ಕಾಶಿ ವಾರಾಣಸಿ ಯಾರೂ ಊಹಿಸದ ರೀತಿಯಲ್ಲಿ ಅಭಿವೃದ್ಧಿಯಾಗಿದೆ. ಇದೇ ಪೂರ್ವಾಂಚಲದಲ್ಲಿ ಶತಮಾನಗಳ ಹಿಂದೆ ಆರಂಭವಾಗಿದ್ದ ರಾಮಮಂದಿರದ ಆಂದೋಲನದ ಧ್ಯೋತಕವಾಗಿ ಇದೇ ಭಾಗದಲ್ಲಿರುವ ಅಯೋಧ್ಯೆಯಲ್ಲೇಗ ರಾಮಮಂದಿರ ನಿರ್ಮಾಣವಾಗಿದೆ.

ಹೀಗೆ, ಸಮಾಜ ಘಾತುಕ ಶಕ್ತಿಗಳನ್ನು ಮಟ್ಟಹಾಕಿದ್ದು, ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದು, ಇಲ್ಲಿನ ಧಾರ್ಮಿಕ ಕ್ಷೇತ್ರಗಳಿಗೆ ಹೆಚ್ಚಿನ ಮಹತ್ವ ತಂದು ಕೊಟ್ಟಿದ್ದು ಬಿಜೆಪಿಗೆ ಈ ಬಾರಿ ಪ್ಲಸ್ ಪಾಯಿಂಟ್ ಆಗಲಿವೆ ಎಂದು ಹೇಳಲಾಗುತ್ತಿದೆ. ಇದೆಲ್ಲದರ ಪರಿಣಾಮವಾಗಿ ಇಲ್ಲಿನ 13 ಕ್ಷೇತ್ರಗಳಲ್ಲಿ ಬಿಜೆಪಿ ಉತ್ತಮ ಫೈಟ್ ನೀಡಬಹುದೆಂದು ನಿರೀಕ್ಷಿಸಲಾಗಿದೆ.

ಬಿಎಸ್‌ಪಿಯಿಂದ ಸೆಡ್ಡು

ಬಿಜೆಪಿಯ ಪ್ರಮುಖ ಎದುರಾಳಿಯಾದ ಬಿಎಸ್ ಪಿಯು ಇಲ್ಲಿ ಜಾತಿ ಆಧಾರಿತ ರಾಜನೀತಿ ಪಾಲಿಸಿ ಅದರಂತೆಯೇ ಟಿಕೆಟ್ ನೀಡಿದೆ. ಅದರಲ್ಲೂ ಪ್ರಮುಖವಾಗಿ ಈ ಪ್ರಾಂತ್ಯದಲ್ಲಿ ನಿರ್ಣಾಯಕವಾಗಿರುವ ರಾಜಭರ್ ಎಂಬ ಜಾತಿಯ ಒಲೈಕೆಗಾಗಿ ಅದೇ ಸಮುದಾಯದವರಿಗೆ ಹೆಚ್ಚು ಟಿಕೆಟ್ ನೀಡಿದೆ. ಇದು ಯಾವ ರೀತಿ ಕೆಲಸ ಮಾಡಲಿದೆ, ಜಾತಿ ರಾಜಕಾರಣ ಮೀರಿ ಜನರು, ಸಮಾಜ ಸುಧಾರಣೆಯಂಥ ಹೆಜ್ಜೆಯನ್ನಿಟ್ಟಿರುವ ಬಿಜೆಪಿಗೆ ಮತ ಹಾಕುತ್ತಾರಾ ಎಂಬುದು ಜೂ. 4ರಂದು ಗೊತ್ತಾಗುತ್ತದೆ.

ದೇಶದ ಲೋಕಸಭಾ ಚುನಾವಣೆಯಲ್ಲಿ ಉತ್ತರ ಪ್ರದೇಶ ರಾಜ್ಯ ತುಂಬಾ ಮಹತ್ವದ್ದು. ಅಲ್ಲಿ ಅತಿ ಹೆಚ್ಚು ಲೋಕಸಭಾ ಕ್ಷೇತ್ರಗಳು (80) ಇವೆ. ಅಲ್ಲಿ ಯಾವ ಪಕ್ಷ ಹೆಚ್ಚು ಸ್ಥಾನಗಳನ್ನು ಗಳಿಸುತ್ತದೆಯೋ ಆ ಪಕ್ಷವೇ ಕೇಂದ್ರದಲ್ಲಿ ಅಧಿಕಾರಕ್ಕೇರುತ್ತದೆ ಎಂಬ ಮಾತಿದೆ. ಹಾಗಾಗಿಯೇ ಪ್ರತಿ ಬಾರಿ ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಈ ರಾಜ್ಯಕ್ಕೆ ಎಲ್ಲಿಲ್ಲದ ಮಹತ್ವ ಬರುತ್ತದೆ. ಈ ರಾಜ್ಯದ ಪೂರ್ವಭಾಗದಲ್ಲಿನ (ಇದನ್ನು ಪೂರ್ವಾಂಚಲ ಎಂದು ಕರೆಯಲಾಗುತ್ತದೆ) ಜೂ. 1ರಂದು ಮತದಾನ ನಡೆಯಲಿದ್ದು, ಒಟ್ಟು 13 ಕ್ಷೇತ್ರಗಳಲ್ಲಿ ಮತದಾರರು ತಮ್ಮ ಮತ ಚಲಾಯಿಸಲಿದ್ದಾರೆ. ಇವುಗಳಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ವಾರಾಣಸಿ ಕ್ಷೇತ್ರ, ಸಿಎಂ ಯೋಗಿ ಆದಿತ್ಯನಾಥ್ ಅವರ ತವರು ಕ್ಷೇತ್ರವಾದ ಗೋರಖ್ ಪುರ ಕ್ಷೇತ್ರಗಳೂ ಇವೆ. ಗೋರಖ್ ಪುರದಲ್ಲಿ ಬಿಜೆಪಿಯಿಂದ ರವಿ ಕಿಶನ್ ಸ್ಪರ್ಧಿಸಿದ್ದಾರೆ.

ಭಾರತದ ಅಭಿವೃದ್ಧಿಗೆ ಮೋದಿ ಮುನ್ನುಡಿ ಬರೆದಿದ್ದಾರೆ: ಮಲ್ಹೋತ್ರಾ

ವಾಷಿಂಗ್ಟನ್: ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ 10 ವರ್ಷಗಳ ಆಡಳಿತದಲ್ಲಿ ಅಭಿವದ್ಧಿಯತ್ತ ಗಮನ ಹರಿಸಿದ್ದಾರೆ ಎಂದು ಭಾರತೀಯ ಮೂಲದ ಪ್ರಭಾವಿ ಅಮೆರಿಕನ್ ಲೇಖಕರೊಬ್ಬರು ಹೇಳಿದ್ದಾರೆ. ಭಾರತ ತನ್ನ ಎಲ್ಲಾ ಸವಾಲುಗಳನ್ನು ಎದುರಿಸಲು ಮೋದಿ ಸರಕಾರವೇ ಕಾರಣ. ಜನರು ಹೇಳಿಕೊಳ್ಳುವ, ವಾದಿಸುವ ಮತ್ತು ಟೀಕಿಸುವ ಎಲ್ಲಾ ವಿಷಯಗಳ ಹೊರತಾಗಿಯೂ, ಅವರು ಅಭಿವದ್ಧಿಯನ್ನು ತಲುಪಿಸಿದ್ದಾರೆ ಎಂಬುದು ವಾಸ್ತವ. ಇನ್ನೂ ಹೆಚ್ಚಿನ ಅಭಿವದ್ಧಿಯ ಅಗತ್ಯವಿದೆ ಅದನ್ನು ಅವರು ಸಾಧಿಸುತ್ತಾರೆ ಎಂದು ಪ್ರಿನ್ಸ್‌ಟನ್ ಮೂಲದ ಭಾರತೀಯ-ಅಮೆರಿಕನ್ ಲೇಖಕ ರಾಜೀವ್ ಮಲ್ಹೋತ್ರಾ ಪಿಟಿಐಗೆ ನೀಡಿದ ಸಂದರ್ಶನದಲ್ಲಿ ತಿಳಿಸಿದ್ದಾರೆ.

ಮಲ್ಹೋತ್ರಾ ಅವರು ಕಳೆದ ಕೆಲವು ದಶಕಗಳಲ್ಲಿ ಭಾರತೀಯ ಸಂಸ್ಕೃತಿ ಮತ್ತು ಸಮಾಜದ ಪಾಶ್ಚಿಮಾತ್ಯ ಶೈಕ್ಷಣಿಕ ಅಧ್ಯಯನಕ್ಕೆ ವಿರುದ್ಧವಾಗಿ ಹಲವಾರು ಪುಸ್ತಕಗಳನ್ನು ಬರೆದಿದ್ದಾರೆ. ಇತ್ತೀಚೆಗೆಸ್ನೇಕ್ ಇನ್ ದ ಗಂಗಾ; ಬ್ರೇಕಿಂಗ್ ಇಂಡಿಯಾ 2.0 ಎಂಬ ಕೃತಿ ರಚಿಸಿರುವ ಮಲೋತ್ರಾ ಅವರು, ಭಾರತೀಯ ಮಾಧ್ಯಮ ವರದಿಗಳನ್ನು ಉಲ್ಲೇಖಿಸಿ ಮೋದಿ ಮೂರನೇ ಅವಧಿಗೆ ಮತ್ತೆ ಅಧಿಕಾರಕ್ಕೆ ಬರುತ್ತಿರುವಂತೆ ತೋರುತ್ತಿದೆ ಎಂದು ಹೇಳಿದರು. ತಮ ಎರಡು ಅವಧಿಗಳಲ್ಲಿ ಮೋದಿ ಸರ್ಕಾರವು ಸಮಾಜದ ಎಲ್ಲಾ ವರ್ಗಗಳಿಗೆ ಅನುಕೂಲವಾಗುವ ಅಭಿವದ್ಧಿಯನ್ನು ಕೈಗೊಂಡಿದೆ ಎಂದು ಹೇಳಿದರು.

ಬಡವರಿಂದ ಹಿಡಿದು ಅಲ್ಪಸಂಖ್ಯಾತರವರೆಗೂ ಸಮಾಜದ ಪ್ರತಿಯೊಂದು ವಿಭಾಗವು ಪ್ರಯೋಜನ ಪಡೆದಿದೆ ಎಂದು ನೀವು ಅಂಕಿಅಂಶಗಳನ್ನು ನೋಡಬಹುದು ಎಂದಿದ್ದಾರೆ. ಈಗ ಅವರು ರಸ್ತೆಗಳು, ಶುದ್ಧ ನೀರು, ಉತ್ತಮ ಆರೋಗ್ಯ ಸೌಲಭ್ಯಗಳು, ಆಹಾರ ಮತ್ತು ಶಿಕ್ಷಣವನ್ನು ಹೊಂದಿದ್ದಾರೆ ಎಂದು ನೀವು ಸಂಖ್ಯಾತಕವಾಗಿ ತೋರಿಸಿದಾಗ. ಆದ್ದರಿಂದ ಹಿಂದಿನ ಸರ್ಕಾರ ಬಡತನದ ವಿರುದ್ಧ ಹೋರಾಡುವ ಎಲ್ಲಾ ಘೋಷಣೆಗಳನ್ನು ಮಾಡುತ್ತಿದ್ದರೆ ಈ ಸರ್ಕಾರವು ಈಡೇರಿಸಿದೆ ಎಂದು ಜನರು ಹೇಳಬೇಕು ಎಂದರು.

ಅಂತಿಮವಾಗಿ, ಬಡ ಜನರಿಗೆ ಆರ್ಥಿಕ ಅಭಿವದ್ಧಿಯ ಅಗತ್ಯವಿದೆ ಮತ್ತು ಅದು ಈ ಸರ್ಕಾರದ ಯಶಸ್ವಿ ಕೇಂದ್ರ ಕಾರ್ಯಸೂಚಿಯಾಗಿದೆ ಎಂದು ಮಲ್ಹೋತ್ರಾ ಹೇಳಿದರು, ಮೋದಿ ತಮ ಮೂರನೇ ಅವಧಿಯಲ್ಲಿ ಭಾರತದ ಆಂತರಿಕ ವ್ಯವಹಾರಗಳಲ್ಲಿ ಹೊರಗಿನ ಶಕ್ತಿಗಳ ಹಸ್ತಕ್ಷೇಪ ಸೇರಿದಂತೆ ಹಲವಾರು ಪ್ರಮುಖ ಸವಾಲುಗಳ ಮೇಲೆ ಕೇಂದ್ರೀಕರಿಸಬೇಕು ಎಂದು ಸಲಹೆ ನೀಡಿದರು.

ಶಾಲಾ ಪಠ್ಯದಲ್ಲಿ ಕೃತಕ ಬುದ್ಧಿಮತ್ತೆ ಬಳಕೆಗೆ ನಿರ್ಧಾರ

ತಿರುವನಂತಪುರಂ: ಶಿಕ್ಷಣವನ್ನು ಆಧುನೀಕರಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯನ್ನಿಟ್ಟಿರುವ ಕೇರಳ ಸರ್ಕಾರವೂ ತನ್ನ ಶಾಲಾ ಪಠ್ಯಪುಸ್ತಕಗಳಲ್ಲಿ ಕತಕ ಬುದ್ಧಿಮತ್ತೆಯನ್ನು (ಎಐ) ಸಂಯೋಜಿಸುವ ನಿರ್ಧಾರ ಕೈಗೊಂಡಿದೆ. 7 ನೇ ತರಗತಿ ವಿದ್ಯಾರ್ಥಿಗಳಿಗೆ ಮಾಹಿತಿ, ಸಂವಹನ ತಂತ್ರಜ್ಞಾನ ಪಠ್ಯಕ್ರಮದಲ್ಲಿ ಎಐ ಕಲಿಕೆಯ ಮಾಡ್ಯೂಲ್‌ಗಳನ್ನು ಪರಿಚಯಿಸುವ ಯೋಜನೆಯನ್ನು ರಾಜ್ಯವು ಅನಾವರಣಗೊಳಿಸಿದೆ.

ಈ ಕ್ರಮವು ಕೇರಳದಾದ್ಯಂತ 4 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳ ಮೇಲೆ ಪರಿಣಾಮ ಬೀರಲು ಸಜ್ಜಾಗಿದೆ, ಮುಂಬರುವ ಶೈಕ್ಷಣಿಕ ವರ್ಷದಲ್ಲಿ ಎಐ ಕ್ಷೇತ್ರವನ್ನು ಅಧ್ಯಯನ ಮಾಡಲು ಅವರಿಗೆ ಅವಕಾಶವಿದೆ ಎಂದು ಕೇರಳ ಇನ್ಫ್ರಾಸ್ಟ್ರಕ್ಚರ್, ಟೆಕ್ನಾಲಜಿ ಫಾರ್ ಎಜುಕೇಶನ್ ಸಂಸ್ಥೆ ಪ್ರಕಟಣೆಯಲ್ಲಿ ತಿಳಿಸಿದೆ. ಸಂಸ್ಥೆಯ ಸಿಇಒ ಅನ್ವರ್ ಸಾದತ್ ಅವರು ಕಂಪ್ಯೂಟರ್ ವಿಷನ್ ಅಧ್ಯಾಯದ ಚಟುವಟಿಕೆಗಳಲ್ಲಿ ಒಂದಾದ ವಿದ್ಯಾರ್ಥಿಗಳು ತಮದೇ ಆದ ಎಐ ಪ್ರೋಗ್ರಾಂ ಅನ್ನು ರಚಿಸುವುದನ್ನು ಒಳಗೊಂಡಿರುತ್ತದೆ, ಅದು ಮಾನವ ಮುಖಭಾವಗಳನ್ನು ಗುರುತಿಸುತ್ತದೆ ಎಂದು ತಿಳಿಸಿದ್ದಾರೆ. ಈ ಕಾರ್ಯಕ್ರಮವು ವ್ಯಕ್ತಿಯ ಮುಖದ ಮೇಲೆ ಏಳು ವಿಭಿನ್ನ ಭಾವನೆಗಳನ್ನು ಗುರುತಿಸಲು ಸಾಧ್ಯವಾಗುತ್ತದೆ. ಇದು ಭಾರತದಲ್ಲಿ ಮೊದಲ ಬಾರಿಗೆ ಒಂದು ತರಗತಿಯ ಎಲ್ಲಾ ವಿದ್ಯಾರ್ಥಿಗಳು ಏಕರೂಪವಾಗಿ ಎಐ ಕಲಿಯಲು ಅವಕಾಶವನ್ನು ಪಡೆಯುತ್ತಿದೆ ಎಂದು ಅವರು ಹೇಳಿದರು.

ಜೂನ್ 3 ರಂದು ಪ್ರಾರಂಭವಾಗುವ ಹೊಸ ಶೈಕ್ಷಣಿಕ ವರ್ಷವು ಮಲಯಾಳಂ, ಇಂಗ್ಲಿಷ್, ತಮಿಳು ಮತ್ತು ಕನ್ನಡ ಮಾಧ್ಯಮಗಳಲ್ಲಿ 1, 3, 5, 7 ನೇ ತರಗತಿಗಳಿಗೆ ಹೊಸ ಎಐ ಪಠ್ಯಪುಸ್ತಕಗಳನ್ನು ಪರಿಚಯಿಸಲಾಗುತ್ತಿದೆ. ಪಠ್ಯಕ್ರಮದ ಚೌಕಟ್ಟು ಮಕ್ಕಳ ವಿಮರ್ಶಾತಕ ಚಿಂತನೆ, ವಿಶ್ಲೇಷಣಾತಕ ಕೌಶಲ್ಯಗಳು ಮತ್ತು ಸಮಸ್ಯೆ-ಪರಿಹರಿಸುವ ಸಾಮರ್ಥ್ಯಗಳ ಬೆಳವಣಿಗೆಗೆ ಒತ್ತು ನೀಡುತ್ತದೆ, ಇದು ಅವರ ಸಮಗ್ರ ಬೆಳವಣಿಗೆಗೆ ಅವಶ್ಯಕವಾಗಿದೆ ಎಂದು ಅವರು ಹೇಳಿದ್ದಾರೆ.

ಪುರಿ ಜಗನ್ನಾಥ ಜಾತ್ರೆಯಲ್ಲಿ ಪಟಾಕಿ ಸ್ಫೋಟಕ್ಕೆ ಓರ್ವ ಬಲಿ

ಪುರಿ: ದೇವಸ್ಥಾನದ ಪಟ್ಟಣವಾದ ಪುರಿಯಲ್ಲಿ ತಡರಾತ್ರಿ ಭಗವಾನ್ ಜಗನ್ನಾಥನ ಚಂದನ್ ಜಾತ್ರಾ ಉತ್ಸವದ ಸಂದರ್ಭದಲ್ಲಿ ಪಟಾಕಿ ಸ್ಫೋಟದಲ್ಲಿ ಓರ್ವ ಭಕ್ತ ಸಾವನ್ನಪ್ಪಿ ಇತರ 23 ಮಂದಿ ಗಾಯಗೊಂಡಿದ್ದಾರೆ. ನಿನ್ನೆ ರಾತ್ರಿ ಅಪಘಾತ ಸಂಭವಿಸಿದಾಗ ನೂರಾರು ಜನರು ಜಲಾನಯನ ಪ್ರದೇಶವಾದ ನರೇಂದ್ರ ಪುಷ್ಕರಿಣಿಯ ದಡದಲ್ಲಿ ಧಾರ್ಮಿಕ ಕ್ರಿಯೆಗಳನ್ನು ವೀಕ್ಷಿಸಲು ಜಮಾಯಿಸಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಭಕ್ತರ ಗುಂಪು ಪಟಾಕಿಗಳೊಂದಿಗೆ ಹಬ್ಬವನ್ನು ಆಚರಿಸುತ್ತಿದ್ದಾಗ, ಇದ್ದಕ್ಕಿದ್ದಂತೆ, ಒಂದು ಕಿಡಿ ಪಟಾಕಿ ರಾಶಿಗೆ ತಗುಲಿ ಭಾರಿ ಸ್ಫೋಟ ಸಂಭವಿಸಿತ್ತು. ಈ ಸಂದರ್ಭದಲ್ಲಿ ಜನರಕ್ಷಣೆಗಾಗಿ ಜಲಮೂಲಕ್ಕೆ ಹಾರಿದರು. ಈ ಘಟನೆಯಲ್ಲಿ ಗಾಯಗೊಂಡವರನ್ನು ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದ್ದು, ಮೂವರ ಸ್ಥಿತಿ ಚಿಂತಾಜನಕವಾಗಿದೆ ಎಂದು ವೈದ್ಯರು ತಿಳಿಸಿದ್ದಾರೆ. ಮುಖ್ಯಮಂತ್ರಿ ನವೀನ್ ಪಟ್ನಾಯಕ್ ಘಟನೆಯ ಬಗ್ಗೆ ಸಂತಾಪ ವ್ಯಕ್ತಪಡಿಸಿದ್ದಾರೆ ಮತ್ತು ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆ ನೀಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಚಿಕಿತ್ಸೆಯ ವೆಚ್ಚವನ್ನು ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಭರಿಸಲಾಗುವುದು ಎಂದರು. ಪುರಿ ನರೇಂದ್ರ ಕೊಳದ ಬಳಿ ನಡೆದ ಅಪಘಾತದ ಬಗ್ಗೆ ಕೇಳಿ ವಿಷಾದವಿದೆ, ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆ ಹಾಗೂ ವ್ಯವಸ್ಥೆ ಬಗ್ಗೆ ನಿಗಾ ವಹಿಸುವಂತೆ ಮುಖ್ಯ ಆಡಳಿತ ಕಾರ್ಯದರ್ಶಿ, ಜಿಲ್ಲಾಡಳಿತಕ್ಕೆ ಸೂಚಿಸಲಾಗಿದೆ. ಗಾಯಾಳುಗಳ ಎಲ್ಲಾ ಚಿಕಿತ್ಸಾ ವೆಚ್ಚವನ್ನು ಮುಖ್ಯಮಂತ್ರಿಗಳ ಪರಿಹಾರದಿಂದ ಭರಿಸಲಾಗುವುದು. ಎಲ್ಲರಿಗೂ ಉತ್ತಮ ಆರೋಗ್ಯವನ್ನು ಹಾರೈಸುತ್ತೇನೆ ಎಂದು ಪಟ್ನಾಯಕ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ಕೂಡ ಘಟನೆಗೆ ಸಂತಾಪ ಸೂಚಿಸಿದ್ದಾರೆ. ಪುರಿ ಚಂದನ ಯಾತ್ರೆಯ ವೇಳೆ ನರೇಂದ್ರ ಪುಷ್ಕರಿಣಿ ದೇವಿಘಾಟ್‌ನಲ್ಲಿ ಸಂಭವಿಸಿದ ದುರ್ಘಟನೆಯಲ್ಲಿ ಹಲವರು ಗಾಯಗೊಂಡಿರುವ ಸುದ್ದಿ ಕೇಳಿ ಬೇಸರವಾಗಿದೆ, ಭಗವಂತನ ಆಶೀರ್ವಾದದಿಂದ ಚಿಕಿತ್ಸೆ ಪಡೆಯುತ್ತಿರುವವರು ಬೇಗ ಗುಣಮುಖರಾಗಿ ಹಿಂತಿರುಗಲಿ ಎಂದು ಹಾರೈಸುತ್ತೇನೆ ಎಂದು ಅವರು x ಮಾಡಿದ್ದಾರೆ.

ಅಮೆರಿಕನ್ ಏರ್‌ಲೈನ್ಸ್‌ವಿರುದ್ಧ ಮೊಕದ್ದಮೆ ದಾಖಲು

ವಾಷಿಂಗ್ಟನ್: ಜನಾಂಗೀಯ ತಾರತಮ್ಯದಿಂದ ನಮನ್ನು ವಿಮಾನದಿಂದ ಹೊರ ಕಳುಹಿಸಲಾಗಿದೆ ಎಂದು ಆರೋಪಿಸಿ ಮೂವರು ಕಪ್ಪು ವರ್ಣೀಯರು ಅಮೆರಿಕನ್ ಏರ್‌ಲೈನ್ಸ್ ವಿರುದ್ಧ ಮೊಕದ್ದಮೆ ದಾಖಲಿಸಿದ್ದಾರೆ. ಆಲ್ವಿನ್ ಜಾಕ್ಸನ್, ಇವ್ಯಾನುಯೆಲ್ ಜೀನ್ ಜೋಸೆಫ್ ಮತ್ತು ಕ್ಲೇವಿಯರ್ ವೀಲ್ಸ್ ಅವರು ಅಮೆರಿಕನ್ ಏರ್‌ಲೈನ್ಸ್ ನಲ್ಲಿ ನಮ ದೇಹದಿಂದ ದುರ್ವಾಸನೆ ಬರುತ್ತಿದೆ ಎಂದು ಆರೋಪಿಸಿದ ಫ್ಲೈಟ್ 832ರಿಂದ ನಮನ್ನು ಹೊರ ಹಾಕಲಾಯಿತು ಎಂದು ಆರೋಪಿಸಿದ್ದಾರೆ.

ನಮ ಜೊತೆಗೆ ಐದು ಇತರ ಕಪ್ಪು ಪುರುಷ ಪ್ರಯಾಣಿಕರನ್ನು ನಮೊಂದಿಗೆ ಹೊರ ಹಾಕಲಾಯಿತು. ಈ ಘಟನೆಯು ಜನವರಿ 5, 2024 ರಂದು ನಡೆದಿದ್ದು, ವಿಮಾನವು ಫೀನಿಕ್ಸ್‌ನಿಂದ ನ್ಯೂಯಾರ್ಕ್ ನ ಜೆಎಫ್‌ಕೆ ವಿಮಾನ ನಿಲ್ದಾಣಕ್ಕೆ ತೆರಳುತ್ತಿತ್ತು ಎಂದು

ಸಿಎನ್‌ಎನ್ ತನ್ನ ವರದಿಯಲ್ಲಿ ತಿಳಿಸಿದೆ. ದೂರುದಾರರು ಮೊಕದ್ದಮೆಯಲ್ಲಿ ಯಾವುದೇ ಮಾನ್ಯ ಕಾರಣವಿಲ್ಲದೆ, ಕೇವಲ ತಮ ಜನಾಂಗದ ಆಧಾರದ ಮೇಲೆ ಹೊರಹಾಕಲ್ಪಟ್ಟಿದ್ದಾರೆ ಎಂದು ಹೇಳಿದ್ದಾರೆ. ಟೇಕ್-ಆಫ್ ಆಗುವ ಮೊದಲು ಅಮೇರಿಕನ್ ಏರ್‌ಲೈನ್ಸ್ ಸಿಬ್ಬಂದಿ ಅವರನ್ನು ಸಂಪರ್ಕಿಸಿದಾಗ, ವಿಮಾನದಿಂದ ಇಳಿಯಲು ಆದೇಶಿಸಿದಾಗ, ಪುರುಷರು ಅದನ್ನು ಪಾಲಿಸಿದರು. ಅವರು ಜೆಟ್ ಸೇತುವೆಯನ್ನು ತಲುಪಿದ ನಂತರ, ಹಲವಾರು ಇತರ ಕಪ್ಪು ಪುರುಷರನ್ನು ಸಹ ವಿಮಾನದಿಂದ ಹೊರ ಕಳುಹಿಸುವುದನ್ನು ನೋಡಲಾಯಿತು. ವಾಸ್ತವವಾಗಿ, 832 ಫ್ಲೈಟ್‌ನಲ್ಲಿರುವ ಎಲ್ಲಾ ಕಪ್ಪು ಪುರುಷ ಪ್ರಯಾಣಿಕರನ್ನು ವಿಮಾನದಿಂದ ಕೆಳಗೆ ಇಳಿಸಲು ಅಮೆರಿಕನ್ನರು ಆದೇಶಿಸಿದ್ದಾರೆ ಎಂದು ಆರೋಪಿಸಲಾಗಿದೆ.

**ನಂತರ ಅವರಿಗೆ ದೇಹದ ವಾಸನೆಯ ದೂರಿನ ಬಗ್ಗೆ ತಿಳಿಸಲಾಯಿತು ಆದರೆ ಅವರಿಗೆ ಅದರ ಬಗ್ಗೆ ವೈಯಕ್ತಿಕವಾಗಿ ಹೇಳಲಾಗಿಲ್ಲ, ಮತ್ತು ವಾಸ್ತವವಾಗಿ ಯಾವುದೇ ಫಿರ್ಯಾದಿಗಳು ಆಕ್ಷೇಪಾರ್ಹ ದೇಹದ ವಾಸನೆಯನ್ನು ಹೊಂದಿರಲಿಲ್ಲ ಎಂದು

ಕೊಹ್ಲಿಯನ್ನು ಟೀಕಿಸಿದ್ದಕ್ಕಾಗಿ ಕೊಲೆ ಬೆದರಿಕೆ

ಇತ್ತೀಚೆಗಷ್ಟೇ ಮುಗಿದ 17ನೇ ಆವೃತ್ತಿಯ ಐಪಿಎಲ್‌ನಲ್ಲಿ ಆರ್‌ಸಿಬಿಯ ಮಾಜಿ ನಾಯಕ ವಿರಾಟ್ ಕೊಹ್ಲಿ 741 ರನ್ ಕಲೆಹಾಕುವ ಮೂಲಕ ಈ ಸೀಸನ್‌ನಲ್ಲಿ ಅಧಿಕ ರನ್ ಬಾರಿಸಿದ ಬ್ಯಾಟರ್ ಎನಿಸಿಕೊಂಡಿದಲ್ಲದೆ ಆರೆಂಜ್ ಕ್ಯಾಪ್ ಕೂಡ ಗೆದ್ದಿದ್ದರು. ಆದರೆ ಈ ಸಾಧನೆಯ ನಡುವೆಯೂ ಕೊಹ್ಲಿಯ ಸ್ಟ್ರೈಕ್ ರೇಟ್ ಬಗ್ಗೆ ಹಲವು ಬಾರಿ ಪ್ರಶ್ನೆಗಳು ಎದ್ದಿದ್ದವು. ಟೀಂ ಇಂಡಿಯಾದ ಮಾಜಿ ಆಟಗಾರ ಸುನಿಲ್ ಗವಾಸ್ಕರ್ ಸೇರಿದಂತೆ ಅನೇಕ ಮಾಜಿ ಕ್ರಿಕೆಟಿಗರು ಸ್ಟ್ರೈಕ್ ರೇಟ್ ವಿಚಾರದಲ್ಲಿ ಕೊಹ್ಲಿಯನ್ನು ಟೀಕಿಸಿದ್ದರು. ಈ ಟೀಕೆಗಳಿಗೆಲ್ಲ ಉತ್ತರಿಸಿದ್ದ ಕೊಹ್ಲಿ, ಮೈದಾನದಲ್ಲಿ ಆಡುವವರಿಗೆ ಮಾತ್ರ ಆಟದ ಗಂಭೀರತೆ ಅರ್ಥವಾಗುತ್ತದೆ ಎಂದು ಹೇಳುವ ಮೂಲಕ ಎಲ್ಲಾರ ಬಾಯಿ ಮುಚ್ಚಿಸುವ ಕೆಲಸ ಮಾಡಿದ್ದರು.

ಈ ನಡುವೆ ಮಾಜಿ ಅನುಭವಿಯೊಬ್ಬರು ವಿರಾಟ್ ಕೊಹ್ಲಿಯನ್ನು ಟೀಕಿಸಿದ್ದಕ್ಕಾಗಿ ನನಗೆ ಪ್ರಾಣ ಬೆದರಿಕೆ ಕೂಡ ಬಂದಿತ್ತು ಎಂಬ ಸ್ಫೋಟಕ ವಿಚಾರವನ್ನು ಬಹಿರಂಗಪಡಿಸಿದ್ದಾರೆ. ಅಷ್ಟಕ್ಕೂ ಈ ಪ್ರಾಣ ಬೆದರಿಕೆಗೆ ಒಳಗಾದ ಆಟಗಾರ ಮತ್ತಾ್ಯರು ಅಲ್ಲ, ನ್ಯೂಜಿಲೆಂಡ್‌ನ ಮಾಜಿ ವೇಗದ ಬೌಲರ್ ಮತ್ತು ವೀಕ್ಷಕ ವಿವರಣೆಗಾರ ಸೈಮನ್ ಡೌಲ್. ಸುನಿಲ್ ಗವಾಸ್ಕರ್ ಜೊತೆಗೆ ಸೈಮನ್ ಡೌಲ್ ಕೂಡ ವಿರಾಟ್ ಕೊಹ್ಲಿಯ ಸ್ಟ್ರೈಕ್ ರೇಟ್ ಬಗ್ಗೆ ಮಾತನಾಡಿದ್ದರು. ಈ ಬಗ್ಗೆ ಹೇಳಿಕೊಂಡಿರುವ ಅವರು, ಕೊಹ್ಲಿ ಶ್ರೇಷ್ಠ ಆಟಗಾರನಾಗಿ ಪ್ರಾಬಲ್ಯ ಸಾಧಿಸುವುದನ್ನು ನಾನು ನೋಡಲು ಬಯಸುತ್ತೇನೆ. ಅದಕ್ಕಾಗಿಯೇ ನಾನು ಅವರ ಸ್ಟ್ರೈಕ್ ರೇಟ್ ಬಗ್ಗೆ ಮಾತನಾಡುತ್ತೇನೆ ಎಂದಿದ್ದಾರೆ.

ವಾಸ್ತವವಾಗಿ ವೀಕ್ಷಕ ವಿವರಣೆ ನೀಡುವ ಸಂದರ್ಭದಲ್ಲಿ ಸೈಮನ್, 'ಬಹುಶಃ ಕೊಹ್ಲಿ ಔಟಾಗುವ ಆತಂಕದಲ್ಲಿ ಬ್ಯಾಟ್ ಬೀಸುತ್ತಿದ್ದಾರೆ. ನಾನು ಬಾಬರ್ ಆಝಂಗೂ ಇದೇ ಮಾತನ್ನು ಹೇಳಿದ್ದೆ. ಇದಕ್ಕೆ ಉತ್ತರಿಸಿದ್ದ ಬಾಬರ್, ನನ್ನ ಕೋಚ್ ಕೂಡ ಅದನ್ನೇ ಹೇಳಿದ್ದರು ಎಂದು ನನ್ನ ಬಳಿ ಹೇಳಿಕೊಂಡಿದ್ದರು'. 'ಆದರೆ ವಿರಾಟ್ ಕೊಹ್ಲಿ ವಿಚಾರದಲ್ಲಿ ಹೀಗಾಗಲಿಲ್ಲ. ಈ ವರ್ಷ ನಾನು ವಿರಾಟ್ ಕೊಹ್ಲಿಯ ಸಿಕ್ಸರ್‌ಗಳನ್ನು ಹೊಡೆಯುವ ಉದ್ದೇಶವನ್ನು ನಿಜವಾಗಿಯೂ ಇಷ್ಟಪಟ್ಟೆ. ಹೀಗಾಗಿ ಕೊಹ್ಲಿ ಔಟಾಗುವ ಬಗ್ಗೆ ಚಿಂತಿಸಬಾರದು ಎಂದು ನಾನು ನಂಬುತ್ತೇನೆ'. 'ಇಲ್ಲಿಯವರೆಗೆ ನಾನು ವಿರಾಟ್ ಕೊಹ್ಲಿ ಬಗ್ಗೆ ಸಾವಿರಾರು ಪಾಸಿಟಿವ್ ವಿಷಯಗಳನ್ನು ಹೇಳಿದ್ದೇನೆ. ಆದರೆ ನಾನು ಅವರ ಬಗ್ಗೆ ಒಂದೇ ಒಂದು ನೆಗೆಟಿವ್ ವಿಷಯವನ್ನು ಹೇಳಿದಾಗ ನನ್ನನ್ನು ಕೊಹ್ಲಿಯ ದ್ವೇಷಿ ಎಂದು ಪರಿಗಣಿಸಲಾಗಿದೆ. ನನಗೆ ಕೊಲೆ ಬೆದರಿಕೆ ಕೂಡ ಬರುತ್ತಿದೆ. ಇದು ನಾಚಿಕೆಗೇಡಿನ ಸಂಗತಿ'.

'ಈ ವರ್ಷ ನಾನು ಕೊಹ್ಲಿಯ ಸ್ಲಾಗ್ ಸ್ವೀಪ್ ಶಾಟ್ ಅನ್ನು ಇಷ್ಟಪಟ್ಟೆ. ನನ್ನ ಅಭಿಪ್ರಾಯವನ್ನು ವ್ಯಕ್ತಪಡಿಸುವ ಹಕ್ಕು ನನಗಿದೆ. ನಾನು ಭಾರತಕ್ಕೆ ಬರಲು ಮತ್ತು ಇಲ್ಲಿ ಕೊಡುಗೆ ನೀಡಲು ಇಷ್ಟಪಡುತ್ತೇನೆ. ಕೊಹ್ಲಿ, ನಾನು ಹೇಳಿದ್ದು ತಪ್ಪು ಎಂದು ಸಾಬೀತುಪಡಿಸಲು ಪ್ರಯತ್ನಿಸಿದರೆ ಅದಕ್ಕಿಂತ ಉತ್ತಮವಾದ ವಿಷಯ ಯಾವುದಿದೆ ಹೇಳಿ' ಎಂದು ಸೈಮನ್ ಹೇಳಿಕೊಂಡಿದ್ದಾರೆ.

ಈ ಐವರು ದಿಗ್ಗಜ ಕ್ರಿಕೆಟಿಗರಿಗೆ ಇದು ಕೊನೆಯ ಟಿ20 ವಿಶ್ವಕಪ್..!

17ನೇ ಆವೃತ್ತಿಯ ಐಪಿಎಲ್‌ಗೆ ಅದ್ಧೂರಿ ತೆರೆಬಿದ್ದಿದೆ. ಇದೀಗ ಎಲ್ಲಾರ ಕಣ್ಣು ಜೂನ್ 2ರಿಂದ ಆರಂಭವಾಗಲಿರುವ ಟಿ20 ವಿಶ್ವಕಪ್ ಮೇಲೆ ನೆಟ್ಟಿದೆ. ಈ ಬಾರಿ ಅಮೆರಿಕ ಮತ್ತು ವೆಸ್ಟ್ ಇಂಡೀಸ್‌ನಲ್ಲಿ ಪಂದ್ಯಾವಳಿ ಆಯೋಜನೆಯಾಗುತ್ತಿದೆ. ಆದಾಗ್ಯೂ, ಟಿ20 ವಿಶ್ವಕಪ್ ನಂತರ ಈ ಸ್ವರೂಪದಿಂದ ಈ ಐವರು ದಿಗ್ಗಜ ಆಟಗಾರರು ನಿವೃತ್ತಿ ಘೋಷಿಸುವ ಸಾಧ್ಯತೆಗಳು ಹೆಚ್ಚಿವೆ.

37 ವರ್ಷದ ರೋಹಿತ್ ಶರ್ಮಾಗೆ ಇದು ಕೊನೆಯ ಟಿ20 ವಿಶ್ವಕಪ್ ಎಂದು ಹೇಳಿದರೆ ತಪ್ಪಾಗಲಾರದು. ಇದಕ್ಕೆ ಅವರ ವಯಸ್ಸು ಪ್ರಮುಖ ಕಾರಣ ಎಂದು ಹೇಳಬಹುದು. ರೋಹಿತ್ ಟಿ20 ಹೊರತುಪಡಿಸಿ ಉಳಿದೆರಡು ಸ್ವರೂಪಗಳತ್ತ ಹೆಚ್ಚು ಗಮನ ಹರಿಸುವ ಸಾಧ್ಯತೆ ಇದೆ. ಶರ್ಮಾ ಭಾರತ ಪರ ಇದುವರೆಗೆ 151 ಟಿ20 ಪಂದ್ಯಗಳಲ್ಲಿ 3974 ರನ್ ಬಾರಿಸಿದ್ದಾರೆ.

2006 ರಿಂದ ಬಾಂಗ್ಲಾದೇಶ ಪರ ಕ್ರಿಕೆಟ್ ಆಡುತ್ತಿರುವ ಅನುಭವಿ ಆಲ್ ರೌಂಡರ್ ಶಕೀಬ್ ಅಲ್ ಹಸನ್ ಕೂಡ 37 ನೇ ವರ್ಷಕ್ಕೆ ಕಾಲಿಟ್ಟಿದ್ದಾರೆ. ಹೆಚ್ಚುತ್ತಿರುವ ವಯಸ್ಸಿನ ಕಾರಣ, ಅವರು ಈ ಮಾದರಿಯಿಂದ ನಿವೃತ್ತರಾಗಬಹುದು. ಬಾಂಗ್ಲಾದೇಶ ಪರ ಆಡಿರುವ 122 ಟಿ20 ಪಂದ್ಯಗಳಲ್ಲಿ ಶಕೀಬ್ 2440 ರನ್ ಹಾಗೂ 146 ವಿಕೆಟ್ ಪಡೆದಿದ್ದಾರೆ.

ಆಸ್ಟ್ರೇಲಿಯಾದ ಲೆಜೆಂಡರಿ ಓಪನರ್ ಡೇವಿಡ್ ವಾರ್ನರ್ ಈಗಾಗಲೇ ಟೆಸ್ಟ್ ಮತ್ತು ಏಕದಿನ ಮಾದರಿಗಳಿಂದ ನಿವೃತ್ತಿಯಾಗಿದ್ದಾರೆ. 37ರ ಹರೆಯದ ವಾರ್ನರ್ ಟಿ20 ವಿಶ್ವಕಪ್ ಬಳಿಕ ಟಿ20 ಯಿಂದ ನಿವೃತ್ತಿಯಾಗುವ ಎಲ್ಲಾ ಸಾಧ್ಯತೆಗಳಿವೆ. ವಾರ್ನರ್ ಇದುವರೆಗೆ ಆಸ್ಟ್ರೇಲಿಯಾ ಪರ 103 ಟಿ20 ಪಂದ್ಯಗಳಲ್ಲಿ 3099 ರನ್ ಗಳಿಸಿದ್ದಾರೆ.

ಭಾರತ ತಂಡದ ಸ್ಟಾರ್ ಬ್ಯಾಟ್ಸ್‌ಮನ್ ವಿರಾಟ್ ಕೊಹ್ಲಿ ಟಿ20 ವಿಶ್ವಕಪ್ ನಂತರ ಕ್ರಿಕೆಟ್‌ನ ಅತ್ಯಂತ ಕಡಿಮೆ ಸ್ವರೂಪದಿಂದ ನಿವೃತ್ತರಾಗಬಹುದು. ಇದಕ್ಕೆ ಕಾರಣ ತಂಡದಲ್ಲಿ ಯುವ ಆಟಗಾರರಿಗೆ ಹೆಚ್ಚಿನ ಆದ್ಯತೆ ನೀಡುವುದು. ಇದುವರೆಗೆ ಭಾರತ ಪರ 117 ಟಿ20 ಪಂದ್ಯಗಳನ್ನಾಡಿರುವ ಕೊಹ್ಲಿ 4037 ರನ್ ಬಾರಿಸಿದ್ದಾರೆ. 36 ವರ್ಷದ ಶ್ರೀಲಂಕಾದ ಅನುಭವಿ ಆಲ್‌ರೌಂಡರ್ ಏಂಜೆಲೊ ಮ್ಯಾಥ್ಯೂಸ್ ಕೂಡ ಟಿ20 ವಿಶ್ವಕಪ್ ನಂತರ ನಿವೃತ್ತಿಯ ಬಗ್ಗೆ ಯೋಚಿಸಬಹುದು. ಈಗಾಗಲೇ ಲಂಕಾ ತಂಡದಲ್ಲಿ ಕಡಿಮೆ ಅವಕಾಶಗಳನ್ನು ಪಡೆಯುತ್ತಿರುವ ಮ್ಯಾಥ್ಯೂಸ್‌ಗೆ ಟಿ20 ಮಾದರಿಗೆ ವಿದಾಯ ಹೇಳಲು ಇದು ಸರಿಯಾದ ಸಮಯ.

ವಿರಾಟ್ ಕೊಹ್ಲಿ ಜೊತೆಗಿನ ಸಂಬಂಧ ಮೌನ ಮುರಿದ ಗೌತಮ್ ಗಂಭೀರ್

ವಿರಾಟ್ ಕೊಹ್ಲಿ ಮತ್ತು ನನ್ನ ನಡುವಣ ಸಂಬಂಧ ಏನು ಎಂಬುದು ದೇಶಕ್ಕೆ ತಿಳಿಯಬೇಕಿಲ್ಲ, ಅದು ನಮ್ಮಿಬ್ಬರ ನಡುವಣ ಸಂಬಂಧ. ಅದನ್ನು ಇಡೀ ದೇಶದ ಮುಂದೆ ತೆರೆದಿಡಬೇಕಾದ ಅಗತ್ಯತೆಯು ಇಲ್ಲ ಎಂಬುದು ನನ್ನ ಅನಿಸಿಕೆ. ಹೀಗೆ ಹೇಳಿದ್ದು ಮತ್ಯಾರೂ ಅಲ್ಲ ಕೊಲ್ಕತ್ತಾ ನೈಟ್ ರೈಡರ್ಸ್ ತಂಡದ ಮೆಂಟರ್ ಗೌತಮ್ ಗಂಭೀರ್.

ಸಂದರ್ಶನವೊಂದರಲ್ಲಿ ವಿರಾಟ್ ಕೊಹ್ಲಿ ಕುರಿತಾದ ಕೇಳಿದ ಪ್ರಶ್ನೆಗೆ ಉತ್ತರಿಸಿದ ಗಂಭೀರ್, ನನ್ನ ಮತ್ತು ಕೊಹ್ಲಿ ನಡುವೆ ಸಂಬಂಧ ಇಡೀ ದೇಶಕ್ಕೆ ತಿಳಿಯಬೇಕಿಲ್ಲ. ತಮ್ಮ ತಮ್ಮ ತಂಡಗಳನ್ನು ಗೆಲ್ಲುವಂತೆ ಮಾಡಲು ತನ್ನತನ ತೋರಿಸಲು ಇಬ್ಬರಿಗೂ ಹಕ್ಕಿದೆ. ಹೀಗಾಗಿ ಇಬ್ಬರೂ ಆಗ್ರೆಸಿವ್ ಆಗಿ ಕಾಣಿಸಿಕೊಂಡೆವು ಅಷ್ಟೇ ಎಂದು ಗಂಭೀರ್ ಹೇಳಿದ್ದಾರೆ. ನಮ್ಮಿಬ್ಬರ ಸಂಬಂಧವು ನಿಮ್ಮೆಲ್ಲರ ಗ್ರಹಿಕೆಯ ವಾಸ್ತವದಿಂದ ತುಂಬಾ ದೂರವಿದೆ.

ವಿರಾಟ್ ಕೊಹ್ಲಿಯೊಂದಿಗಿನ ನನ್ನ ಸಂಬಂಧಕ್ಕೆ ಸಾರ್ವಜನಿಕರು ಮಸಾಲಾ ಸೇರಿಸಿದರು. ಹಲವು ಸುದ್ದಿಗಳು ಸೃಷ್ಟಿಯಾದವು. ಆದರೆ ನಾವಿಬ್ಬರೂ ಹಾಗೆ ಇಲ್ಲ ಎಂದು ಗೌತಮ್ ಗಂಭೀರ್ ಹೇಳಿದ್ದಾರೆ.

ಈ ಬಾರಿಯ ಐಪಿಎಲ್‌ನಲ್ಲಿ ಆರ್‌ಸಿಬಿ-ಕೆಕೆಆರ್ ನಡುವಣ ಪಂದ್ಯವು ವಿರಾಟ್ ಕೊಹ್ಲಿ ಹಾಗೂ ಗೌತಮ್ ಗಂಭೀರ್ ಕಾರಣದಿಂದ ಕುತೂಹಲದ ಕೇಂದ್ರವಾಗಿತ್ತು. ಆದರೆ ಪಂದ್ಯದ ನಡುವೆ ಗೌತಮ್ ಗಂಭೀರ್ ವಿರಾಟ್ ಕೊಹ್ಲಿಯನ್ನು ತಬ್ಬಿಕೊಂಡಿದ್ದರು. ಅಲ್ಲದೆ ಇದಾದ ಬಳಿಕ ಕೊಲ್ಕತ್ತಾದಲ್ಲಿ ನಡೆದ ಪಂದ್ಯದ ವೇಳೆ ಗಂಭೀರ್ ಮತ್ತು ಕೊಹ್ಲಿ ಜೊತೆಯಾಗಿ ಹರಟೆ ಹೊಡೆಯುತ್ತಿರುವುದು ಕೂಡ ಕಂಡು ಬಂತು.

ಈ ಎಲ್ಲಾ ಕಾರಣಗಳಿಂದಾಗಿಯೇ ಗೌತಮ್ ಗಂಭೀರ್, ನಿಮ್ಮ ಗ್ರಹಿಕೆಗಿಂತಲೂ ನಾನು ಮತ್ತು ವಿರಾಟ್ ಕೊಹ್ಲಿ ಉತ್ತಮ ಸಂಬಂಧ ಹೊಂದಿದ್ದೇವೆ ಎಂದು ತಿಳಿಸಿದ್ದಾರೆ.

ಇದನ್ನು ಪುಷ್ಟೀಕರಿಸುವಂತೆ ಈ ಬಾರಿಯ ಐಪಿಎಲ್‌ನಲ್ಲೂ ದೆಹಲಿಯ ಇಬ್ಬರು ಕ್ರಿಕೆಟಿಗರು ತುಂಬಾ ಅನೋನ್ಯವಾಗಿ ಕಾಣಿಸಿಕೊಂಡಿದ್ದರು. ಇದೀಗ ಕೆಕೆಆರ್ ತಂಡವನ್ನು ಚಾಂಪಿಯನ್ ಪಟ್ಟಕ್ಕೇರಿಸಿರುವ ಗೌತಮ್ ಗಂಭೀರ್ ಶ್ರೀಘ್ರದಲ್ಲೇ ಟೀಮ್ ಇಂಡಿಯಾದ ಕೋಚ್ ಆಗಿ ಕಾಣಿಸಿಕೊಳ್ಳಲಿದ್ದಾರೆ ಎಂದು ವರದಿಯಾಗಿದೆ. ಅದರಂತೆ ಗಂಭೀರ್-ಕೊಹ್ಲಿ ಜಗಲ್‌ಬಂಧಿಯಲ್ಲಿ ಭಾರತ ತಂಡವು ಹೇಗೆ ಪ್ರದರ್ಶನ ನೀಡಲಿದೆ ಎಂಬುದನ್ನು ಕಾದು ನೋಡಬೇಕಿದೆ.

ಕೊಹ್ಲಿ ಗಂಭೀರ್ ನಡುವೆ ಏನಿಲ್ಲ ಏನಿಲ್ಲ

ಆರ್‌ಸಿಬಿ ಕಪ್ ಗೆದ್ದೋರ ಥರ ಆಡಿದ್ರು

ಹದಿನೈದು ಮ್ಯಾಚ್‌ಗಳಲ್ಲಿ ಆರ್‌ಸಿಬಿ ಗೆದ್ದಿರುವುದು ಕೇವಲ 7 ಪಂದ್ಯಗಳಲ್ಲಿ ಮಾತ್ರ. ಇದಾಗ್ಯೂ ಸಿಎಸ್‌ಕೆ ತಂಡವನ್ನು ಹಿಂದಿಕ್ಕಿ ಪ್ಲೇಆಫ್ ಪ್ರವೇಶಿಸುವಲ್ಲಿ ಯಶಸ್ವಿಯಾಗಿತ್ತು. ಆದರೆ ಎಲಿಮಿನೇಟರ್ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ತಂಡದ ವಿರುದ್ಧ ಸೋಲನುಭವಿಸಿತು. ಐಪಿಎಲ್ ಸೀಸನ್ 17 ಮುಕ್ತಾಯವಾಗಿದೆ. ಇದಾಗ್ಯೂ ಚೆನ್ನೈ ಸೂಪರ್ ಕಿಂಗ್ಸ್ ತಂಡದ ಮಾಜಿ ಆಟಗಾರ ಅಂಬಾಟಿ ರಾಯುಡು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಟಾರ್ಗೆಟ್ ಮಾಡುತ್ತಿರುವುದು ಮಾತ್ರ ನಿಂತಿಲ್ಲ.

ಈ ಹಿಂದೆ ಹಲವು ಹೇಳಿಕೆಗಳ ಮೂಲಕ ಗಮನ ಸೆಳೆದಿದ್ದ ರಾಯುಡು ಇದೀಗ ಆರ್‌ಸಿಬಿ ತಂಡದ ಸಂಭ್ರಮವನ್ನು ವ್ಯಂಗ್ಯವಾಡಿದ್ದಾರೆ. ಮೇ 19 ರಂದು ನಡೆದ ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧದ ನಿರ್ಣಾಯಕ ಪಂದ್ಯದಲ್ಲಿ ಆರ್‌ಸಿಬಿ ತಂಡ 27 ರನ್‌ಗಳ ಜಯ ಸಾಧಿಸಿತ್ತು. ಈ ಗೆಲುವಿನ ಬಳಿಕ ಆರ್‌ಸಿಬಿ ಆಟಗಾರರು ಸಖತ್ತಾಗೇ ಸಂಭ್ರಮಿಸಿದ್ದರು. ಚಾನೆಲ್ ಚರ್ಚೆಯೊಂದರಲ್ಲಿ ಈ ಸಂಭ್ರಮವನ್ನು ವ್ಯಂಗ್ಯವಾಡಿ ಮಾತನಾಡಿದ ರಾಯುಡು, ಆ ಪಂದ್ಯದ ಬಳಿಕ ಮಹೇಂದ್ರ ಸಿಂಗ್ ಧೋನಿ ಶೇಕ್ ಹ್ಯಾಂಡ್ ಮಾಡಲು ಕಾಯುತ್ತಿದ್ದರು. ಆದರೆ ಆರ್‌ಸಿಬಿ ಆಟಗಾರರ ಸಂಭ್ರಮ ನೋಡಿದ್ರೆ ಕಪ್ ಗೆದ್ದವರ ಥರ ಆಡುತ್ತಿದ್ದರು ಎಂದು ವ್ಯಂಗ್ಯವಾಡಿದ್ದಾರೆ. ಕೇವಲ ಒಂದು ಪಂದ್ಯ ಗೆಲ್ಲುವಷ್ಟರಲ್ಲಿ ಕಪ್ ಗೆದ್ದಂತೆ ಆಡಿದ್ರೆ ಹೆಂಗೆ, ನೀವು ಮೊದಲು ಧೋನಿಗೆ ಶೇಕ್ ಹ್ಯಾಂಡ್ ಮಾಡ್ಬೇಕಿತ್ತು. ಅದು ನೀವು ತೋರಿಸಬೇಕಾಗಿದ್ದ ಗೌರವ. ಆದರೆ ಆರ್‌ಸಿಬಿ ಆಟಗಾರರು ಪಂದ್ಯ ಗೆಲ್ಲುತ್ತಿದ್ದಂತೆ ಒಳ್ಳೆ ಕಪ್ ಗದ್ದೋರ ಥರ ಆಡ್ತಿದ್ದರು ಎಂದು ರಾಯುಡು ಕಿಚಾಯಿಸಿದ್ದಾರೆ.

ಐವತ್ತರ ಸಂಭ್ರಮದಲ್ಲಿ ಕೆರೆಬೇಟೆ

ಗೌರಿಶಂಕರ್ ನಾಯಕನಾಗಿ ನಟಿಸಿದ್ದ ಕೆರೆಬೇಟೆ ಚಿತ್ರಕ್ಕೆ ಎದುರಾಗಿದ್ದ ಸಂಕಷ್ಟಗಳು ಒಂದೆರಡಲ್ಲ. ಇಲ್ಲಿ ನೋಡಿದವರಿಗೆಲ್ಲ ಇಷ್ಟವಾದ ಚಿತ್ರವೊಂದನ್ನು ಉಳಿಸಿಕೊಳ್ಳುವುದು ಅದೆಷ್ಟು ಕಷ್ಟ ಎಂಬುದಕ್ಕೆ ಈ ಸಿನಿಮಾ ಕಣ್ಣೆದುರಿನ ಉದಾಹರಣೆ. ಬಹುಶಃ ಬೇರೆ ಯಾರೇ ಆಗಿದ್ದರೂ ಕೆರೆಬೇಟೆ ಬಿಡುಗಡೆಗೊಂಡ ಎರಡನೇ ವಾರದ ಹೊತ್ತಿಗೆಲ್ಲ ಕಣ್ಮರೆಯಾಗುತ್ತಿತ್ತು. ಆದರೆ ನಾಯಕ ನಟ ಗೌರಿಶಂಕರ್, ನಿರ್ಮಾಪಕ ಜೈಶಂಕರ್ ಹಾಗೂ ನಿರ್ದೇಶಕ ರಾಜ್ ಗುರು ಅವಿರತವಾಗಿ ಪ್ರಯತ್ನಿಸಿದ್ದಾರೆ. ಜಿದ್ದಿಗೆ ಬಿದ್ದಂತೆ ಪ್ರೇಕ್ಷಕರನ್ನು ತಲುಪುತ್ತಾ, ಸಿನಿಮಾ ಮಂದಿರಗಳಲ್ಲಿ ಉಳಿದುಕೊಳ್ಳುವ ಪ್ರಯತ್ನ ಮಾಡಿದ್ದಾರೆ. ಅದರ ಫಲವಾಗಿಯೇ ಇದೀಗ ಕೆರೆಬೇಟೆ ಯಶಸ್ವಿಯಾಗಿ 50 ದಿನಗಳನ್ನು ಪೂರೈಸಿಕೊಂಡಿದೆ. ಒಂದು ಅಚ್ಚುಕಟ್ಟಾದ ಕಾರ್ಯಕ್ರಮದ ಮೂಲಕ ಐವತ್ತು ದಿನ ದಾಟಿದ ಖುಷಿಯನ್ನು ಚಿತ್ರತಂಡ ಹಂಚಿಕೊಂಡಿದೆ. ಈ ಸಂದರ್ಭದಲ್ಲಿ ಸಿನಿಮಾ ಭಾಗವಾಗಿ ಕಾರ್ಯನಿರ್ವಹಿಸಿದವರಿಗೆಲ್ಲ ನೆನಪಿನ ಕಾಣಿಕೆ ಕೊಡುವ ಮೂಲಕ ಅರ್ಥವತ್ತಾದ ನಡೆ ಅನುಸರಿಸಲಾಗಿದೆ. ಇದೇ ವೇದಿಕೆಯಲ್ಲಿ ಗೌರಿಶಂಕರ್ ಮಹತ್ವದ ಘೋಷಣೆ ಮಾಡಿದ್ದಾರೆ. ಇನ್ನು ಮೂರು ವರ್ಷಗಳ ಕಾಲ ತಮ್ಮ ಬ್ಯಾನರಿನಲ್ಲಿ ಸಿನಿಮಾ ನಿರ್ಮಾಣ ಮಾಡುವುದಿಲ್ಲ ಅಂದಿದ್ದಾರೆ. ಈ ಅವಧಿಯಲ್ಲಿ ಒಳ್ಳೆ ನಿರ್ದೇಶನ, ಕಥೆ, ಒಂದೊಳ್ಳೆ ಬ್ಯಾನರ್ ಸಿಕ್ಕರೆ ನಾಯಕ ನಟನಾಗಿ ಮುಂದುವರೆಯುವುದಾಗಿ ಹೇಳಿಕೊಂಡಿದ್ದಾರೆ. ತಮ್ಮದೇ ನಿರ್ಮಾಣ ಸಂಸ್ಥೆಯಲ್ಲಿ ರಾಜ ಹಂಸದಿಂದ ಇಲ್ಲೀವರೆಗೆ ಅವರು ಸಾಕಷ್ಟು ಸವಾಲುಗಳನ್ನು ಎದುರಿಸಿದ್ದಾರೆ.

ಇನ್ನು ಮೂರು ವರ್ಷಗಳ ಕಾಲ ತಮ್ಮಾಸೆಯಂತೆ ನಟನಾಗಿ ಮುಂದುವರೆಯಲು ಅವರು ತೀರ್ಮಾನಿಸಿದ್ದಾರೆ. ಈ ಐವತ್ತು ದಿನಗಳ ಮೈಲಿಗಲ್ಲು ತಲುಪಿಕೊಂಡ ಯಾನ ಸಾಮಾನ್ಯದ್ದೇನಲ್ಲ. ಗೌರಿಶಂಕರ್ ಕೆರೆಬೇಟೆಯನ್ನು ಸೋಲಲು ಬಿಡದಂತೆ ಶಕ್ತಿ ಮೀರಿ ಶ್ರಮಿಸಿದ್ದರು. ಅವರ ಒಂದೊಂದು ಪಟ್ಟುಗಳೂ ಕೂಡಾ ಪ್ರೇಕ್ಷಕರನ್ನು ಮುಟ್ಟಿ ಮೋಡಿ ಮಾಡಿದ್ದು ಸತ್ಯ.

ನೆಲದ ಘಮಲಿನ ಕಥೆಗೆ ಜೈ ಹೋ

ಇಂಡಿಯನ್-2 ಸಾಂಗ್ ರಿಲೀಸ್

ಉಳಗನಾಯಗನ್ ಕಮಲ್ ಹಾಸನ್ ನಟನೆಯ ಬಹುನಿರೀಕ್ಷಿತ ಸಿನಿಮಾ ಇಂಡಿಯನ್ 2 ಜುಲೈ 12 ಕ್ಕೆ ವಿಶ್ವದಾದ್ಯಂತ ಬಿಡುಗಡೆಯಾಗಲಿದೆ. ಈಗಾಗಲೇ ಟೀಸರ್ ಹಾಗೂ ಸೌರಾ ಹಾಡಿನ ಮೂಲಕ ಪ್ರೇಕ್ಷಕರಲ್ಲಿ ಕುತೂಹಲ ಹುಟ್ಟಿಸಿರುವ ಈ ಚಿತ್ರದ ಎರಡನೇ ಹಾಡು ಅನಾವರಣಗೊಂಡಿದೆ. ತೆಲುಗು, ತಮಿಳು ಹಾಗೂ ಹಿಂದಿ ಭಾಷೆಯಲ್ಲಿ ಮೆಲೋಡಿ ನಂಬರ್ ರಿಲೀಸ್ ಆಗಿದೆ. ಬೊಮ್ಮರಿಲ್ಲು ಸಿದ್ಧಾರ್ಥ್ ಹಾಗೂ ರಾಕುಲ್ ಪ್ರೀತ್ ಸಿಂಗ್ ನಡುವಿನ ಪ್ರೇಮಗೀತೆಗೆ ಮೆಚ್ಚುಗೆ ವ್ಯಕ್ತವಾಗುತ್ತಿದೆ. ರಾಮ ಜೋಗಯ್ಯ ಶಾಸ್ತ್ರಿ ತೆಲುಗು ವರ್ಷನ್ ಹಾಡಿಗೆ ಸಾಹಿತ್ಯ ಬರೆದಿದ್ದು, ತಾಮರೈ ತಮಿಳು ವರ್ಷನ್‌ಗೆ ಪದ ಗೀಚಿದ್ದಾರೆ. ಅನಿರುದ್ಧ ರವಿಚಂದರ್ ಹಾಡಿಗೆ ಸಂಗೀತ ನಿರ್ದೇಶನ ಮಾಡಿದ್ದಾರೆ. 1996ರಲ್ಲಿ 'ಇಂಡಿಯನ್' ಸಿನಿಮಾ ಬಿಡುಗಡೆಯಾಗಿ ಸೂಪರ್ ಹಿಟ್ ಆಗಿತ್ತು. ಸೇನಾಪತಿ ಎಂಬ ಪಾತ್ರದಲ್ಲಿ ಕಮಲ್ ಹಾಸನ್ ಅವರು ಮಿಂಚಿದ್ದರು. ಅದರ ಮುಂದುವರಿದ ಭಾಗವಾಗಿ 'ಇಂಡಿಯನ್ 2' ಸಿನಿಮಾ ಮೂಡಿಬರುತ್ತಿದೆ. ಇದು ಪ್ಯಾನ್ ಇಂಡಿಯಾ ಸಿನಿಮಾ. ಕಮಲ್ ಹಾಸನ್ ಹಿರಿಯ ಸ್ವಾತಂತ್ರ್ಯ ಹೋರಾಟಗಾರನ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಭ್ರಷ್ಟಾಚಾರದ ವಿರುದ್ಧ ಹೋರಾಡುವ ಕಥೆ ಈ ಸಿನಿಮಾದಲ್ಲಿದ್ದು, ಕಮಲ್ ಹಾಸನ್ ಮತ್ತದೇ ಅವತಾರದಲ್ಲಿ ನೋಡಬಹುದಾಗಿದೆ.

ಕಮಲ್ ಹಾಸನ್ ಜೊತೆಯಲ್ಲಿ ಸಿದ್ಧಾರ್ಥ್, ಎಸ್ ಜೆ ಸೂರ್ಯ, ಕಾಜಲ್ ಅಗರ್ವಾಲ್, ರಾಕುಲ್ ಪ್ರೀತ್ ಸಿಂಗ್, ಪ್ರಿಯಾ ಭವಾನಿ ಶಂಕರ್, ಕಾಳಿದಾಸ್ ಜಯರಾಂ, ಗುಲ್ಶನ್ ಗ್ರೋವರ್, ನೆಡುಮುಡಿ ವೇಣು, ವಿವೇಕ್, ಸಮುದ್ರ